


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 254 ₹ ಬೆಲೆ: 4 Saturday, 02, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23


## ಟೀಕಿಸುತ್ತಿದ್ದ ಬಿಜೆಪಿಯೇ ಗ್ಯಾರಂಟಿ ಘೋಷಣೆ ಮಾಡ್ತಿದೆ: ಗೃಹ ಸಚಿವ ಜಿ. ಪರಮೇಶ್ವರ್



ಬೆಂಗಳೂರು: ಬಿಜೆಪಿ ನಮ್ಮನ್ನು ಟೀಕೆ ಮಾಡುತ್ತಿತ್ತು. ಈಗ ಬಿಜೆಪಿಯೂ ಗ್ಯಾರಂಟಿ ಘೋಷಣೆ ಮಾಡುತ್ತಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ವಾಗ್ದಾಳಿ ನಡೆಸಿದ್ದಾರೆ.

ಪಂಚರಾಜ್ಯಗಳ ಎಕ್ಸಿಟ್ ಪೋಲ್ ಬಗ್ಗೆ ಪ್ರತಿಕ್ರಿಯಿಸಿದ ಅವರು, ನಾಲ್ಕು ರಾಜ್ಯಗಳಲ್ಲಿ ನಾವು ಅಧಿಕಾರಕ್ಕೆ ಬರುವ ನಿರೀಕ್ಷೆಯಲ್ಲಿ ಕೆಲಸ ಮಾಡಿದ್ದೇವೆ. ಸಾಮಾನ್ಯ ಜನರಿಗೆ ಬಿಜೆಪಿಯಿಂದ ಯಾವುದೇ ನೆರವು ಸಿಕ್ಕಿಲ್ಲ. ಈ ರಾಜ್ಯಗಳ ಜನರ ಭರವಸೆ ನಮಗೆ ಮತ್ತೆ ಸಿಗುವ ನಿರೀಕ್ಷೆ ಇದೆ. ನಾವು ನಾಲ್ಕೂ ಕಡೆ ಗೆಲ್ಲುವ ಭರವಸೆ ಇದೆ. ಗ್ರಾಮೀಣ ಭಾಗದಲ್ಲಿ, ಸಾಮಾನ್ಯ ಜನರಿಗೆ ಅನುಕೂಲ ಆಗಲು ಗ್ಯಾರಂಟಿ ತಂದೆವು ಎಂದರು.

ರಾಷ್ಟ್ರೀಯ ಮಟ್ಟದಲ್ಲಿ ಪ್ರಧಾನಿಯವರೇ ಗ್ಯಾರಂಟಿ ಘೋಷಣೆ ಮಾಡಿದ್ದಾರೆ. ಆದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಗೆ ಯಶಸ್ಸು ಸಿಕ್ಕ ನಂತರ ಈಗ ಪಂಚರಾಜ್ಯಗಳಲ್ಲೂ ಯಶಸ್ಸು ಸಿಕ್ಕಿದೆ. ಪಂಚರಾಜ್ಯಗಳಲ್ಲಿ ಈ ಹಿಂದೆ ನಮಗೆ ಜನರ ಒಲವು ಅಷ್ಟಾಗಿ ಇರಲಿಲ್ಲ. ಈಗ ಮತ್ತೆ ನಾವು ಜನರ ವಿಶ್ವಾಸ ಗಳಿಸಿದ್ದೇವೆ. ಇನ್ಮುಂದೆ ಲೋಕಸಭೆ ಚುನಾವಣೆಯಲ್ಲೂ ಗ್ಯಾರಂಟಿಗಳ ಘೋಷಣೆ ಹೆಚ್ಚಾಗಲಿದೆ ಎಂದು ಹೇಳಿದರು.

## ಝೀರೋ ಟ್ರಾಫಿಕ್‌ನಲ್ಲಿ ಬಂದ ಮಗುವಿಗೆ ಚಿಕಿತ್ಸೆ ನೀಡದ ವೈದ್ಯರು; ನಿಮ್ಹಾನ್ಸ್ ವಿರುದ್ಧ ಭುಗಿಲೆದ್ದ ಪ್ರತಿಭಟನೆ

ಬೆಂಗಳೂರು: ಹಾಸನದಿಂದ ಬೆಂಗಳೂರಿಗೆ ಝೀರೋ ಟ್ರಾಫಿಕ್ನಲ್ಲಿ ಬಂದರೂ ನಿಮ್ಹಾನ್ಸ್ ಆಸ್ಪತ್ರೆಯಲ್ಲಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡದ ಕಾರಣ ಒಂದೂವರೆ ವರ್ಷದ ಮಗು ಮೃತಪಟ್ಟ ಘಟನೆ ಬೆನ್ನಲ್ಲೇ ಮಗುವಿನ ಪೋಷಕರು ಹಾಗೂ ಆ್ಯಂಬುಲೆನ್ಸ್ ಚಾಲಕರು ನಿಮ್ಹಾನ್ಸ್ ಆಸ್ಪತ್ರೆ ಎದುರು ಗುರುವಾರ ಪ್ರತಿಭಟನೆ ನಡೆಸಿದರು.

ಶವ ಪರೀಕ್ಷೆಯ ನಂತರ ಮಗುವಿನ ಮೃತದೇಹ ಪಡೆಯಲು ಪೋಷಕರು 24 ಗಂಟೆಗಳಿಗೂ ಹೆಚ್ಚು ಕಾಲ ಕಾಯುವಂತ ಮಾಡಲಾಗಿತ್ತು. ಈ ಹಿನ್ನೆಲೆಯಲ್ಲಿ ಪ್ರತಿಭಟನೆ ಸಂಜೆಯವರೆಗೂ ನಡೆಯಿತು.

ಆಸ್ಪತ್ರೆಯ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಹಾಗೂ ಪರಿಹಾರ ನೀಡುವಂತೆ ಒತ್ತಾಯಿಸಿ ಮೃತದೇಹವನ್ನು ಮುಂದಿಟ್ಟುಕೊಂಡ ಪೋಷಕರು ಹಾಗೂ ಆ್ಯಂಬುಲೆನ್ಸ್ ಚಾಲಕರು ತುರ್ತು ಚಿಕಿತ್ಸಾ ವಿಭಾಗದ ಹೊರಗೆ ಪ್ರತಿಭಟನೆ ನಡೆಸಿದರು.

ಈ ವೇಳೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಿದ್ದರೆ ಮಗುವನ್ನು ರಕ್ಷಿಸಬಹುದಿತ್ತು ಎಂದು ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ವೈದ್ಯಕೀಯ ಸಿಬ್ಬಂದಿಗೆ ಕನ್ನಡ ತಿಳಿದಿಲ್ಲ ಮತ್ತು ಹಿಂದಿ ಮತ್ತು ಇಂಗ್ಲಿಷ್ ಭಾಷೆಯಲ್ಲಿ ಮಾತ್ರ ಪ್ರಾವೀಣ್ಯತೆ ಹೊಂದಿದ್ದಾರೆ. ಹೀಗಾಗಿ ಮಗುವಿನ ಸ್ಥಿತಿ ಬಗ್ಗೆ ವೈದ್ಯರ ಬಳಿ ಮಾತುಕತೆ ನಡೆಸಲು ಸಾಧ್ಯವಾಗಲಿಲ್ಲ. ಮಗುವಿನ ಪೋಷಕರಿಗೆ ಸರ್ಕಾರ 1 ಕೋಟಿ ರೂಪಾಯಿ ಪರಿಹಾರ



ನೀಡಬೇಕು. ಸಚಿವರು ಮತ್ತು ಸ್ಥಳೀಯ ಶಾಸಕರು ಭೇಟಿ ನೀಡಿ ಅವರ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಈ ವೇಳೆ ಮಧ್ಯಪ್ರವೇಶಿಸಿದ ಪೊಲೀಸರು, ಫ್ರೀಡಂ ಪಾರ್ಕ್‌ನಲ್ಲಿ ಮಾತ್ರ ಪ್ರತಿಭಟನೆಗೆ ಅವಕಾಶವಿದೆ ಎಂದು ಹೇಳಿ, ಮಗುವಿನ ಶವವನ್ನು ತೆಗೆದುಕೊಂಡು ಹೋಗುವಂತೆ ಒತ್ತಾಯಿಸಿದರು.

ಇತರ ರೋಗಿಗಳಿಗೆ ಮತ್ತು ವಾಹನಗಳಿಗೆ ಅನಾನುಕೂಲತೆಯಾಗುತ್ತಿದ್ದು, ಪ್ರತಿಭಟನೆ ಕೈಬಿಡುವಂತೆ ಸಿದ್ದಾಪುರ ಪೊಲೀಸರು ಮನವಿ ಮಾಡಿಕೊಂಡರು. ಈ ವೇಳೆ ಪ್ರತಿಭಟನಾಕಾರರು ನಾವು ಪ್ರತಿಭಟನೆ ನಡೆಸುತ್ತಿಲ್ಲ. ನಿಮ್ಹಾನ್ಸ್ ನಿರ್ಲಕ್ಷ್ಯದ ವಿರುದ್ಧ ಮಾತ್ರ ಮಾತನಾಡುತ್ತಿದ್ದೇವೆಂದು ತಿಳಿಸಿದರು.

ನಿಮ್ಹಾನ್ಸ್‌ನ ವೈದ್ಯರು ನಗರದ ಹೊರಗಿನಿಂದ ಬರುವ ರೋಗಿಗಳಿಗೆ ಚಿಕಿತ್ಸೆ ನೀಡುವುದಿಲ್ಲ. ರೋಗಿಗಳನ್ನು ಬೇರೆ ಆಸ್ಪತ್ರೆಗೆ ಕಳುಹಿಸುತ್ತಾರೆ. ಆಂಬ್ಯುಲೆನ್ಸ್ ಅನ್ನು ಆಸ್ಪತ್ರೆಯ ಆವರಣಕ್ಕೆ ಪ್ರವೇಶಿಸಲು ಕೂಡ ಅನುಮತಿ ನೀಡುವುದಿಲ್ಲ ಎಂದು ಆರೋಪಿಸಿದರು. ಅಲ್ಲದೆ, ನಿಮ್ಹಾನ್ಸ್ ವಿರುದ್ಧ ಸ್ವಯಂಪ್ರೇರಿತ ಪ್ರಕರಣವನ್ನು ದಾಖಲಿಸಿಕೊಳ್ಳುವಂತೆ ಆಗ್ರಹಿಸಿದರು.

ಬಳಿಕ ಪೊಲೀಸರು ತಮ್ಮ ಮಿತಿಗಳನ್ನು ವಿವರಿಸಿ, ಕರ್ನಾಟಕ ವೈದ್ಯಕೀಯ ಮಂಡಳಿಗೆ (ಕೆಎಂಸಿ) ಮನವಿ ಪತ್ರ ಸಲ್ಲಿಸುವಂತೆ ಸಲಹೆ ನೀಡಿದರು.

ಘಟನೆ ಕುರಿತು ಪ್ರತಿಕ್ರಿಯೆ ನೀಡಿರುವ ನಿಮ್ಹಾನ್ಸ್ ಆಸ್ಪತ್ರೆಯ ಅಧಿಕಾರಿಗಳು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಿಂದ (ಹಿಮ್ಸ್) ನಮಗೆ ಯಾವುದೇ ಮಾಹಿತಿಗಳೂ ಬಂದಿರಲಿಲ್ಲ. ಮಗುವನ್ನು ಝೀರೋ ಟ್ರಾಫಿಕ್ ಮೂಲಕ ಕರೆದುಕೊಂಡು ಬರಲಾಗುತ್ತಿದೆ ಎಂದು ಪೊಲೀಸರೂ ಕೂಡ ಮಾಹಿತಿ ನೀಡಿರಲಿಲ್ಲ. ಆಂಬ್ಯುಲೆನ್ಸ್ ಚಾಲಕನ ಸಹೋದ್ಯೋಗಿ ಮಗುವಿನ ಆಗಮನಕ್ಕೆ ಕೇವಲ ಒಂದು ಗಂಟೆ ಮೊದಲು ಮಾಹಿತಿ ನೀಡಿದ್ದರು ಎಂದು ಹೇಳಿದ್ದಾರೆ. ಇದೇ ವೇಳೆ ಚಿಕಿತ್ಸೆ ನೀಡಲು 90 ನಿಮಿಷ ತಡ ಮಾಡಲಾಗಿತ್ತು ಎಂಬ ಆರೋಪವನ್ನೂ ಅಧಿಕಾರಿಗಳು ತಳ್ಳಿಹಾಕಿದ್ದಾರೆ. ಮಗುವಿನ ಪೋಷಕರು 10 ನಿಮಿಷಗಳ ಕಾಲವಷ್ಟೇ ಕಾದಿದ್ದರು. ಮಗು ಬಂದ 10 ನಿಮಿಷಗಳಲ್ಲೇ ಅಗತ್ಯ ಕಾರ್ಯವಿಧಾನಗಳನ್ನು ಪ್ರಾರಂಭಿಸಲಾಗಿತ್ತು. ಮೆದುಳಿನ ಸಿಟಿ ಸ್ಕ್ಯಾನ್ ಮಾಡಲಾಗಿತ್ತು. ಮಗುವಿನ ಸ್ಥಿತಿ ಬಗ್ಗೆ ಪೋಷಕರಿಗೆ ವಿವರಿಸಲಾಗಿತ್ತು ಎಂದು ಹೇಳಿದ್ದಾರೆ.

## ಹೈಕಮಾಂಡ್ ಸೂಚಿಸಿದರೆ ಪುನಃ ಟ್ರಬಲ್ ಶೂಟರ್ ಆಗಲು ಸಿದ್ಧ: ಡಿಕೆಶಿ



ಬೆಂಗಳೂರು: ಡಿ.ಕೆ. ಶಿವಕುಮಾರ್ ಅವರನ್ನು ಟ್ರಬಲ್ ಶೂಟರ್ ಅಂತ ಕರೆಯುತ್ತಾರೆ. ಸರ್ಕಾರ ಅಥವಾ ಪಕ್ಷ ಸಂಕಷ್ಟದಲ್ಲಿದ್ದಾಗ, ಪಾರುಮಾಡುವ ಹೊಣೆಗಾರಿಕೆಯನ್ನು ಅವರಿಗೆ ವಹಿಸಲಾಗುತ್ತದೆ.

ಐದು ರಾಜ್ಯಗಳ ಫಲಿತಾಂಶ ಪ್ರಕಟವಾದ ಬಳಿಕ ಕಾಂಗ್ರೆಸ್ ಶಾಸಕರನ್ನು ಸೆಳೆಯುವ ಪಯತ್ನ ನಡೆದಲ್ಲಿ ಮತ್ತು ಅದನ್ನು ತಡೆಯಲು ಪಕ್ಷದ ಹೈಕಮಾಂಡ್ ತನಗೆ ಜವಾಬ್ದಾರಿ ವಹಿಸಿದಲ್ಲಿ ನಿಭಾಯಿಸುವುದಾಗಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ನಗರದಲ್ಲಿಂದು ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಎಕ್ಸಿಟ್ ಪೋಲ್ ಗಳ ಬಗ್ಗೆ ತನಗೆ ಬೇರೆ ಅಭಿಪ್ರಾಯವಿದೆ.

ಐದ್ದತ್ತು ಸಾವಿರ ಜನರನ್ನು ಮಾತಾಡಿಸಿ ಚುನಾವಣಾ ಫಲಿತಾಂಶಗಳನ್ನು ಹೇಳಲಾಗದು ಎಂದರು. ಕರ್ನಾಟಕದಲ್ಲಿ ವಿಧಾನಸಭಾ ಚುನಾವಣೆ ನಡೆದಾಗ ತಾವು ಮಾಡಿಸಿದ ಸಮೀಕ್ಷೆಯಲ್ಲಿ ಪ್ರತಿ ಕ್ಷೇತ್ರದಿಂದ ಒಂದೊಂದು ಲಕ್ಷ ಜನರನ್ನು ಮಾತಾಡಿಸಿ ಅಭಿಪ್ರಾಯ ಸಂಗ್ರಹಿಸಲಾಗಿತ್ತು ಎಂದ ಅವರು, ಎಲ್ಲ ಐದು ರಾಜ್ಯಗಳಲ್ಲಿ ಕಾಂಗ್ರೆಸ್ ಪಕ್ಷವೇ ಗೆಲ್ಲಲಿ ಅಂತ ಆಶಿಸುವುದಾಗಿ ಹೇಳಿದರು.

## ಶೀಘ್ರದಲ್ಲೇ ಬೆಂಗಳೂರಿನಲ್ಲಿ ತಲೆ ಎತ್ತಲಿದೆ ದೇಶದ ಮೊದಲ ಬಿದಿರಿನ 'ಪ್ರವಾಸಿ ಸೌಧ'

ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಶೀಘ್ರದಲ್ಲೇ ದೇಶದ ಮೊದಲ ಬಿದಿರಿನ ಪ್ರವಾಸಿ ಸೌಧವೊಂದು ತಲೆ ಎತ್ತಲಿದ್ದು, ಕಟ್ಟಣ ನಿರ್ಮಾಣಕ್ಕೆ ಮುಖ್ಯಮಂತ್ರಿಗಳು ಒಂದು ವರ್ಷದ ಗಡುವು ನಿಗದಿಪಡಿಸಿದ್ದಾರೆ.

ನಗರದ ಹಲಸೂರು ಕೆರೆ ಸಮೀಪದಲ್ಲಿ ಬಿದಿರಿನ ಪ್ರವಾಸಿ ಸೌಧ ನಿರ್ಮಾಣವಾಗುತ್ತಿತ್ತು, ಕಟ್ಟಡ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಶಂಕು ಸ್ಥಾಪನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಗೋವಿಂದರಾಜ್, ಶಾಸಕ ರಿಜ್ವಾನ್ ಅರ್ಷದ್, ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

18 ಕೋಟಿ ವೆಚ್ಚದಲ್ಲಿ ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ಸ್‌ನಿಂದ



ಕಟ್ಟಡ ನಿರ್ಮಾಣವಾಗುತ್ತಿದೆ. ಕಟ್ಟಡ ನಿರ್ಮಾಣ ಪೂರ್ಣಗೊಂಡ ನಂತರ ರಾಜ್ಯ ಸರ್ಕಾರ ಹಾಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರವಾಸೋದ್ಯಮ ಇಲಾಖೆಯ ಎಲ್ಲಾ ಅಧೀನದ ಎಲ್ಲಾ ಕಚೇರಿಗಳನ್ನು ಒಂದೇ ಸೂರಿನಡಿ ತಂದು ಕಾರ್ಯ ನಿರ್ವಹಿಸುವಂತೆ ಮಾಡಲಿದೆ.

ಕಟ್ಟಡಕ್ಕೆ ಶಂಕು ಸ್ಥಾಪನೆ ನೆರವೇರಿಸಿದ ಬಳಿಕ ಮಾತನಾಡಿದ ಸಿದ್ದರಾಮಯ್ಯ ಅವರು, ಇಂತಹ ಕಟ್ಟಡ ನಿರ್ಮಾಣವಾಗುತ್ತಿರುವುದು ಇದೇ ಮೊದಲು. ನಿರ್ಮಾಣ ಕಾರ್ಯ ಪೂರ್ಣಗೊಳ್ಳಲು ಒಂದು ವರ್ಷ ಗಡುವು ನಿಗದಿಪಡಿಸಲಾಗಿದೆ ಎಂದು ಹೇಳಿದರು. ಕಟ್ಟಡವನ್ನು ಬಿದಿರಿನ ಮರದಿಂದ ವಿನ್ಯಾಸಗೊಳಿಸಲಾಗುತ್ತಿದೆ. ಇದು ನೀರು, ಬೆಂಕಿ ಮತ್ತು ಗೆದ್ದಲು ನಿರೋಧಕವಾಗಿರುತ್ತದೆ. ಕಟ್ಟಡ ನಿರ್ಮಾಣಕ್ಕೆ ಬಿದಿರನ್ನು ಬಳಕೆ ಮಾಡುತ್ತಿರುವುದರಿಂದ ಇದು ನಿರ್ಮಾಣ ಸಮಯನ್ನು ಶೇ.50ರಷ್ಟು ಕಡಿಮೆ ಮಾಡುತ್ತದೆ. ಅಲ್ಲದೆ, ನಿರ್ಮಾಣದಲ್ಲಿ ಮೂರು ಮಿಲಿಯನ್ ಲೀಟರ್ ನೀರನ್ನೂ ಕೂಡ ಉಳಿಸುತ್ತದೆ. ಅಲ್ಲದೆ, ಮಿಂಚು ಮತ್ತು ಭೂಕಂಪ ನಿರೋಧಕವಾಗಿಯೂ ಈ ಕಟ್ಟಡ ಇರುತ್ತದೆ.

## 'ಕಾಂಗ್ರೆಸ್ ಬಾಂಬ್ ಇಡುವವರಿಗೆ ಬೆಂಬಲ ನೀಡುತ್ತಿದೆ': ಬಿಜೆಪಿ ಶಾಸಕ ಮುನಿರತ್ನ



ಬೆಂಗಳೂರು: ಬಾಂಬ್ ಇಡುವವರಿಗೆ ಕಾಂಗ್ರೆಸ್ ಬೆಂಬಲ ನೀಡುತ್ತಿದೆ ಎಂದು ಹೇಳಿಕೆ ನೀಡುವ ಮೂಲಕ ಬಿಜೆಪಿ ಶಾಸಕ ಎನ್ ಮುನಿರತ್ನ ಶುಕ್ರವಾರ ವಿವಾದವನ್ನು ಸೃಷ್ಟಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಕಾಂಗ್ರೆಸ್ ಬೆಂಬಲದಿಂದಲೇ ಶಾಲೆಗಳಿಗೆ ಬಾಂಬ್ ಬೆದರಿಕೆಗಳು ಹೆಚ್ಚಾಗುತ್ತಿವೆ. ಆದರೆ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ನಾನು ಹೇಳುವುದಿಲ್ಲ' ಎಂದು ಹೇಳಿದರು.

ಈಗ ಬಿಜೆಪಿಯ ದೊಡ್ಡ ದೊಡ್ಡ ನಾಯಕರು ಮುಸ್ಲಿಂ ಸಮುದಾಯದ ಸ್ಪೀಕರ್ ಯುಟಿ ಖಾದರ್ ಅವರಿಗೆ ನಮಸ್ಕರಿಸುತ್ತಾರೆ ಎಂಬ ಸಚಿವ ಜಮೀರ್ ಅಹ್ಮದ್ ಖಾನ್ ಅವರ ಹೇಳಿಕೆ ಜನರಿಗೆ ನೋವುಂಟು ಮಾಡಿದೆ. ರಾಜ್ಯ ಸರ್ಕಾರವು ತನ್ನ ಸಚಿವರು ಜವಾಬ್ದಾರಿಯುತವಾಗಿ ಮಾತನಾಡುವಂತೆ ಸೂಚಿಸಬೇಕು ಎಂದು ಸಲಹೆ ನೀಡಿದರು.

ಈ ಕುರಿತು ವಿವಾದ ಭುಗಿಲೇಳುತ್ತಿದ್ದಂತೆ ಸ್ಪಷ್ಟನೆ ನೀಡಿದ್ದ ಸಚಿವ ಜಮೀರ್, ಕಾಂಗ್ರೆಸ್ ಪಕ್ಷ ಮುಸ್ಲಿಂ ಸಮಾಜಕ್ಕೆ ಕೊಟ್ಟಿರುವ ಗೌರವದ ಬಗ್ಗೆ ನಾನು ಮಾತನಾಡಿದ್ದೇನೆ. ನಾನು ಹೈದರಾಬಾದ್ ನಲ್ಲಿ ಯಾವುದೇ ವ್ಯಕ್ತಿ ಅಥವಾ ಪಕ್ಷದವರ ಬಗ್ಗೆ ಅಗೌರವದಿಂದ ಮಾತನಾಡಿಲ್ಲ. ಕರ್ನಾಟಕದಲ್ಲಿ ಮುಸ್ಲಿಂ ಸಮುದಾಯಕ್ಕೆ ಕಾಂಗ್ರೆಸ್ ಅತ್ಯುನ್ನತ ಗೌರವ ನೀಡಿದೆ ಎಂಬುದನ್ನೇ ಅಲ್ಲಿ ಪ್ರಸ್ತಾಪಿಸಿದ್ದೇನೆ ಎಂದು ಸ್ಪಷ್ಟನೆ ನೀಡಿದ್ದರು.

ಎಚ್‌ಡಿ ಕುಮಾರಸ್ವಾಮಿ ಪ್ರತಿಕ್ರಿಯೆ

ಬೆಂಗಳೂರಿನ ಶಾಲೆಗಳಿಗೆ ಬಾಂಬ್ ಬೆದರಿಕೆ ಇಮೇಲ್‌ಗಳು ಬಂದಿರುವ ವಿಚಾರವಾಗಿ ಪ್ರತಿಕ್ರಿಯಿಸಿರುವ ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿ, ಶಾಲೆಗಳಿಗೆ ಅನಾಮಧೇಯ ವ್ಯಕ್ತಿಗಳು ಬಾಂಬ್ ಬೆದರಿಕೆ ಒಡ್ಡಿರುವುದು ಕಳವಳಕಾರಿ. ಮಕ್ಕಳು, ಪೋಷಕರು ತೀವ್ರವಾಗಿ ಕಳವಳಗೊಂಡಿದ್ದು, ಅವರಲ್ಲಿ ಭೀತಿ ಸೃಷ್ಟಿಸಿ, ಶಾಂತಿ ಸುವ್ಯವಸ್ಥೆಗೆ ಧಕ್ಕೆ ಉಂಟು ಮಾಡುವ ದುರುದ್ದೇಶದಿಂದಲೇ ದುಷ್ಟಶಕ್ತಿಗಳು ಇಂತಹ ಹುನ್ನಾರ ನಡೆಸಿರಬಹುದು ಎಂದಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಅವರು, ಕಾಂಗ್ರೆಸ್ ಸರ್ಕಾರವು ಯಾವುದೇ ಕಾರಣಕ್ಕೂ ಈ ಘಟನೆಯನ್ನು ಲಘುವಾಗಿ ಪರಿಗಣಿಸಬಾರದು. ಪೋಷಕರು ಮಕ್ಕಳನ್ನು ಧೈರ್ಯವಾಗಿ ಶಾಲೆಗಳಿಗೆ ಕಳಿಸುವಂತಹ ಸುರಕ್ಷತೆ, ಭದ್ರತೆಯ ಖಾತರಿಯನ್ನು ನೀಡಬೇಕು ಎಂದು ತಿಳಿಸಿದರು.

ಈ ಬೆದರಿಕೆಗಳ ಬಗ್ಗೆ ಅಮೂಲಾಗ್ರ ತನಿಖೆ ನಡೆಸಿ, ಇದರ ಹಿಂದೆ ಯಾರಿದ್ದಾರೆ? ಮೂಲ ಯಾವುದು ಎನ್ನುವುದನ್ನು ಪತ್ತೆ ಹಚ್ಚಿ ದುಷ್ಟರ ಹೆಡೆಮುರಿ ಕಟ್ಟಬೇಕು. ಈ ಬಗ್ಗೆ ಕೇಂದ್ರ ಸರ್ಕಾರದ ನೆರವು ಪಡೆಯುವ ಬಗ್ಗೆ ರಾಜ್ಯ ಸರ್ಕಾರ ಮೀನಾಮೇಷ ಎಣಿಸಬಾರದು ಎಂದು ಸಲಹೆ ನೀಡಿದ್ದಾರೆ.

## ಅಮೂಲಾಗ್ರ ತನಿಖೆ ನಡೆಸಿ ದುಷ್ಟರ ಹೆಡೆಮುರಿ ಕಟ್ಟಬೇಕು: ಎಚ್.ಡಿ ಕುಮಾರಸ್ವಾಮಿ

ಬೆಂಗಳೂರು: ಸಿಲಿಕಾನ್ ಸಿಟಿಯ ಸುಮಾರು ಶಾಲೆಗಳಿಗೆ ಬಾಂಬ್ ಬೆದರಿಕೆ ಇ-ಮೇಲ್ ಬಂದಿರುವ ಪ್ರಕರಣ ಕುರಿತು ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ.

ಈ ಸಂಬಂಧ ತಮ್ಮ ಟ್ವಿಟ್ಟರ್ ಖಾತೆಯಲ್ಲಿ ಬರೆದುಕೊಂಡಿರುವ ಹೆಚ್ಡಿ ಕುಮಾರಸ್ವಾಮಿ ಶಾಂತಿ ಸುವ್ಯವಸ್ಥೆಗೆ ಧಕ್ಕೆ ಉಂಟು ಮಾಡುವ ಹುನ್ನಾರ ಇದಾಗಿದೆ ಎಂದು ಹೇಳಿದ್ದಾರೆ.



ಶಾಲೆಗಳಿಗೆ ಅನಾಮಧೇಯ ವ್ಯಕ್ತಿಗಳು ಬಾಂಬ್ ಬೆದರಿಕೆ ಒಡ್ಡಿರುವುದು ಕಳವಳಕಾರಿ. ಮಕ್ಕಳು, ಪೋಷಕರು ತೀವ್ರವಾಗಿ ಕಳವಳಗೊಂಡಿದ್ದು, ಅವರಲ್ಲಿ ಭೀತಿ ಸೃಷ್ಟಿಸಿ, ಶಾಂತಿ ಸುವ್ಯವಸ್ಥೆಗೆ ಧಕ್ಕೆ ಉಂಟು ಮಾಡುವ ದುರುದ್ದೇಶದಿಂದಲೇ ದುಷ್ಟಶಕ್ತಿಗಳು ಇಂತಹ ಹುನ್ನಾರ ನಡೆಸಿರಬಹುದು ಎಂದಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರವು ಯಾವುದೇ ಕಾರಣಕ್ಕೂ ಈ ಘಟನೆಯನ್ನು ಲಘುವಾಗಿ ಪರಿಗಣಿಸಬಾರದು. ಪೋಷಕರು ಮಕ್ಕಳನ್ನು ಧೈರ್ಯವಾಗಿ ಶಾಲೆಗಳಿಗೆ ಕಳಿಸುವಂತಹ ಸುರಕ್ಷತೆ, ಭದ್ರತೆಯ ಖಾತರಿಯನ್ನು ನೀಡಬೇಕು ಎಂದಿದ್ದಾರೆ.

ಈ ಬೆದರಿಕೆಗಳ ಬಗ್ಗೆ ಅಮೂಲಾಗ್ರ ತನಿಖೆ ನಡೆಸಿ, ಇದರ ಹಿಂದೆ ಯಾರಿದ್ದಾರೆ? ಮೂಲ ಯಾವುದು ಎನ್ನುವುದನ್ನು ಪತ್ತೆ ಹಚ್ಚಿ ದುಷ್ಟರ ಹೆಡೆಮುರಿ ಕಟ್ಟಬೇಕು. ಈ ಬಗ್ಗೆ ಕೇಂದ್ರ ಸರಕಾರದ ನೆರವು ಪಡೆಯುವ ಬಗ್ಗೆ ರಾಜ್ಯ ಸರಕಾರ ಮೀನಾಮೇಷ ಎಣಿಸಬಾರದು ಎಂದು ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

## ಎನ್‌ಇಪಿ ರದ್ದು: ರಾಜ್ಯ ಸರ್ಕಾರದ ವಿರುದ್ಧ ಮಾಜಿ ಸಚಿವ ಅಶ್ವತ್ಥ್ ನಾರಾಯಣ್ ತೀವ್ರ ಕಿಡಿ



ಬೆಂಗಳೂರು: ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ರದ್ದುಪಡಿಸಿರುವ ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ವಿರುದ್ಧ ಮಾಜಿ ಸಚಿವ ಅಶ್ವತ್ಥ್ ನಾರಾಯಣ್ ಅವರು ಗುರುವಾರ ತೀವ್ರವಾಗಿ ಕಿಡಿಕಾರಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಠ್ಯಕ್ರಮ ಮತ್ತು ಶಿಕ್ಷಣ ನೀತಿ ಬೇರೆ, ಈ ಜ್ಞಾನ ಸಿಎಂ ಹಾಗೂ ಶಿಕ್ಷಣ ಸಚಿವರಿಗೆ ಇಲ್ಲ. ರಾಜಕೀಯ ಉದ್ದೇಶಕ್ಕಾಗಿ ಕಾಂಗ್ರೆಸ್ ಈ ರೀತಿ ಮಾಡುತ್ತಿದೆ. ಎನ್‌ಇಪಿ ಅಳವಡಿಸಿಕೊಳ್ಳದ ರಾಜ್ಯ ಸರ್ಕಾರದ ನಿರ್ಧಾರದಿಂದ ವಿದ್ಯಾರ್ಥಿಗಳು ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಕಲಿಯುವ ಮತ್ತು ಕಲಿಸುವುದು ಇದು ರಾಷ್ಟ್ರೀಯ ಶಿಕ್ಷಣ ನೀತಿಯ ಪ್ರಮುಖ ಅಂಶ. ಹಳೆಯ ನೀತಿಯಲ್ಲಿ ಇದ್ದ ನ್ಯೂನತೆಗಳನ್ನು ಹೋಗಲಾಡಿಸಿ 34 ವರ್ಷಗಳ ಬಳಿಕ ಹೊಸ ನೀತಿ ತರಲಾಗಿತ್ತು. ಸಮಾನತೆ ಮತ್ತು ಗುಣಮಟ್ಟದ ಶಿಕ್ಷಣ ಕೊಡಬೇಕಿದೆ. ಇದಕ್ಕಾಗಿ 3 ನೇ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ ಮಾಡಲಾಗಿತ್ತು. ತಯಾರಿ, ಅಧ್ಯಯನ, ಚರ್ಚೆ ಇಲ್ಲದೆ ಏಕಾಏಕಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಕೊನೆಗೊಳಿಸುತ್ತೇವೆ ಎಂದು 2024 ರಿಂದ ರಾಜ್ಯ ಶಿಕ್ಷಣ ನೀತಿ ತರುವ ಪ್ರಯತ್ನ ನಡೆಸಿರುವುದು ಖಂಡನೀಯ' ಎಂದು ಹೇಳಿದರು.

ರಾಜ್ಯದಲ್ಲಿ ಎನ್‌ಇಪಿ ಯಶಸ್ವಿಯಾಗಿ ಅನುಷ್ಠಾನ ಆಗುತ್ತಿದೆ. ನಾಗಪುರ ಶಿಕ್ಷಣ, ಉತ್ತರ ಭಾರತದ ಶಿಕ್ಷಣ ನೀತಿ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ವಾಸ್ತವದಲ್ಲಿ ಎನ್‌ಇಪಿ ರಾಜ್ಯ ಸಮಿತಿಯಲ್ಲಿ ಇದ್ದವರೆಲ್ಲ ಕನ್ನಡಿಗರೇ, ರಾಜ್ಯದ ವಿದ್ಯಾರ್ಥಿಗಳ ಹಿತಕ್ಕಾಗಿ ಅತ್ಯುತ್ತಮ ನೀತಿಯನ್ನು ರೂಪಿಸಿದ್ದರು' ಎಂದು ತಿಳಿಸಿದರು.

## ಬಾಂಬ್ ಬೆದರಿಕೆ ಪ್ರಕರಣವನ್ನು ಹಗುರವಾಗಿ ನೋಡುವ ಪ್ರಶ್ನೆಯೇ ಇಲ್ಲ: ಶಿಕ್ಷಣ ಸಚಿವ ಮಧು ಬಂಗಾರಪ್ಪ



ಬೆಂಗಳೂರು: ಶುಕ್ರವಾರ ಬೆಳಗ್ಗೆ ಬೆಂಗಳೂರಿನ ಹಲವು ಖಾಸಗಿ ಶಾಲೆಗಳು ಮತ್ತು ನಂತರ ಮಧ್ಯಾಹ್ನವಾಗುತ್ತಿದ್ದಂತೆ ಸರ್ಕಾರಿ ಶಾಲೆಗಳಿಗೆ ಹುಸಿ ಬಾಂಬ್ ಬೆದರಿಕೆ ಇಮೇಲ್ ಗಳು ಬಂದಿರುವ ಬಗ್ಗೆ ಪರಿಶೀಲನೆ ಮಾಡಿ ಮುಂದಿನ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ 15ಕ್ಕೂ ಹೆಚ್ಚು ಶಾಲೆಗಳಿಗೆ ಬಾಂಬ್ ಬೆದರಿಕೆ ಬಂದಿದೆ. ನಾನು ಅಧಿಕಾರಿಗಳಿಂದ ಮಾಹಿತಿ ಪಡೆಯುತ್ತಿದ್ದೇನೆ. ಮಕ್ಕಳ ಸುರಕ್ಷತೆಯ ಬಗ್ಗೆ ಆದ್ಯತೆ ನೀಡಲಾಗಿದೆ ಎಂದು ಹೇಳಿದರು. ಬಾಂಬ್ ಬೆದರಿಕೆ ಪ್ರಕರಣವನ್ನು ಹಗುರವಾಗಿ ನೋಡುವ ಪ್ರಶ್ನೆಯೇ ಇಲ್ಲ.ಬೆದರಿಕೆ ಬಂದಿರುವ ಶಾಲೆಗಳಿಗೆ ರಕ್ಷಣೆ ಕೊಡುತ್ತೇವೆ. ಈ ಬಗ್ಗೆ ಗೃಹ ಸಚಿವರ ಜೊತೆ, ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆ ಮಾತನಾಡಿದ್ದೇನೆ. ಹಗುರವಾಗಿ ನೋಡುವ ಪ್ರಶ್ನೆಯೇ ಇಲ್ಲ. ಪೋಷಕರಿಗೆ ಬಹಳ ಆತಂಕ ಇರುತ್ತದೆ. ಯಾರು ಹೆದರುವುದು ಬೇಡ ಧೈರ್ಯವಾಗಿರಿ ಎಂದು ಸಚಿವರು ತಿಳಿಸಿದ್ದಾರೆ.

## ರಾಜಕೀಯ ದ್ವೇಷದಿಂದ ಡಿಕೆಶಿ ವಿರುದ್ಧ ಬಿಜೆಪಿ ತನಿಖೆಗೆ ಆದೇಶಿಸಿತ್ತು: ಸಚಿವ ಎಂಬಿ ಪಾಟೀಲ್



ವಿಜಯಪುರ: ಹಿಂದಿನ ಬಿಜೆಪಿ ಸರ್ಕಾರ ಕೇವಲ ರಾಜಕೀಯ ದ್ವೇಷ ಸಾಧಿಸಲು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ಸಿಬಿಐ ತನಿಖೆಗೆ ಆದೇಶಿಸಿತ್ತು ಎಂದು ಮಧ್ಯಮ ಮತ್ತು ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಅವರು ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಕುಮಾರ್ ಅವರನ್ನು ಗುರಿಯಾಗಿಸಲು ಉದ್ದೇಶಪೂರ್ವಕವಾಗಿ ಸಿಬಿಐ ತನಿಖೆಗೆ ಆದೇಶಿಸಿತ್ತು. ಆದರೆ, ನಮ್ಮ ಸರ್ಕಾರ ಅಡ್ವೊಕೇಟ್ ಜನರಲ್ ಅವರ ಅಭಿಪ್ರಾಯ ಪಡೆದು ಬಿಜೆಪಿಯ ಆದೇಶವನ್ನು ಹಿಂಪಡೆಯಲು ನಿರ್ಧರಿಸಿದೆ. ಕಾನೂನು ಪ್ರಕಾರವೇ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ನಿಟ್ಟಿನಲ್ಲಿ ಕಾನೂನು ಹೋರಾಟ ಮುಂದುವರೆಯಲಿದೆ ಎಂದು ಹೇಳಿದರು. ಪ್ರತಿಪಕ್ಷಗಳನ್ನು ಗುರಿಯಾಗಿಸಲು ಬಿಜೆಪಿ ಇಡಿ, ಐಟಿ ಮತ್ತು ಸಿಬಿಐ ಅನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದ ಅವರು, ಇಡಿ, ಐಟಿ ಅಥವಾ ಸಿಬಿಐ ಬಿಜೆಪಿ ನಾಯಕರ ವಿರುದ್ಧವೇಕೆ ಪ್ರಕರಣ ದಾಖಲಿಸಿಲ್ಲ ಎಂದು ಪ್ರಶ್ನಿಸಿದರು.

ಬಿಜೆಪಿಯವರ ವಿರುದ್ಧ ಯಾಕೆ ದಾಳಿ ಮಾಡಿಲ್ಲ? ಅವರೆಲ್ಲರೂ ಸತ್ಯ ಹರಿಶ್ಚಂದ್ರರಾ? ಇಡೀ ದೇಶದಲ್ಲಿ ಬಿಜೆಪಿಯ ಒಬ್ಬ ಮುಖಂಡನ ಮೇಲಾದರೂ ಐಟಿ ರೇಡ್ ಮಾಡ್ತಾರಾ? ಇಡಿ, ಸಿಬಿಐ ಕೇಸ್ ಹಾಕ್ತಾರಾ? ಎಂದು ಖಾರವಾಗಿ ಪ್ರಶ್ನಿಸಿದರು. ನಿಗಮ ಮಂಡಳಿ ನೇಮಕ ವಿಚಾರ ಕುರಿತು ಪ್ರತಿಕ್ರಿಯಿಸಿ, ಮೊದಲ ಹಂತದಲ್ಲಿ ಶಾಸಕರಿಗೆ, ಕೆಲ ಕಾರ್ಯಕರ್ತರಿಗೆ ಆದ್ಯತೆ ನೀಡಲಾಗುತ್ತದೆ. ಈಗಾಗಲೇ ಸಭೆ ಕೂಡ ನಡೆದಿದೆ. ಲೋಕಸಭೆ ಚುನಾವಣೆ ಬಳಿಕ ಕಾರ್ಯಕರ್ತರಿಗೆ, ಸದಸ್ಯರಿಗೆ ನೀಡುವ ಪ್ರಕ್ರಿಯೆ ನಡೆದಿದೆ. ಅದು ಸಿಎಂ, ಕೆಪಿಸಿಸಿ ಅಧ್ಯಕ್ಷರಿಗೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪಸಿಂಗ್ ಸುರ್ಜೆವಾಲಾ ಅವರಿಗೆ ಗೊತ್ತಿದೆ ಎಂದು ಹೇಳಿದರು.

## 1ನೇ ಕಂತಿನ ಬೆಳೆ ಪರಿಹಾರ ಘೋಷಿಸಿದ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಕೇಂದ್ರ ಸರ್ಕಾರದಿಂದ ಬರ ಪರಿಹಾರ ಬರುವವರೆಗೂ ಕಾಯುವುದಿಲ್ಲ ಎಂದು ಹೇಳಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 1ನೇ ಕಂತಿನಲ್ಲಿ 2 ಸಾವಿರ ರೂ. ವರೆಗೂ ಬೆಳೆ ಪರಿಹಾರ ನೀಡಲಾಗುವುದು ಎಂದು ಘೋಷಣೆ ಮಾಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಕೇಂದ್ರ ಸರ್ಕಾರ ರಾಜ್ಯದ ರೈತರಿಗೆ ಪರಿಹಾರ ಕೊಡಲು ಇನ್ನೂ ಪ್ರಾಥಮಿಕ ಸಭೆಯನ್ನೇ ನಡೆಸದ ಹಿನ್ನೆಲೆಯಲ್ಲಿ ರಾಜ್ಯದಿಂದ ತುರ್ತು ಕ್ರಮ ಕೈಗೊಳ್ಳಲಾಗಿದೆ. ಮೊದಲ ಹಂತದಲ್ಲಿ 2 ಸಾವಿರ ರೂ.ವರೆಗೂ ಪರಿಹಾರ ನೀಡಲಾಗುವುದು ಎಂದು ಹೇಳಿದರು.

ಕೇಂದ್ರಕ್ಕೆ ಬರೆದ ಪತ್ರಗಳಿಗೂ ಪ್ರತಿಕ್ರಿಯೆ ಇಲ್ಲ. ರಾಜ್ಯದಿಂದ ಮೂವರು ಸಚಿವರು ದೆಹಲಿಗೆ ಹೋದರೂ ಸಕಾರಾತ್ಮಕ ಪ್ರತಿಕ್ರಿಯೆ



ಕೇಂದ್ರದಿಂದ ಸಿಕ್ಕಿಲ್ಲ. ಇನ್ನು ಉದ್ಯೋಗ ಖಾತರಿ ಯೋಜನೆಯಡಿ 150 ಮಾನವ ದಿನ ಉದ್ಯೋಗ ಕೊಡಲು ಅನುಮತಿ ಕೋರಲಾಗಿತ್ತು. ಕೇಂದ್ರ ಇನ್ನೂ ಅನುಮತಿ ನೀಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟ: ರಾಜ್ಯದ 223 ತಾಲ್ಲೂಕುಗಳನ್ನು ಬರಪೀಡಿತ ಎಂದು ಮೂರು ಹಂತದಲ್ಲಿ ಘೋಷಿಸಿದ್ದೇವೆ. 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟ ಆಗಿದೆ. 18171.44 ಕೋಟಿ ರೂ. ಪರಿಹಾರದ ಆರ್ಥಿಕ ನೆರವು ನೀಡಲು ಕೇಂದ್ರಕ್ಕೆ ಪತ್ರ ಬರೆದಿದ್ದೇವೆ. ಕೇಂದ್ರ ನಮ್ಮ ತೆರಿಗೆ ಹಣದ ಪಾಲನ್ನು ನಮಗೆ ವಾಪಾಸ್ ಕೊಟ್ಟರೂ ಸಾಕು. 21-9-2023 ರಂದು ಕೇಂದ್ರಕ್ಕೆ ಮೊದಲ ಮನವಿ ಮಾಡಿದ್ದೆವು. ಕೇಂದ್ರದ ತಂಡ 4/10 ರಿಂದ 9/10 ರ ವರೆಗೆ ರಾಜ್ಯ ಪ್ರವಾಸ ಮಾಡಿ ಬರ ಸಮೀಕ್ಷೆ ನಡೆಸಿ, ವರದಿ ನೀಡಿದೆ. ನಾವೆಲ್ಲಾ ಕೇಂದ್ರ ತಂಡವನ್ನು ಭೇಟಿ ಮಾಡಿ ಚರ್ಚಿಸಿ ಬರದ ಸ್ಥಿತಿ ವಿವರಿಸಿದ್ದೇವೆ .ದೇಶದಲ್ಲಿ 12 ರಾಜ್ಯಗಳಲ್ಲಿ ಬರಗಾಲದ ಸ್ಥಿತಿ ಇದೆ. 4663 ಕೋಟಿ ರೂ. ಬೆಳೆ ನಷ್ಟ ಪರಿಹಾರ ಕೇಂದ್ರಕ್ಕೆ ಕೇಳಿದ್ದೆವು. ಆದ್ರೆ, ಇವತ್ತಿನವರೆಗೂ ಕೇಂದ್ರ ಸಭೆಯನ್ನೇ ನಡೆಸಿಲ್ಲ. ಸಮಯ ಕೇಳಿದರೂ ಭೇಟಿಗೆ ಅವಕಾಶ ಕೊಟ್ಟಿಲ್ಲ ಎಂದು ಅಸಮಾಧಾನ ಹೊರಹಾಕಿದರು.

ವಿಮೆಗೆ 460 ಕೋಟಿ ರೂ. ಬಿಡುಗಡೆ: ಬಿತ್ತನೆ ವೈಫಲ್ಯ ಮತ್ತು ಮಧ್ಯಂತರ ವಿಮೆ ಪರಿಹಾರಕ್ಕೆ ರಾಜ್ಯ ಸರ್ಕಾರ ಈಗಾಗಲೇ 6.5 ಲಕ್ಷ ರೈತರಿಗೆ 460 ಕೋಟಿ ರೂ, ಹಣವನ್ನು ನಮ್ಮ ಸರ್ಕಾರ ಬಿಡುಗಡೆ ಮಾಡಿದೆ. ಕುಡಿಯುವ ನೀರು , ಮೇವಿಗೆ 327 ಕೋಟಿ ರೂ. ಬಿಡುಗಡೆ ಮಾಡಲಾಗಿದ್ದು, 780 ಕೋಟಿ ರೂಪಾಯಿ ಜಿಲ್ಲಾಧಿಕಾರಿಗಳ ಖಾತೆಯಲ್ಲಿದೆ. ಅವರೂ ತಹಶೀಲ್ದಾರ್ ಗಳಿಗೆ ಬಿಡುಗಡೆ ಮಾಡಿದ್ದಾರೆ. ಯಾವ ತಾಲ್ಲೂಕುಗಳಲ್ಲೂ ಕುಡಿಯುವ ನೀರಿಗೆ ಸಮಸ್ಯೆ ಇಲ್ಲದಂತೆ ನಿರ್ವಹಿಸಿದ್ದೇವೆ. ಹಲವು ತಾಲ್ಲೂಕುಗಳ 60 ಹಳ್ಳಿಗಳಲ್ಲಿ ಟ್ಯಾಂಕರ್ ನೀರಿನ ವ್ಯವಸ್ಥೆ ಮಾಡಿದ್ದೇವೆ. ಹೊರ ರಾಜ್ಯಕ್ಕೆ ಮೇವು ಹೋಗದಂತೆ ತಡೆದಿದ್ದೇವೆ. ಮೇವಿನ ಬೀಜ ವಿತರಣೆ ಮಾಡಿದ್ದೇವೆ ಎಂದು ವಿವರಿಸಿದರು.

## ಸೋರುತಿಹುದು ಏರ್ ಇಂಡಿಯಾ ವಿಮಾನದ ಮಾಳಿಗೆ

ನವದೆಹಲಿ: ವಿಮಾನದಲ್ಲಿ ಪ್ರಯಾಣಿಸುವುದು ಎಂದರೆ ತುಂಬ ಜನರಿಗೆ ಎಲ್ಲಿಲ್ಲದ ಖುಷಿ. ಸಮಯದ ಉಳಿತಾಯ, ಅತ್ಯಾಧುನಿಕ ತಂತ್ರಜ್ಞಾನವುಳ್ಳ ವಿಮಾನಗಳಲ್ಲಿ ಗಗನಸಖಿಯರ ಸೇವೆ ಪಡೆಯುತ್ತ, ಆಗಸದಿಂದ ಭೂಮಿಯನ್ನು ನೋಡುತ್ತ, ಮೋಡಗಳನ್ನು ಹತ್ತಿರದಿಂದ ವೀಕ್ಷಿಸುತ್ತ, ಆರಾಮವಾಗಿ ಪ್ರಯಾಣಿಸುವ ಖುಷಿಯನ್ನು ತುಂಬ ಜನ ಇಷ್ಟಪಡುತ್ತಾರೆ. ಆದರೆ, ಇತ್ತೀಚೆಗೆ ಏರ್ ಇಂಡಿಯಾ ವಿಮಾನವೊಂದರಲ್ಲಿ ಪ್ರಯಾಣಿಸಿದವರಿಗೆ ಭೀಕರ ಅನುಭವವಾಗಿದೆ. ವಿಮಾನದಲ್ಲಿ ಬ್ಯಾಗ್ ಇರಿಸುವ ಸ್ಥಳದಿಂದ ನೀರು ಸೋರಿದ್ದೇ ಪ್ರಯಾಣಿಕರ ಕೆಟ್ಟ



ಅನುಭವಕ್ಕೆ ಕಾರಣವಾಗಿದೆ.

ವಿಮಾನವೊಂದರ ಓವರ್‌ಹೆಡ್ ಬಿನ್ಸ್‌ನಿಂದ ನೀರು ಸೋರಿದ್ದು, ವ್ಯಕ್ತಿಯೊಬ್ಬರು ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ವಿಡಿಯೊವನ್ನು ಹಂಚಿಕೊಂಡಿದ್ದಾರೆ. "ಏರ್ ಇಂಡಿಯಾ, ನಮ್ಮ ವಿಮಾನದಲ್ಲಿ ಪ್ರಯಾಣಿಸಿ. ಇದು ಟ್ರಿಪ್ ಅಲ್ಲ, ಪುಳಕಿತರಾಗುವ ಸರದಿ ನಿಮ್ಮದಾಗಲಿ" ಎಂದು ವ್ಯಂಗ್ಯವಾಗಿ ಬರೆದುಕೊಂಡಿದ್ದಾರೆ. ವಿಡಿಯೊವನ್ನು ಲಕ್ಷಾಂತರ ಜನ ನೋಡಿದ್ದು, ಪ್ರಯಾಣಿಕರು ಅನುಭವಿಸಿದ ಕಷ್ಟದ ಬಗ್ಗೆ ಮರುಕ ವ್ಯಕ್ತಪಡಿಸಿದ್ದಾರೆ. ಹಾಗೆಯೇ, ಏರ್ ಇಂಡಿಯಾ ವಿಮಾನಯಾನ ಸಂಸ್ಥೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಬೆಳಗಾವಿ ಚಳಿಗಾಲದ ಅಧಿವೇಶನಕ್ಕೆ ಭರದ ಸಿದ್ಧತೆ





ಬೆಳಗಾವಿ: ಡಿ. 4ರಿಂದ 10 ದಿನಗಳ ಕಾಲ ಚಳಿಗಾಲ ಅಧಿವೇಶನ ಆರಂಭವಾಗಲಿದ್ದು, ಸೌಧಕ್ಕೆ ಸುಣ್ಣ, ಬಣ್ಣ ಬಳಿದು ಮದುವನಗಿತಿಯಂತೆ ಅಲಂಕರಿಸಲಾಗುತ್ತಿದೆ.

ಸರ್ಕಾರದ ಸೂಚನೆಯಂತೆ ಎಸ್‌ವಿಎಸ್‌ನ ಆಂತರಿಕ ಗೋಡೆಗಳಿಗೆ ಬಣ್ಣ ಬಳಿಯಲಾಗುತ್ತಿದ್ದು, ಕಟ್ಟಡದ ಹೊರಗೆ ಅಗತ್ಯವಿರುವ ಇತರ ವ್ಯವಸ್ಥೆಗಳಿಗೆ ಸಿದ್ಧತೆಗಳು ನಡೆಯುತ್ತಿವೆ. ಸೌಧದ ಸ್ವಚ್ಛತೆ ಸೇರಿ ಇನ್ನಿತರ ಕಾರ್ಯಗಳಲ್ಲಿ ಸಿಬ್ಬಂದಿ ನಿರತರಾಗಿದ್ದಾರೆ.

**ಸ್ವಚ್ಛತೆ:** ಸೌಧದ ನಾಲ್ಕು ದಿಕ್ಕುಗಳಲ್ಲೂ ಸಿಬ್ಬಂದಿ ನೀರಿನ ಪೈಪ್ ಮೂಲಕ ಸ್ವಚ್ಛಗೊಳಿಸುತ್ತಿದ್ದಾರೆ. ಅಲ್ಲದೇ ಪ್ರವೇಶ ದ್ವಾರಗಳ ಕಂಬಗಳು ಮತ್ತು ಒಳ ಛಾವಣಿಗೆ ಬಣ್ಣವನ್ನೂ ಬಳಿಯಾಗುತ್ತಿದೆ. ಇನ್ನು ವಿಧಾನಸಭೆ ಮತ್ತು ವಿಧಾನಪರಿಷತ್ ಸಭಾಂಗಣವನ್ನು ಕೂಡಾ ಸ್ವಚ್ಛತೆ ಮಾಡಲಾಗುತ್ತಿದೆ.

**ಹೂವಿನ ಸಸಿಗಳ ಅಲಂಕಾರ:** ಸುವರ್ಣ ವಿಧಾನಸೌಧಕ್ಕೆ ತೆರಳುವ ರಸ್ತೆ ನಡುವೆ ವಿಭಜಕದಲ್ಲಿ ಅಲಂಕಾರಿಕ ಹೂವಿನ ಸಸಿಗಳನ್ನು ಮಹಿಳೆಯರು ನೆಡುತ್ತಿರುವುದು ಗಮನ ಸೆಳೆಯುತ್ತಿದೆ. ಜಿನಿಯಾ, ಸಲಿಯಾ, ಪಿಂಟುನಿಯಾ, ಅಪೇಲಿಯಾ ಸೇರಿ ಮತ್ತಿತರ ಹೂವುಗಳು ಸೌಧದ ಮೆರಗು ಹೆಚ್ಚಿಸಲಿವೆ. ಇನ್ನು ಸುವರ್ಣಸೌಧ ಆವರಣದಲ್ಲಿ ನಿರ್ಮಿಸಿರುವ ಹೆಲಿಪ್ಯಾಡ್ನಿಂದ ಸೌಧಕ್ಕೆ ಹೋಗಲು ಹೊಸದಾಗಿ ರಸ್ತೆ ಸಂಪರ್ಕ ಕಲ್ಪಿಸಲಾಗುತ್ತಿದೆ. ಅಲ್ಲದೇ ಸೌಧ ಸುತ್ತಲೂ ಬೆಳೆದಿದ್ದ ಹುಲ್ಲು, ಕಸ, ಮುಳ್ಳನ್ನು ತೆರವುಗೊಳಿಸಲಾಗುತ್ತಿದೆ. ಒಟ್ಟಾರೆ ಅಧಿವೇಶನ ಸುಸೂತ್ರವಾಗಿ ನಡೆಸಲು ಜಿಲ್ಲಾಡಳಿತ ಅವಿರತವಾಗಿ ಶ್ರಮಿಸುತ್ತಿದೆ.

**ಡಿ.1 ರಿಂದ 30ರವರೆಗೆ ನಿಷೇಧಾಜ್ಞೆ ಜಾರಿ:** ಸುವರ್ಣ ವಿಧಾನಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಯುತ್ತಿದ್ದು, ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕ ಶಾಂತತೆ ಕಾಪಾಡಲು ಸುವರ್ಣಸೌಧದ ಸುತ್ತಲಿನ ಪ್ರದೇಶದಲ್ಲಿ ಡಿ.1ರಿಂದ 30ರವರೆಗೆ 144 ಕಲಂ ಅಡಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

ಹಿರೇಬಾಗೇವಾಡಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಸುವರ್ಣ ವಿಧಾನ ಸೌಧ, ವಿಧಾನ ಸೌಧದದ ಪೂರ್ವದ ಕಡೆಗೆ 500 ಮೀಟರ್ ಅಂತರ, ಉತ್ತರಕ್ಕೆ ಸುವರ್ಣ ಗಾರ್ಡನ್ ಕಲ್ಯಾಣ ಮಂಟಪದವರೆಗೆ 500 ಮೀಟರ್, ಪಶ್ಚಿಮಕ್ಕೆ ರಾಷ್ಟ್ರೀಯ ಹೆದ್ದಾರಿಯ ಆಚೆಗೆ ಇರುವ ಸಂಪೂರ್ಣ ಗಾರ್ಡನ್ ಹೊಟೇಲ್‌ವರೆಗೆ 500 ಮೀಟರ್ ಅಂತರ ಹಾಗೂ ದಕ್ಷಿಣ ದಿಕ್ಕಿನ ಕಡೆಗೆ ಟೊಯೊಟಾ ಶೋರೂಮ್‌ವರೆಗೆ 500 ಮೀಟರ್ ಅಂತರದಲ್ಲಿ ಡಿ.1ರಿಂದ 30ರವರೆಗೆ ಈ ನಿಷೇಧಾಜ್ಞೆ ಇರಲಿದೆ.

ಐದಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ಅಥವಾ ಸಭೆ, ಸಮಾರಂಭ ಜರುಗಿಸುವುದನ್ನು ನಿಷೇಧಿಸಲಾಗಿದೆ. ಅಪಾಯ ಉಂಟು ಮಾಡಬಹುದಾದ ಯಾವುದೇ ವಸ್ತು, ಮಾರಕಾಸ್ತ್ರಗಳನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ತಿರುಗಾಡುವುದನ್ನು ನಿರ್ಬಂಧಿಸಲಾಗಿದೆ. ಕಲ್ಲುಗಳನ್ನು, ಕ್ಷಾರಪದಾರ್ಥ(ಸ್ಫೋಟ್ ಗೊಳ್ಳಬಹುದಾದ ಅಥವಾ ಬೆಂಕಿಕಾರಕ ಪದಾರ್ಥಗಳು), ಪಟಾಕಿ ಇಲ್ಲವೆ ಸ್ಫೋಟಕ ವಸ್ತುಗಳು ಯಾವುದೇ ದಹಿಸಬಲ್ಲ ವಸ್ತುಗಳು ಇತ್ಯಾದಿಗಳನ್ನು ಈ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಮತ್ತು ಶೇಖರಿಸುವುದನ್ನು ನಿಷೇಧಿಸಲಾಗಿದೆ. ರಾಷ್ಟ್ರೀಯ ಹೆದ್ದಾರಿ-4ರಲ್ಲಿ ರಸ್ತೆ ತಡೆ ಮಾಡಿ ಪ್ರತಿಭಟನೆ ಮಾಡುವುದು, ರಾಷ್ಟ್ರೀಯ ಹೆದ್ದಾರಿಯ ಸಂಚಾರಕ್ಕೆ ತಡೆ ಒಡ್ಡಿ ಹೆದ್ದಾರಿಯಲ್ಲಿ ಓಡಾಡುತ್ತಿರುವ ಅವಶ್ಯಕ ರೋಗಿಗಳನ್ನು ಸಾಗಿಸುವ ಆಂಬುಲೆನ್ಸ್ ಹಾಗೂ ಇತರ ಅವಶ್ಯಕ ವಸ್ತುಗಳನ್ನು ಸಾಗಿಸುವ ವಾಹನಗಳನ್ನು ತಡೆದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಎಸ್.ಎನ್. ಸಿದ್ರಾಮಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಮ್ಮು ಮತ್ತು ಕಾಶ್ಮೀರ: ಭದ್ರತಾ ಪಡೆ-ಉಗ್ರನ ನಡುವೆ ಗುಂಡಿನ ಚಕಮಕಿ; ಎಲ್‌ಇಟಿಗೆ ಸೇರಿದ ಭಯೋತ್ಪಾದಕ ಹತ



ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಎನ್‌ಕೌಂಟರ್‌ನಲ್ಲಿ ಲಷ್ಕರ್-ಎ-ತಯ್ಬಾ (ಎಲ್‌ಇಟಿ) ಉಗ್ರ ಸಂಘಟನೆಗೆ ಸೇರಿದ ಭಯೋತ್ಪಾದಕನನ್ನು ಹತ್ಯೆ ಮಾಡಲಾಗಿದೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ.

ದಕ್ಷಿಣ ಕಾಶ್ಮೀರ ಜಿಲ್ಲೆಯ ಅರಿಹಾಲ್ ಗ್ರಾಮದಲ್ಲಿ ಉಗ್ರ ಅಡಗಿರುವ ಕುರಿತು ಲಭ್ಯವಾದ ನಿರ್ದಿಷ್ಟ ಗುಪ್ತಚರ ಮಾಹಿತಿ ಮೇರೆಗೆ ಭದ್ರತಾ ಪಡೆಗಳು ಗುರುವಾರ ಆ ಪ್ರದೇಶದಲ್ಲಿ ಗಸ್ತು ಮತ್ತು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದವು ಎಂದು ಪೊಲೀಸ್ ವಕ್ತಾರರು ತಿಳಿಸಿದ್ದಾರೆ.

ಶೋಧ ಕಾರ್ಯಾಚರಣೆಯ ಸಂದರ್ಭದಲ್ಲಿ, ಅಡಗಿಕೊಂಡಿದ್ದ ಭಯೋತ್ಪಾದಕ ಭದ್ರತಾ ಪಡೆಗಳ ಮೇಲೆ ಮನಬಂದಂತೆ ಗುಂಡು ಹಾರಿಸಿದ್ದಾನೆ. ಅದಕ್ಕೆ ಪ್ರತೀಕಾರವಾಗಿ ಭದ್ರತಾ ಪಡೆಗಳು ಎನ್‌ಕೌಂಟರ್ ನಡೆಸಿವೆ ಎಂದು ಅವರು ಹೇಳಿದರು.

ಪಿಂಜೂರ ಶೋಪಿಯಾನ್‌ನ ನಿವಾಸಿ ಮತ್ತು ನಿಷೇಧಿತ ಭಯೋತ್ಪಾದಕ ಸಂಘಟನೆ ಎಲ್‌ಇಟಿಯೊಂದಿಗೆ ಸಂಬಂಧ ಹೊಂದಿರುವ ಕಿಫಾಯತ್ ಅಯೂಬ್ ಅಲಿ ಎಂದು ಗುರುತಿಸಲಾದ ಉಗ್ರನನ್ನು ಸದೆಬಡಿಯಲಾಗಿದೆ. ಎನ್‌ಕೌಂಟರ್ ಸ್ಥಳದಿಂದ ಆತನ ಮೃತದೇಹವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ವಕ್ತಾರರು ತಿಳಿಸಿದ್ದಾರೆ.

ಪೊಲೀಸ್ ದಾಖಲೆಗಳು ಆತ ಹಲವಾರು ಭಯೋತ್ಪಾದನೆ ಸಂಬಂಧಿತ ಅಪರಾಧಗಳಲ್ಲಿ ಭಾಗಿಯಾಗಿರುವುದನ್ನು ಸೂಚಿಸುತ್ತವೆ ಎಂದು ವಕ್ತಾರರು ಸೇರಿಸಿದ್ದಾರೆ.

ಎನ್‌ಕೌಂಟರ್ ಸ್ಥಳದಿಂದ ಪಿಸ್ತೂಲ್, ಎರಡು ಮ್ಯಾಗಜೀನ್‌ಗಳು, ಐದು ರೌಂಡ್ಸ್‌ಗಳು, ಎರಡು ಗ್ರೆನೇಡ್ ಸೇರಿದಂತೆ ನಿಷೇಧಿತ ವಸ್ತುಗಳು ಮತ್ತು ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಮದರಸಗಳಿಗೆ ಅನುದಾನ ಪಡೆಯಲು ಅರ್ಜಿ ಆಹ್ವಾನ

ಶಿವಮೊಗ್ಗ: ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯು ರಾಜ್ಯದಲ್ಲಿ ನಡೆಸಲಾಗುತ್ತಿರುವ ಮುಸ್ಲಿಂ ಸಮುದಾಯದ ನೊಂದಾಯಿತ ಮದರಸಗಳ ಆಧುನೀಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲು ಜಿಲ್ಲೆಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 2 ಮದರಸಗಳನ್ನು ಆಯ್ಕೆ ಮಾಡಲಾಗುತ್ತಿದ್ದು, ಸ್ವಂತ ಕಟ್ಟಡವನ್ನು ಹೊಂದಿರುವ ಮದರಸಗಳಿಂದ ಅರ್ಜಿ ಆಹ್ವಾನಿಸಿದೆ.

ಮದರಸಗಳಲ್ಲಿ ಕನಿಷ್ಠ 10 ಮಕ್ಕಳ ದಾಖಲಾತಿ ಸಂಖ್ಯೆ ಹೊಂದಿದ್ದು, ಅತಿ ಹೆಚ್ಚು ವಿದ್ಯಾರ್ಥಿಗಳಿರುವ ಹಾಗೂ ಮೂಲಭೂತ ಸೌಕರ್ಯಗಳ ಅತಿ ಅಗತ್ಯವಿರುವ ಮದರಸಾಗಳನ್ನು ಆಯ್ಕೆ ಮಾಡಲಾಗುವುದು. ಈಗಾಗಲೇ ಇದೇ ಉದ್ದೇಶಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಥವಾ ವಕ್ಫ್ ಮಂಡಳಿಯಿಂದ ಅನುದಾನ ಪಡೆದಿದ್ದಲ್ಲಿ ಅಂತಹ ಮದರಸಗಳನ್ನು ಪರಿಗಣಿಸುವುದಿಲ್ಲ. ಅರ್ಹ ಮದರಸಗಳಿಗೆ ಒಂದು ಬಾರಿಗೆ ಗರಿಷ್ಠ 5.00 ಲಕ್ಷ ರೂ.ಗಳ ಅನುದಾನವನ್ನು ಮಂಜೂರು ಮಾಡಲಾಗುವುದು.

ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಇಲಾಖೆ ಕಚೇರಿಯಿಂದ ಪಡೆದು, ಅಗತ್ಯ ದಾಖಲೆಗಳೊಂದಿಗೆ ಡಿ. 15 ರೊಳಗಾಗಿ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಶಿವಮೊಗ್ಗ ದೂ.ಸಂ.: 08182-220206 ನ್ನು ಸಂಪರ್ಕಿಸುವುದು.

## ಒಡಿಶಾದಲ್ಲಿ ಭೀಕರ ರಸ್ತೆ ಅಪಘಾತ: ನಿಂತಿದ್ದ ಟ್ರಕ್‌ಗೆ ವ್ಯಾನ್ ಡಿಕ್ಕಿ, 7 ಮಂದಿ ದುರ್ಮರಣ



ಕಿಯೋಂಜಾರ್ (ಒಡಿಶಾ): ಒಡಿಶಾದ ಕಿಯೋಂಜಾರ್ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಭೀಕರ ಅಪಘಾತ ಸಂಭವಿಸಿದ್ದು, 8 ಮಂದಿ ಮಂದಿ ಸಾವನ್ನಪ್ಪಿ 12 ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಶುಕ್ರವಾರ ನಡೆದಿದೆ.

ಪ್ರಯಾಣಿಕರನ್ನು ತುಂಬಿದ್ದ ವ್ಯಾನ್ ನಿಂತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದಿದ್ದರಿಂದ ಅಪಘಾತ ಸಂಭವಿಸಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಪೊದಮರಿ ಗ್ರಾಮದ 20 ಮಂದಿ ಜಿಲ್ಲೆಯ ಮಾ ತಾರಿಣಿ ದೇವಸ್ಥಾನಕ್ಕೆ ವ್ಯಾನ್‌ನಲ್ಲಿ ಹೋಗುತ್ತಿದ್ದಾಗ ಈ ಅವಘಡ ಸಂಭವಿಸಿದೆ. ಈ ಪೈಕಿ ಏಳು ಮಂದಿ ಸ್ಥಳದಲ್ಲೇ ಮೃತಪಟ್ಟರೆ, ಮತ್ತೋರ್ವ ಘಾಟಗಾಂವ್ ಆಸ್ಪತ್ರೆಯಲ್ಲಿ ಚಿಕಿತ್ಸೆ ವೇಳೆ ಮೃತಪಟ್ಟಿದ್ದಾರೆ.

ಆರಂಭದಲ್ಲಿ ಗಾಯಾಳುಗಳನ್ನು ಘಾಟ್‌ಗಾಂವ್ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಆದರೆ ನಂತರ ಕಟಕ್‌ನ ಎಸ್‌ಸಿಬಿ ವೈದ್ಯಕೀಯ ಕಾಲೇಜಿಗೆ ಉಲ್ಲೇಖಿಸಲಾಯಿತು. ಈ ಅವಘಡ ಎಷ್ಟು ಭೀಕರವಾಗಿತ್ತೆಂದರೆ ವ್ಯಾನ್ ಹಾರಿ ಹೋಗಿ, ಸಂಪೂರ್ಣ ನಜ್ಜುಗುಜ್ಜಾಗಿದೆ.

ಸಾವನ್ನಪ್ಪಿದವರಲ್ಲಿ ಎರಡು ಕುಟುಂಬಗಳ ಜನರು ಸೇರಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆಯೇ ಬಲಿಜೋಡಿ ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದ್ದಾರೆ.

ಗಾಯಾಳುಗಳನ್ನು ಆಂಬ್ಯುಲೆನ್ಸ್ ಮೂಲಕ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.ಅಪಘಾತದ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಆದರೆ, ಅಪಘಾತಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ.

ಘಟನೆ ಬಗ್ಗೆ ಕಿಯೋಂಜಾರ್ ಎಸ್ಪಿ ಕುಸಲ್ಕರ್ ನಿತಿನ್ ದಗುಡು ಮಾತನಾಡಿಗಂಜಾಂ ಜಿಲ್ಲೆಯ ಗ್ರಾಮವೊಂದರಿಂದ ಕಿಯೋಂಜಾರ್ ಜಿಲ್ಲೆಯ ಘಾಟ್‌ಗಾಂವ್ ಪ್ರದೇಶದ ಮಾ ತಾರಿಣಿ ದೇವಸ್ಥಾನಕ್ಕೆ ತೆರಳುತ್ತಿದ್ದ ವ್ಯಾನ್‌ನಲ್ಲಿ 20 ಜನರಿದ್ದರು. ರಸ್ತೆ ಬದಿ ನಿಂತಿದ್ದ ಟ್ರಕ್‌ಗೆ ವ್ಯಾನ್ ಡಿಕ್ಕಿ ಹೊಡೆದಿದೆ. ಅಪಘಾತ ಸಂದರ್ಭದಲ್ಲಿ ವ್ಯಾನ್ ವೇಗವಾಗಿ ಚಲಿಸುತ್ತಿತ್ತು. ಮಂಜು ಇದ್ದುದರಿಂದ ಚಾಲಕನಿಗೆ ಟ್ರಕ್ ನಿಂತಿರುವುದು ಕಾಣಿಸದೇ ಇರುವ ಸಾಧ್ಯತೆ ಇದೆ. ಮೃತರ ಕುಟುಂಬಗಳಿಗೆ ಮಾಹಿತಿ ರವಾನಿಸಲಾಗಿದೆ. ಆಯಾ ಕುಟುಂಬಸ್ಥರು ಮತ್ತು ಸಂಬಂಧಿಕರು ಇನ್ನು ಕೆಲ ಹೊತ್ತಲ್ಲಿ ಆಸ್ಪತ್ರೆಗೆ ತಲುಪಲಿದ್ದಾರೆ" ಎಂದು ಹೇಳಿದರು.

ಘಟನೆಯಲ್ಲಿ ವ್ಯಾನ್ ಸಂಪೂರ್ಣ ನಜ್ಜುಗುಜ್ಜಾಗಿದೆ. ಮೃತರು ಗಂಜಾಮ ಜಿಲ್ಲೆಯ ಪೊಡಮರಿ ಗ್ರಾಮದ ಎರಡು ಕುಟುಂಬಗಳಿಗೆ ಸೇರಿದವರು ಎಂದು ತಿಳಿದುಬಂದಿದೆ. ಈ ಪೈಕಿ ಕೆಲವರು ಬಿಜೆಡಿ ರಾಜ್ಯಸಭಾ ಮಾಜಿ ಸಂಸದೆ ರೇಣುಬಾಲಾ ಪ್ರಧಾನ್ ಅವರ ಸಂಬಂಧಿಕರು ಎಂಬ ಮಾಹಿತಿ ದೊರೆತಿದೆ.

## ಗಂಟಲಲ್ಲಿ ಚಕ್ಕುಲಿ ಸಿಲುಕಿಕೊಂಡು ಪುಟ್ಟ ಕಂದಮ್ಮ ಸಾವು



ತಿರುವನಂತಪುರಂ: ಚಕ್ಕುಲಿ ಗಂಟಲಲ್ಲಿ ಸಿಲುಕಿಕೊಂಡು ಒಂದೂವರೆ ವರ್ಷದ ಪುಟ್ಟ ಕಂದಮ್ಮ ದುರ್ಮರಣಕ್ಕೀಡಾದ ಘಟನೆ ಕೇರಳದಲ್ಲಿ ನಡೆದಿದೆ.

ಮೃತ ಬಾಲಕನನ್ನು ವೈಷ್ಣವ್ ಎಂದು ಗುರುತಿಸಲಾಗಿದೆ. ಮೃತ ವೈಷ್ಣವ್, ಮಂಕಂಕುಜಿ ಮಲಯಿಲ್ ಪಾಡೆತ್ತಿಲ್ ಹೌಸ್ನ ವಿಜೀಶ್ ಮತ್ತು ದಿವ್ಯಾ ದಾಸ್ ಅವರ ಅವಳಿ ಮಕ್ಕಳಲ್ಲಿ ಒಬ್ಬರು. ಘಟನೆ ಸಂದರ್ಭದಲ್ಲಿ ಮಗು ಹಾಗೂ ಆತನ ತಾಯಿ ದಿವ್ಯಾ ಮಾತ್ರ ಮನೆಯಲ್ಲಿದ್ದರು. ಮಗುವಿನ ತಂದೆ ವೃತ್ತಿಯಲ್ಲಿ ಕಾರ್ಪೆಂಟರ್ ಆಗಿದ್ದು, ಪಾಲಕ್ಕಾಡ್ನಲ್ಲಿರುವ ತಮ್ಮ ಸಂಬಂಧಿಕರ ಮನೆಗೆ ಕೆಲಸಕ್ಕೆ ತೆರಳಿದ್ದರು.

ಬಾಲಕ ಚಕ್ಕುಲಿಯನು ತಿಂದುಕೊಂಡು ತನ್ನ ಪಾಡಿಗೆ ಆಟವಾಡುತ್ತಿದ್ದನು. ಈ ವೇಳೆ ಏಕಾಏಕಿ ಚಕ್ಕುಲಿಯನ್ನು ನುಂಗಿಬಿಟ್ಟಿದ್ದಾನೆ. ಪರಿಣಾಮ ಚಕ್ಕುಲಿ ಗಂಟಲಲ್ಲಿ ಸಿಲುಕಿಕೊಂಡು ಆತನಿಗೆ ಉಸಿರಾಡಲು ಸಾಧ್ಯವಾಗುತ್ತಿರಲಿಲ್ಲ. ಕೂಡಲೇ ಆತನನ್ನು ಕೊಲ್ಲಂನಲ್ಲಿರುವ ಖಾಸಗಿ ಆಸ್ಪತ್ರೆಗೆ ಕರೆದುಕೊಂಡು ಹೋಗಲಾಯಿತು. ಆದರೆ ವೈಷ್ಣವ್ನನ್ನು ಉಳಿಸಿಕೊಳ್ಳಲು ಸಾಧ್ಯವಾಗಿಲ್ಲ ಎಂದು ತಿಳಿದು ಬಂದಿದೆ.

## ಶ್ರೀಮಂತರು ಶ್ರೀಮಂತರಾಗುತ್ತಿದ್ದಾರೆ: ಗ್ಯಾರಂಟಿ ಯೋಜನೆಗಳ ಬಗ್ಗೆ ನಾರಾಯಣ ಮೂರ್ತಿ ಆಕ್ಷೇಪಕ್ಕೆ ಪ್ರಿಯಾಂಕ್ ಖರ್ಗೆ ತರಾಟೆ



ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಕುರಿತು ಆಕ್ಷೇಪ ವ್ಯಕ್ತಪಡಿಸಿರುವ ಇನ್ಫೋಸಿಸ್ ಸಂಸ್ಥಾಪಕ ಎನ್.ಆರ್. ನಾರಾಯಣ ಮೂರ್ತಿ ಅವರನ್ನು ಐಟಿ ಮತ್ತು ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಗುರುವಾರ ತರಾಟೆಗೆ ತೆಗೆದುಕೊಂಡಿದ್ದಾರೆ.

ಬೆಂಗಳೂರು ಟೆಕ್ ಶೃಂಗಸಭೆ ಭಾಗವಾಗಿ ಸುದ್ದಿಗಾರರೊಂದಿಗೆ ಸಂವಾದ ನಡೆಸಿದ ಅವರು, ಎಷ್ಟು ಜನರು ಬಡತನ ರೇಖೆಗಿಂತ ಕೆಳಕ್ಕೆ ತಳ್ಳಲ್ಪಟ್ಟಿದ್ದಾರೆ ಮತ್ತು "ಶ್ರೀಮಂತರು ಹೇಗೆ ಶ್ರೀಮಂತರಾಗುತ್ತಿದ್ದಾರೆ ಮತ್ತು ಬಡವರು ಬಡವರಾಗಿಯೇ ಇದ್ದಾರೆ ಎಂಬುದನ್ನು ನೋಡಬೇಕು ಎಂದು ಹೇಳಿದರು.

"ನಾರಾಯಣ ಮೂರ್ತಿ ತಮ್ಮ ವೈಯಕ್ತಿಕ ಅಭಿಪ್ರಾಯವನ್ನು ನೀಡಿದ್ದಾರೆ. ಅವರು ಇನ್ಫೋಸಿಸ್ ಫೌಂಡೇಶನ್ ಮೂಲಕ ಪರೋಪಕಾರಿ ಕೆಲಸ ಮಾಡಿದ್ದಾರೆ. ಅವರು ನೀಡುತ್ತಿರುವ ಸೇವೆಯ ಜೊತೆಗೆ ನಾಗರಿಕ ಜವಾಬ್ದಾರಿಯೂ ಇರಬೇಕು.

ನಾಗರಿಕ ಹಕ್ಕುಗಳ ಬಗ್ಗೆ ಮಾತನಾಡುವಾಗ, ನಾಗರಿಕ ಜವಾಬ್ದಾರಿಗಳು ಮತ್ತು ಕರ್ತವ್ಯಗಳ ಬಗ್ಗೆಯೂ ಚರ್ಚಿಸಬೇಕು. ಅದರಂತೆ ಸರ್ಕಾರ ಜನರಿಗೆ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಪ್ರೋತ್ಸಾಹದ ರೂಪದಲ್ಲಿ ನೀಡಬೇಕು" ಎಂದು ಖರ್ಗೆ ಹೇಳಿದರು.

"ಗ್ಯಾರಂಟಿ ಯೋಜನೆಗಳೊಂದಿಗೆ ಕುಟುಂಬಗಳು ವರ್ಷಕ್ಕೆ 1.20 ಲಕ್ಷ ರೂ. ಉಳಿಸಲು ಸಮರ್ಥವಾಗಿವೆ. ಅವರು ಅದನ್ನು ಮಕ್ಕಳಿಗೆ ಪೌಷ್ಟಿಕಾಂಶದ ಆಹಾರಕ್ಕಾಗಿ ಖರ್ಚು ಮಾಡುತ್ತಾರೆ ಮತ್ತು ಅವರನ್ನು ಟ್ಯೂಷನ್‌ಗೆ ಕಳುಹಿಸುತ್ತಾರೆ. ಗ್ಯಾರಂಟಿ ಯೋಜನೆಗಳು ಒಂದು ವರ್ಷದ ನಂತರ ಜನರಿಗೆ ಹೇಗೆ ಪ್ರಯೋಜನವಾಗಿದೆ ಎಂಬುದನ್ನು ನಾವು ಅಧ್ಯಯನ ಮಾಡಬೇಕು ಎಂದು ಅವರು ತಿಳಿಸಿದರು.

ಸಹಾನುಭೂತಿಯ ಬಂಡವಾಳಶಾಹಿ ಮತ್ತು ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿಯ ಬಗ್ಗೆ ನಾರಾಯಣ ಮೂರ್ತಿ ಮಾತನಾಡಿರುವುದನ್ನು ಗಮನಿಸಿದ ಸಚಿವರು, "ಎಷ್ಟು ಕಾರ್ಪೊರೇಟ್‌ಗಳು ಇದನ್ನು ಮಾಡುತ್ತಿದ್ದಾರೆ? ದೇಶದಲ್ಲಿ ಅನೇಕ ಬಂಡವಾಳಶಾಹಿಗಳಿದ್ದಾರೆ, ಅವರಲ್ಲಿ ಎಷ್ಟು ಮಂದಿ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿಯನ್ನು ಹೊಂದಿದ್ದಾರೆ? ಎಲ್ಲರೂ ಮಾಡುತ್ತಾರೆ ಎಂಬುದು ನನ್ನ ಅಭಿಪ್ರಾಯವಲ್ಲಾ.

ಆಂಗ್ಲ ಮಾಧ್ಯಮ ಶಾಲೆಗಳ ಅಗತ್ಯವಿದ್ದರೂ ಸ್ಥಳೀಯ ಭಾಷೆಗೆ ಪ್ರಾಮುಖ್ಯತೆ ನೀಡಬೇಕು. ನಮ್ಮ ರಾಜ್ಯವು ಪ್ರತಿಭಾನ್ವಿತರನ್ನು ಉತ್ಪಾದಿಸುತ್ತಿದೆ ಎಂದು ಅವರು ಹೇಳಿದರು.

ಗ್ಯಾರಂಟಿ ಯೋಜನೆಗಳ ಬಗ್ಗೆ ತಮ್ಮ ಅಭಿಪ್ರಾಯವನ್ನು ನೀಡುತ್ತಾ, ಬೆಂಗಳೂರು ಟೆಕ್ ಶೃಂಗಸಭೆಯಲ್ಲಿ ಬುಧವಾರ ಮಾತನಾಡಿದ್ದ ನಾರಾಯಣಮೂರ್ತಿ ಏನನ್ನೂ ಉಚಿತವಾಗಿ ನೀಡಬಾರದು ಮತ್ತು ಜನರು ಪಡೆಯುವುದಕ್ಕೆ ಜವಾಬ್ದಾರರಾಗಬೇಕು ಎಂದು ಹೇಳಿದ್ದರು. ಸರ್ಕಾರದಿಂದ ಸಹಾಯಧನ ನೀಡುವುದನ್ನು ಅವರು ವಿರೋಧಿಸಿದ್ದರು. ಚೀನಾವನ್ನು ಹಿಂದಿಕ್ಕಲು ಇಂಗ್ಲಿಷ್ ಮಾಧ್ಯಮ ಶಾಲೆಗಳ ಸ್ಥಾಪನೆ, ಮೂರು ಪಾಳಿ ಕೆಲಸ ಮತ್ತು ತ್ವರಿತ ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆ ಅಗತ್ಯ ಎಂದು ಅವರು ತಿಳಿಸಿದರು.

## ಮಾಹಿತಿ ನೀಡಲು ಮನವಿ

ಶಿವಮೊಗ್ಗ: ದೊಡ್ಡಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯ ಬುದ್ಧಾನಗರ 01 ಕ್ರಾಸ್ ವಾಸಿ ಮೊಹಮದ್ ಜಾಫರ್ ಎಂಬುವವರ ಪತ್ನಿ ಉಮ್ಮೆ ಹನಿ ಎಂಬ 29 ವರ್ಷದ ಮಹಿಳೆ ತಮ್ಮ 09 ವರ್ಷದ ಮಗಳು ಆಸ್ಪಿಯಾ ಕೌನೈನ್ ಹಾಗೂ 05 ವರ್ಷ ಮಗ ಮೊಹಮದ್ ಸೂಫಿಯಾನ್ ಎಂಬ ಇಬ್ಬರು ಮಕ್ಕಳನ್ನು ಕರೆದುಕೊಂಡು ನ.20 ರಂದು ಮನೆಯಿಂದ ಹೋದವರು ಈವರೆಗೂ ವಾಪಸ್ಸು ಬಂದಿರುವುದಿಲ್ಲ.

ಉಮ್ಮೆ ಹನಿಯ ಚಹರೆ 5.3 ಅಡಿ ಎತ್ತರ, ದೃಢವಾದ ಮೈಕಟ್ಟು, ಗೋಧಿ ಮೈಬಣ್ಣ, ದುಂಡನೆ ಮುಖ ಹೊಂದಿದ್ದು, ನೀಲಿ ಬಣ್ಣದ ಚೂಡಿದಾರ್ ಧರಿಸಿರುತ್ತಾರೆ. ಆಸ್ಪಿಯಾ ಕೌನೈನ್ ಚಹರೆ 4.00 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ದುಂಡನೆ ಮುಖ ಹೊಂದಿದ್ದು, ಕ್ರೀಂ ಬಣ್ಣದ ಅಂಗಿ ಹಾಗೂ ಕಪ್ಪು ಬಣ್ಣದ ಸ್ಕರ್ಟ್ ಧರಿಸಿರುತ್ತಾಳೆ. ಮೊಹಮದ್ ಸೂಫಿಯಾನ್ ಚಹರೆ 3.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ದುಂಡನೆ ಮುಖ ಹೊಂದಿದ್ದು, ಕ್ರೀಂ ಬಣ್ಣದ ಅಂಗಿ ಹಾಗೂ ಕಪ್ಪು ಬಣ್ಣದ ಚಡ್ಡು ಧರಿಸಿರುತ್ತಾನೆ.

ಈ ಕಾಣೆಯಾದ ವ್ಯಕ್ತಿಗಳ ಮಾಹಿತಿ ದೊರೆತಲ್ಲಿ ದೊಡ್ಡಪೇಟೆ ಪೊಲೀಸ್ ಠಾಣೆ ಸಂಖ್ಯೆ : 08182-261414/9611761255 ನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಅಪರಿಚಿತ ಮಹಿಳೆ ಸಾವು: ವಾರಸ್ಸುದಾರರ ಮಾಹಿತಿ ನೀಡಲು ಮನವಿ

ಶಿವಮೊಗ್ಗ: ನಗರದ ಮೆಗ್ಗಾನ್ ಆಸ್ಪತ್ರೆಯ ತುರ್ತು ಚಿಕಿತ್ಸಾ ಘಟಕದ ಎದುರಿನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡದ ಎ.ಆರ್ಟಿ ಸೆಂಟರ್ ವಿಭಾಗದ ಬಾಗಿಲಿನ ಹತ್ತಿರದಲ್ಲಿ ಕಟ್ಟಡ ನಿರ್ಮಾಣಕ್ಕೆಂದು ಸಂಗ್ರಹ ಮಾಡಿದ ಸಿಮೆಂಟ್ ಟೈಲ್ಸ್‌ಳ ಮೇಲೆ ಸುಮಾರು 50 ರಿಂದ 55 ವರ್ಷ ವಯಸ್ಸಿನ ಹೆಂಗಸು ಬಿದ್ದಿದ್ದು, ಆಕೆಯನ್ನು ಮೆಗ್ಗಾನ್ ಆಸ್ಪತ್ರೆ ಸಿಬ್ಬಂದಿಯವರ ಸಹಕಾರದಿಂದ ಮೆಗ್ಗಾನ್ ಆಸ್ಪತ್ರೆಗೆ ಕರೆದುಕೊಂಡು ಬಂದು ದಾಖಲಿಸಿದ್ದು. ಪರೀಕ್ಷೀಸಿದ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿರುತ್ತಾರೆ.

ಮೃತ ದೇಹವನ್ನು ಮೆಗ್ಗಾನ್ ಆಸ್ಪತ್ರೆ ಶವಾಗಾರಕ್ಕೆ ಸಾಗಿಸಿದ್ದು. ಮೃತದೇಹವೂ ಮೆಗ್ಗಾನ್ ಆಸ್ಪತ್ರೆ ಶವಾಗಾರದಲ್ಲಿಡಲಾಗಿದೆ.

ಮೃತಳು ಸುಮಾರು 05 ಅಡಿ 08 ಇಂಚು ಎತ್ತರ, ದುಂಡು ಮುಖ. ದೃಢವಾದ ಮೈಕಟ್ಟು ಹೊಂದಿದ್ದು ಮೃತಳ ತಲೆಯಲ್ಲಿ ಸುಮಾರು 10 ಇಂಚು ಉದ್ದದ ಕಪ್ಪು ಕೂದಲು ಇರುತ್ತದೆ. ಮೃತಳ ಮೈಮೇಲೆ ಕೆಂಪು ಬಣ್ಣದ ಹಳದಿ ಹೂವಿನ ಚಿತ್ರವಿರುವ ನೈಟಿ ಹಾಗೂ ಹಳದಿ ಬಣ್ಣದ ಬ್ಲೌಸ್ ಇರುತ್ತದೆ.

ಮೃತಳ ವಾರಸುದಾರರು ಯಾರಾದರೂ ಇದ್ದಲ್ಲಿ ದೊಡ್ಡಪೇಟೆ ಪೊಲೀಸ್ ಠಾಣೆ ಸಂಖ್ಯೆ : 08182-261414 ಅಥವಾ 9611761255 ನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ತಿಳಿಸಿದೆ.

## ಕಷ್ಟದ ಕಲಿಕೆಗಿಂತ ಇಷ್ಟದ ಕಲಿಕೆ ಮುಖ್ಯ: ಪ್ರಭಾರಿ ಮುಖ್ಯ ಶಿಕ್ಷಕ ದಡ್ಡಿ



ಹುಕ್ಕೇರಿ: ಶಾಲಾ ಮಕ್ಕಳಲ್ಲಿ ಕಷ್ಟದ ಕಲಿಕೆಗಿಂತ ಇಷ್ಟದ ಕಲಿಕೆ ಬಹಳ ಮುಖ್ಯವಾಗುತ್ತದೆ. ವಿದ್ಯಾಭ್ಯಾಸ ಅಂಕ ಗಳಿಕೆಗೆ ಮಾತ್ರ ಸಿಮೀತವಾಗದೇ ಸಾಮಾನ್ಯ ಜ್ಞಾನ ಪಡೆದುಕೊಳ್ಳುವತ್ತ ಹೆಚ್ಚಿನ ಮುತುರ್ವಜಿ ವಹಿಸಬೇಕು ಎಂದು ಪ್ರಭಾರಿ ಮುಖ್ಯ ಶಿಕ್ಷಕ ಎಂ.ಬಿ.ದಡ್ಡಿ ಅಭಿಪ್ರಾಯಪಟ್ಟರು.

ತಾಲೂಕಿನ ಶಿರಹಟ್ಟಿ ಬಿ.ಕೆ. ಗ್ರಾಮದಲ್ಲಿ ಸಂತ ಶ್ರೇಷ್ಠ ಭಕ್ತ ಕನಕದಾಸರ ಜಯಂತಿ ಮತ್ತು ನೂತನ ಎಸ್‌ಡಿಎಂಸಿ ಸದಸ್ಯರ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಮಕ್ಕಳಿಗೆ ಉತ್ತಮ ಪರಿಸರ ಇರುವ ಶಾಲೆಗಳಲ್ಲಿ ಕಲಿಕಾ ಜೀವನ ಕಳೆಯಲು ಪೋಷಕರು ಸಹಕರಿಸಬೇಕು. ಇರುವ ಸಂಪನ್ಮೂಲಗಳನ್ನು ಸದುಪಯೋಗ ಮಾಡಿಕೊಂಡು ಜಿಲ್ಲೆ ಮತ್ತು ರಾಜ್ಯದ ಮಟ್ಟದಲ್ಲಿ ಉತ್ತಮ ಸಾಧನೆ ಮಾಡಬೇಕು ಎಂದರು.

ನೂತನ ಎಸ್‌ಡಿಎಂಸಿ ಅಧ್ಯಕ್ಷ ಮಂಜುನಾಥ ಪಡದಾರ ಮಾತನಾಡಿ, ಹೊಸದಾಗಿ ಅಧ್ಯಕ್ಷ ಹುದ್ದೆ ದೊರೆತಿದ್ದು ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ. ಹಿರಿಯರ ಮಾರ್ಗದರ್ಶನ, ಸದಸ್ಯರ ಸಲಹೆ-ಸೂಚನೆ, ಸಿಬ್ಬಂದಿ ವರ್ಗದ ಸಹಕಾರದಿಂದ ಶಿರಹಟ್ಟಿ ಬಿ.ಕೆ ಸರ್ಕಾರಿ ಶಾಲೆಯನ್ನು ಮಾದರಿಯನ್ನಾಗಿ ಮಾಡಲಾಗುವುದು. ಆಯ್ಕೆಗೆ ಶ್ರಮಿಸಿದ ಎಲ್ಲರಿಗೂ ಆಭಾರಿಯಾಗಿದ್ದೇನೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಸಯ್ಯದ ಅಮ್ಮಣಗಿ ಅವರು ಸ್ವಂತ ಹಣದಿಂದ ಎಲ್ಲ ವಿದ್ಯಾರ್ಥಿಗಳಿಗೆ ಗುರುತಿನ ಚೀಟಿ ಮಾಡಿಸಿಕೊಡುವುದಾಗಿ ಘೋಷಿಸಿದರೆ, ಮಾಜಿ ಅಧ್ಯಕ್ಷ ಅಲಿಸಾಬ ಅಮ್ಮಣಗಿ ಅವರು ಸೌಂಡ್ ಸಿಸ್ಟಮ್ ಕೊಡುವುದಾಗಿ ವಾಗ್ದಾನ ಮಾಡಿದರು.

ಉಪಾಧ್ಯಕ್ಷೆ ವಿದ್ಯಾಶ್ರೀ ಬಡಿಗೇರ ಹಾಗೂ ಸದಸ್ಯರನ್ನು ಇದೇ ವೇಳೆ ಸನ್ಮಾನಿಸಿ ಗೌರವಿಸಲಾಯಿತು.

ಇದಕ್ಕೂ ಮೊದಲು ಭಕ್ತ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಶಿಕ್ಷಕಿ ಎಸ್.ಎ.ಸೌದಾಗರ ಸ್ವಾಗತಿಸಿದರು. ಶಿಕ್ಷಕ ಪಿ.ಕೆ. ಕಾಮತ್ ನಿರೂಪಿಸಿದರು. ಶಿಕ್ಷಕಿ ಬಸಮ್ಮ ಮುಂಗೋಣಿ ವಂದಿಸಿದರು.

ಶಿಕ್ಷಕರಾದ ಸತೀಶ ತೇರದಾಳ, ಮಾರುತಿ ಕಾಂಬಳೆ, ಸುರೇಖಾ ಪಾಟೀಲ, ಪೂನಂ ಹೊಂಕಳಿ, ಅಮರ ತಿಪ್ಪನಾಯಿಕ, ಪತ್ರಕರ್ತ ರವಿ ಕಾಂಬಳೆ, ಮುಖಂಡರಾದ ಕುಮಾರ ಖೋತ, ಮುದಕಯ್ಯಾ ಮಠದ, ಪೀರಸಾಬ ಅಮ್ಮಣಗಿ, ಸಿದ್ದಪ್ಪ ಪೂಜೇರಿ, ಪುಟ್ಟು ಚೌಗಲಾ, ಮೆಹಬೂಬಸಾಬ ಅಮ್ಮಣಗಿ, ವಿಠ್ಠಲ ಡಪರಿ, ಸುರೇಶ ಚೆನ್ನಿಕೊಪ್ಪಿ, ಬಸವರಾಜ ಘೋಣವಾಡಿ, ದತ್ತಾತ್ರೇಯ ಬಡಿಗೇರ, ಮಂಜುಳಾ ಕುರಳಿ, ಸುಜಾತಾ ತಳವಾರ, ಅಂಜುಮ ಮುಲ್ತಾನಿ, ಶಬಾನಾ ಅಮ್ಮಣಗಿ, ಹಸೀನಾ ಅಮ್ಮಣಗಿ, ನಿಯಾಜ ಅಮ್ಮಣಗಿ, ಸಿದ್ದಪ್ಪ ಹೊಸಮನಿ, ರಾಯಪ್ಪಾ ಹಾಲಟ್ಟಿ, ವಿದ್ಯಾಶ್ರೀ ನಾಯಿಕ ಮತ್ತಿತರರು ಉಪಸ್ಥಿತರಿದ್ದರು.

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ
ಶಾಖೆ:-ಪಂತ ನಗರ ತಾ/ಜಿ : ಬೆಳಗಾವಿ

**ಹರಾಜು ಪ್ರಕಟಣೆ**

**ಇಪಿ ಸಂಖ್ಯೆ:ಕ.ರಾ.ಸೌ.ಸಂ.ಸ.ನಿ/ಸ.ಸಂ.ಸ.ನಿ/ವ.ಅ.ಬೆ/236/2023-24**

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ ಶಾಖೆ-ಪಂತನಗರ ಸುಸ್ತಿದಾರರಾದ 1)ಶ್ರೀಮತಿ ರಮಾ ಈರಪ್ಪಾ ಕಾಚುಗೋಳ ಸಾ: ಬಾಳೇಕುಂದ್ರಿ ಕೆ.ಎಚ್ ತಾ/ಜಿ ಬೆಳಗಾವಿ ಹಾಗೂ 2) ಶ್ರೀಮತಿ ಹೇಮಾ ಅನಿಲ ಕಾಚುಗೋಳ ಇವರಿಂದ ದಿನಾಂಕ: 20/10/2023 ಕ್ಕೆ ಬರಬೇಕಾದ ಬಾಕಿ ಮೊತ್ತರೂ. 1,97,531+ ಬಡ್ಡಿ ಮತ್ತುಇತರೆ ವೆಚ್ಚಗಳ ಸಂದಾಯದ ಬಗ್ಗೆ ಈ ಕೆಳಗೆ ನಮೂದಿಸಲಾದ ಸ್ಥಿರ ಸ್ವತ್ತುಗಳ ಹರಾಜನ್ನು ಸೋಮವಾರ ದಿನಾಂಕ: 18/12/2023 ರಂದು ಬಹಿರಂಗ ಹರಾಜು ಮಾಡಲಾಗುವುದು ಅಥವಾ ಹರಾಜನ್ನು ಮುಂದೂಡಲಾದ ದಿನಾಂಕದಂದು ಸ್ಥಿರ ಸ್ವತ್ತುಗಳಿರುವ ಬಾಳೇಕುಂದ್ರಿ ಕೆ.ಎಚ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಾಳೇಕುಂದ್ರಿ ಕೆ.ಎಚ್ ಗ್ರಾಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದೆಂದು ತಿಳಿಸಲಾಗಿದೆ. ಸದರಿ ಹರಾಜು ಬೆಳ್ಳಗ್ಗೆ 11:00 ಘಂಟೆಗೆ ಪ್ರಾರಂಭವಾಗಿ ಅತ್ಯಧಿಕ ಮೊತ್ತಕ್ಕೆ ಬಿಡ್ ಕೂಗುವವರಿಗೆ ಸ್ವತ್ತನ್ನು ಮೂರು ಸಲಕ್ಕಾಗಿ ಖಾಯಂ ಮಾಡಲಾಗುವುದು.

ಸ್ಥಿರ ಸ್ವತ್ತುಗಳ ವಿವರ:- 1)ಶ್ರೀಮತಿ ರಮಾ ಈರಪ್ಪಾ ಕಾಚುಗೋಳ ಸಾ॥ ಬಾಳೇಕುಂದ್ರಿ ಕೆ.ಎಚ್ ಗ್ರಾಮ ಪಂಚಾಯತಿ ಆಸ್ತಿ ನಂ:496/2 ತಾ/ಜಿ: ಬೆಳಗಾವಿ ಬಾಳೇಕುಂದ್ರಿ ಕೆ.ಎಚ್ ಗ್ರಾಮದ ಬಾಳೇಕುಂದ್ರಿ ಕೆ.ಎಚ್ ಗ್ರಾಮಪಂಚಾಯತಿಯ ಆಸ್ತಿಯಾಗಿರುತ್ತದೆ.

**ಹರಾಜು ಬಗ್ಗೆ ಸಂಪರ್ಕಿಸಬೇಕಾದ ವಿಳಾಸ :**

**: ಮಾರಾಟಾಧಿಕಾರಿಗಳು :**

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ
ಪ್ರಧಾನ ಕಛೇರಿ: ಬೈಲಹೊಂಗಲ ಶಾಖೆ:-ಪಂತ ನಗರ
ಮೊಬೈಲ್ ನಂ: 9606098045, 7259001979

## ಕೇಂದ್ರದಿಂದ ಕರ್ನಾಟಕಕ್ಕೆ ಯಾವುದೇ ಬಾಕಿ ಉಳಿದಿಲ್ಲ: ಕಾಂಗ್ರೆಸ್ ಸರ್ಕಾರದ ಆರೋಪ ತಿರಸ್ಕರಿಸಿದ ನಿರ್ಮಲಾ ಸೀತಾರಾಮನ್



ಬೆಂಗಳೂರು: ಕೇಂದ್ರ ಸರ್ಕಾರದಿಂದ ಕರ್ನಾಟಕಕ್ಕೆ ಯಾವುದೇ ಬಾಕಿ ಉಳಿದಿಲ್ಲ ಎಂದು ಗುರುವಾರ ಹೇಳಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ರಾಜ್ಯಕ್ಕೆ ಬರ ಪರಿಹಾರವಾಗಿ ಬರಬೇಕಾದ ಎನ್ ಡಿ ಆರ್ ಎಫ್ ಹಣ ಬಿಡುಗಡೆಗೆ ಒಂದು ಕಮಿಟಿ ಇದೆ. ಅದು ನಿರ್ಧಾರ ಮಾಡುತ್ತದೆ ಎಂದು ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನರೇಂದ್ರ ಮೋದಿಯವರು ಪ್ರಧಾನಿ ಆಗುವ ಮುನ್ನವೇ 10 ವರ್ಷ ಕಾಲ ಗುಜರಾತ್ ಸಿಎಂ ಆಗಿದ್ದವರು. ಹೀಗಾಗಿ ಅವರಿಗೆ ಕೇಂದ್ರದಿಂದ ಹಣವನ್ನು ಸೂಕ್ತ ಕಾಲಕ್ಕೆ ಪಡೆಯುವುದು ಹೇಗೆಂಬುದು ಗೊತ್ತಿದೆ, "ರಾಜ್ಯ ಸರಕಾರದ ಆರೋಪಗಳಲ್ಲಿ ಹುರುಳಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯದ ಕೃಷಿ, ಕಂದಾಯ ಸಚಿವರು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಆರೋಪಗಳನ್ನು ಮಾಡಬಹುದು. ಆ ಪತ್ರ ನನಗೆ ತಲುಪುವ ಮುನ್ನವೇ ಸಾಮಾಜಿಕ ಜಾಲತಾಣದಲ್ಲಿ ಹಾಕ್ತಾರೆ. ಬೆಂಗಳೂರಿನಲ್ಲಿ ಮಾತ್ರ ಈ ವಿಚಾರವನ್ನು ಹೇಳುತ್ತಿಲ್ಲ. ಎರಡು ದಿನಗಳ ಹಿಂದೆ, ಕೇರಳದಲ್ಲಿದ್ದಾಗಲೂ ಹೀಗೆ ಹೇಳಿದ್ದೇನೆ. "ನಮ್ಮ ಕಡೆಯಿಂದ ಕರ್ನಾಟಕಕ್ಕೆ ಏನೂ ಬಾಕಿ ಇಲ್ಲ, ನಾನು ರಾಜ್ಯದ ಸಂಸದೆಯಾಗಿದ್ದು, ನನಗೂ ಜವಾಬ್ದಾರಿ ಇದೆ.

ಯಾವುದೇ ರೀತಿಯ ಬಾಕಿ ಇಲ್ಲ ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಪತ್ರಕ್ಕೆ ನಾನು ಕಾಯುತ್ತಿದ್ದೇನೆ. ಅಕೌಂಟೆಂಟ್ ಜನರಲ್ ಅ ಸಹಿ ಇಲ್ಲದೆ ಹಣ ಕಳಿಸೋಕೆ ಸಾಧ್ಯನಾ? ಎಂದು ಪ್ರಶ್ನಿಸಿದ ಅವರು, ಕಾಂಗ್ರೆಸ್ ಆರೋಪಗಳಲ್ಲಿ ಯಾವುದೇ ಸತ್ಯಾಂಶವಿಲ್ಲ ಎಂದರು.

ಕರ್ನಾಟಕಕ್ಕೆ ಬರ ಪರಿಹಾರಕ್ಕಾಗಿ ಎನ್‌ಡಿಆರ್‌ಎಫ್ ಹಣ ಬಿಡುಗಡೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸೀತಾರಾಮನ್, "ಎನ್‌ಡಿಆರ್‌ಎಫ್‌ಗಾಗಿ ಒಂದು ಸಮಿತಿ ಇದೆ. ಗೃಹ ಸಚಿವ ಅಮಿತ್ ಶಾ ಅದನ್ನು ಪರಿಶೀಲಿಸುತ್ತಾರೆ. ಈ ಸಂಬಂಧ ಕೃಷ್ಣ ಬೈರೇಗೌಡ ಭೇಟಿ ಮಾಡಿದ್ದು, ಅವರಿಗೆ ವಿವರಿಸಿದ್ದೇನೆ ಎನ್‌ಡಿಆರ್‌ಎಫ್ ಹಣ ಬಿಡುಗಡೆಗೆ ಕೇಂದ್ರ ತಂಡ ಬಂದು ಪರಿಶೀಲನೆ ಮಾಡಿ ವರದಿ ನೀಡಿದೆ. ಹೈಪವರ್ ಕಮಿಟಿ ಅದನ್ನು ಮುಂದೆ ನೋಡುತ್ತದೆ. ಹೈಪವರ್ ಕಮಿಟಿ ತೀರ್ಮಾನ ಮಾಡಿದ ತಕ್ಷಣವೇ ರಾಜ್ಯಕ್ಕೆ ಪರಿಹಾರ ಬರಲಿದೆ. ಅದನ್ನು ಯಾರು ನಿಲ್ಲಿಸಲು ಸಾಧ್ಯವಿಲ್ಲ ಎಂದರು.

# ರಾಜ್ಯ ಮಟ್ಟದ ಏಕಸ್ವರೂಪ ದರಪಟ್ಟಿಗಳ ಪುಸ್ತಕ ಬಿಡುಗಡೆಗೊಳಿಸಿದ ಸಚಿವ ಸತೀಶ್ ಜಾರಕಿಹೊಳಿ

ಹುಕ್ಕೇರಿ: ವಿವಿಧ ಇಲಾಖೆಗಳ ಕಾಮಗಾರಿಗಳ ರಾಜ್ಯ ಮಟ್ಟದ ಏಕಸ್ವರೂಪ ದರಪಟ್ಟಿಗಳ ಪುಸ್ತಕವನ್ನು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಬಿಡುಗಡೆಗೊಳಿಸಿದರು.

ಬೆಂಗಳೂರಿನ ಲೋಕೋಪಯೋಗಿ ಇಲಾಖೆಯ ಸಂಪರ್ಕ ಮತ್ತು ಕಟ್ಟಡ (ದಕ್ಷಿಣ)ದ ಮುಖ್ಯ ಎಂಜನೀಯರ್ ಕಚೇರಿಯಲ್ಲಿ ಗುರುವಾರ ನಡೆದ ಸಭೆಯಲ್ಲಿ ಸಚಿವರು, ಕಾಮಗಾರಿಗಳ ಪರಿಷ್ಕೃತ ಪುಸ್ತಕವನ್ನು ಬಿಡುಗಡೆ ಮಾಡಿದರು.



ಬಳಿಕ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ರಾಜ್ಯದ ವಿವಿಧ ಇಲಾಖೆಗಳ ಕಾಮಗಾರಿಗಳಿಗೆ ಅನ್ವಯವಾಗುವಂತೆ 2023–24ರ ಅವಧಿಗೆ ಅನುಷ್ಠಾನಗೊಳಿಸುವಲ್ಲಿ ಪಾರದರ್ಶಕ ಸುಗಮ ಆಡಳಿತಕ್ಕೆ ಅನುಕೂಲವಾಗುವ ನಿಟ್ಟನಲ್ಲಿ ನೂತನ ರಾಜ್ಯ ಮಟ್ಟದ ಏಕಸ್ವರೂಪ ದರಪಟ್ಟಿ ಜಾರಿಗೊಳಿಸಲಾಗಿದೆ ಎಂದರು.

ವಿವಿಧ ವೃಂದಗಳ ಹುದ್ದೆಗಳ ನಿಯೋಜನೆಗೆ ಸಚಿವರು ತಾತ್ವಿಕ ಒಪ್ಪಿಗೆ ನೀಡಿದರು.

ಅಗತ್ಯ ಪ್ರಸ್ತಾವನೆ ಸಲ್ಲಿಸಲು ಕೋರಿಕದರು. ಇದೇ ವೇಳೆ ಕಚೇರಿಯಲ್ಲಿ ಸಂತ ಶ್ರೇಷ್ಠ ಭಕ್ತ ಕನಕದಾಸ ಜಯಂತಿ ಆಚರಿಸಲಾಯಿತು.

ನ್ಯಾಯಾಲಯ, ವಲಯ ವ್ಯಾಪ್ತಿಯ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು.

ನೀರಾವರಿ, ಪಂಚಾಯತ್‌ರಾಜ್ ಇಲಾಖೆ, ಗ್ರಾಮಣ ಕುಡಿಯು ನೀರು, ನೌರ್ಮಲ್ಯ ಇಲಾಖೆ, ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ.ಎಸ್. ಸೆಲ್ವಕುಮಾರ, ಕಾರ್ಯದರ್ಶಿ ಸಿ.ಸತ್ಯನಾರಾಯಣ, ರಾಜ್ಯ ರಸ್ತೆ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಡಾ.ಕೆ.ಎಸ್.ಕೃಷ್ಣಾ ರೆಡ್ಡಿ, ಸಿಪಿಓ ಶಿವಯೋಗಿ ಹಿರೇಮಠ, ಪ್ರಧಾನ ಅಭಿಯಂತರ ಪ್ರದೀಪ ಮಿತ್ರ ಮಂಜುನಾಥ, ಮುಖ್ಯ ಯೋಜನಾಧಿಕಾರಿ ಎಸ್. ಎಸ್.ಪಾಟೀಲ, ವಿ.ಎನ್.ಪಾಟೀಲ, ಉಪ ಮುಖ್ಯ ಎಂಜನೀಯರ್ ಕೃಷ್ಣಾ ಅಗ್ನಿಹೋತ್ರಿ, ದುರ್ಗಪ್ಪ ಸೇರಿದಂತೆ ಇತರರು ಇದ್ದರು.

# ಏಡ್ಸ್ ಕುರಿತು ಜಾಗೃತಿ ಮೂಡಿಸುವ ಕೆಲಸ ಆಗಬೇಕು: ಜಿಲ್ಲಾಧಿಕಾರಿ

ಶಿವಮೊಗ್ಗ: ಸಾರ್ವಜನಿಕರಲ್ಲಿ ಮತ್ತು ಯುವಕರಲ್ಲಿ ಏಡ್ಸ್ ಕುರಿತಂತೆ ಹೆಚ್ಚು ಅರಿವು ಮೂಡಿಸುವ ಕಾರ್ಯಕ್ರಮ ಆಗಬೇಕು ಎಂದು ಜಿಲ್ಲಾಧಿಕಾರಿ ಡಾ. ಸೆಲ್ವಮಣಿ ಆರ್ ತಿಳಿಸಿದರು.

ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಶಿವಮೊಗ್ಗ, ಜಿಲ್ಲಾ ಪೊಲೀಸ್ ಇಲಾಖೆ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಮಬ ಕಲ್ಯಾಣ ಇಲಾಖೆ, ಭಾರತೀಯ ವೈದ್ಯಕೀಯ ಸಂಘ, ಕರ್ನಾಟಕ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ, ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸುಬ್ಬಯ್ಯ ನರ್ಸಿಂಗ್ ಕಾಲೇಜ್, ಬಾಪೂಜಿ ನರ್ಸಿಂಗ್ ಕಾಲೇಜ್, ನ್ಯಾಷನಲ್ ಲಾ ಕಾಲೇಜ್, ಎಫ್.ಪಿ.ಎ.ಐ ಶಿವಮೊಗ್ಗ ಹಾಗೂ ಸರ್ಕಾರೇತರ ಸಂಘ ಸಂಸ್ಥೆಗಳು ಶಿವಮೊಗ್ಗ ಇವರ ಸಹಯೋಗದಲ್ಲಿ ವಿಶ್ವ ಏಡ್ಸ್ ದಿನದ ಪ್ರಯುಕ್ತ



ಏರ್ಪಡಿಸಲಾಗಿದ್ದ "ಸಮುದಾಯಗಳು ಮುನ್ನಡೆಸಲಿ" ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.

ಭಾರತದಲ್ಲಿ ಏಡ್ಸ್ 1986 ರಲ್ಲಿ ಮೊದಲು ಕಾಣಿಸಿಕೊಂಡಿತು. 40 ಲಕ್ಷ ಜನರು ಈ ಸೋಂಕಿಗೆ ತುತ್ತಾಗಿದ್ದಾರೆ.

ಇದಕ್ಕೆ ಸೂಕ್ತವಾದ ಔಷಧವನ್ನು ವೈದ್ಯ ವಿಜ್ಞಾನಿಗಳು ಕಂಡುಹಿಡಿಯಲು ಸದಾ ಪ್ರಯತ್ನ ಮಾಡುತ್ತಿದ್ದಾರೆ. ಮುಖ್ಯವಾಗಿ ಜನರಲ್ಲಿ ಏಡ್ಸ್ ಕುರಿತು ಅರಿವು ಮತ್ತು ಜಾಗೃತಿ ಮೂಡಿಸಬೇಕು. ಆಗ ಮಾತ್ರ ಇದನ್ನು ತಡೆಗಟ್ಟಲು ಸಾಧ್ಯ ಎಂದು ಅವರು ಹೇಳಿದರು.

# ಬೆಳಗಾವಿ ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಐಎನ್ ಟಿಯುಸಿ ಘಟಕದ ಜಿಲ್ಲಾ ಮಹಿಳಾ ಅಧ್ಯಕ್ಷರಾಗಿ ವೈಷ್ಣವಿ ಪಾಟೀಲ್ ನೇಮಕ

ಬೆಳಗಾವಿ: ಬೆಳಗಾವಿ ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಐಎನ್ ಟಿಯುಸಿ ಘಟಕದ ಜಿಲ್ಲಾ ಮಹಿಳಾ ಅಧ್ಯಕ್ಷರನ್ನಾಗಿ ವೈಷ್ಣವಿ ಪಾಟೀಲ್ ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ.

ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಇಂಟರ್ ವಿಭಾಗದ ರಾಷ್ಟ್ರೀಯ ಅಧ್ಯಕ್ಷರಾದ ಡಾಕ್ಟರ್ ಜಿ.ಸಂಜೀವ್ ರೆಡ್ಡಿ ಹಾಗೂ (INTUC) ಘಟಕದ ರಾಜ್ಯಾಧ್ಯಕ್ಷರಾದ ಡಿ.ಲಕ್ಷ್ಮೀ ವೆಂಕಟೇಶ್ವರವರ ಆದೇಶದ ಮೇರೆಗೆ ಮತ್ತು ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರರವರ ಅನುಮೋದನೆ ಮೇರೆಗೆ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷರರಾದ ಸತೀಶ್ ಜಾರಕಿಹೊಳಿರವರ ಅನುಮೋದನೆ ಮೇರೆಗೆ ಶ್ರೀಮತಿ ವೈಷ್ಣವಿ ವಿನಾಯಕ ಪಾಟೀಲ್ ಅವರನ್ನು ಬೆಳಗಾವಿ ಜಿಲ್ಲಾಇಂಟರ್ (INTUC) ಘಟಕದ ಜಿಲ್ಲಾ ಮಹಿಳಾ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ.



ಈ ನೇಮಕಾತಿ ಆದೇಶ ಪತ್ರವನ್ನು ವೈಷ್ಣವಿ ಪಾಟೀಲ್ ಅವರು ಕೆಪಿಸಿಸಿ ಕಾರ್ಯಾಧ್ಯಕ್ಷರ ಲೋಕೋಪಯೋಗಿ ಇಲಾಖೆಯ ಸಚಿವ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ಹಸ್ತದಿಂದ ಪಡೆದುಕೊಂಡರು. ತದನಂತರದಲ್ಲಿ ಖಾನಾಪುರದಲ್ಲಿ ಮಾಜಿ ಶಾಸಕಿ ಡಾ. ಅಂಜಲಿ ನಿಂಬಾಳ್ಕರ್ ಅವರು ಕೂಡಾ ಈ ನೇಮಕಾತಿಯ ಪ್ರತಿ ನೀಡಿ ಪ್ರೋತ್ಸಾಹಿಸಿದರು.

ವೈಷ್ಣವಿ ಪಾಟೀಲರು ನಂದಗಡದ ಗ್ರಾಮ ಪಂಚಾಯಿತಿ ಸದಸ್ಯೆ ಕೂಡಾರಾಗಿ ತಮ್ಮ ರಾಜಕೀಯ ಛಾಪು ಮೂಡಿಸಿದ್ದಾರೆ.

# ಹೆಲ್ಮೆಟ್ ಹಾಕದ ಲಾಯರ್ ಮೇಲೆ ಹಲ್ಲೆ PSI ಸೇರಿ 6 ಜನ ಪೊಲೀಸ್ ಸಿಬ್ಬಂದಿ ಅಮಾನತು

ಚಿಕ್ಕಮಗಳೂರು: ಹೆಲ್ಮೆಟ್ ಹಾಕದೆ ಬೈಕ್ ಚಲಾಯಿಸುತ್ತಿದ್ದ ಲಾಯರ್ ಮೇಲೆ ಪೊಲಿಸರು ಮನಸೋ ಇಚ್ಛೆ ಹಲ್ಲೆ ನಡೆಸಿದ್ದಾರೆ. ವಕೀಲರು ರಾತ್ರೋರಾತ್ರಿ ಪ್ರತಿಭಟನೆ ನಡೆಸಿದ್ದು, 6 ಜನ ಪೊಲೀಸರನ್ನು ಅಮಾನತು ಮಾಡಲಾಗಿದೆ.



ಚಿಕ್ಕಮಗಳೂರು ನಗರ ಠಾಣೆಯ ಪೊಲಿಸರ ಮೇಲೆ ಈ ಗಂಭೀರ ಆರೋಪ ಬಂದಿದೆ. ಹೆಲ್ಮೆಟ್ ಹಾಕದೆ ಬೈಕ್ ಓಡಿಸುತ್ತಿದ್ದ ವಕೀಲ ಪ್ರೀತಮ್ ಅವರನ್ನು ತಡೆದ ಪೊಲೀಸರು, ಫೈನ್ ಕಟ್ಟುವುದಾಗಿ ಹೇಳಿದರೂ ಬಿಡದೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ. ಬೈಕಿನಿಂದ ಕೀ ಕಿತ್ತುಕೊಂಡ ಪೊಲೀಸರನ್ನು ಪ್ರೀತಮ್ ಪ್ರಶ್ನೆ ಮಾಡಿದಾಗ ಮನಸೋ ಇಚ್ಛೆ ಥಳಿಸಿ, ಹಲ್ಲೆ ನಡೆಸಿದ್ದಾರೆ.

ಚಿಕ್ಕಮಗಳೂರು ಮಲ್ಲೇಗೌಡ ಸರ್ಕಾರಿ ಆಸ್ಪತ್ರೆಗೆ ಪ್ರೀತಮ್ ದಾಖಲು ಮಾಡಲಾಗಿದೆ. ಲಾಯರ್ ಪ್ರೀತಮ್ ಎದೆ, ಬೆನ್ನು, ಕೈಯಲ್ಲಿ ರಕ್ತದ ಕಲೆಗಳಿದ್ದು, ಬೆನ್ನು, ಕೈ, ಎದೆಗೆ ಗಂಭೀರ ಗಾಯಗಳಾಗಿವೆ. ರಾತ್ರಿ ಇದರಿಂದ ರೊಚ್ಚಿಗೆದ್ದ ವಕೀಲರು ಹಾಗೂ ಸ್ಥಳೀಯರು ಸರ್ಕಾರಿ ಆಸ್ಪತ್ರೆ ಹಾಗೂ ಪೊಲೀಸ್ ಠಾಣೆ ಬಳಿ ಜಮಾಯಿಸಿ, ಪ್ರತಿಭಟನೆ ನಡೆಸಿದರು.

ಪ್ರಕರಣ ಸಂಬಂಧ ಒಬ್ಬ ಕಖಖ ಸೇರಿ 6 ಪೊಲೀಸ್ ಸಿಬ್ಬಂದಿಗಳನ್ನು ಅಮಾನತು ಮಾಡಿ ಚಿಕ್ಕಮಗಳೂರು ಎಸ್ಪಿ ವಿಕ್ರಂ ಅಮಟೆ ಆದೇಶ ಹೊರಡಿಸಿದ್ದಾರೆ. ಹಲ್ಲೆ ನಡೆಸಿದವರ ವಿರುದ್ಧ ಸೂಕ್ತ ಕ್ರಮಕ್ಕೆ ವಕೀಲರು ರಾತ್ರಿ ಇಡೀ ಪ್ರತಿಭಟನೆ ನಡೆಸಿದ್ದರು.

# ಊಟಕ್ಕೆ ತೆರಳಿದ PSI ಪಿಸ್ತೂಲ್ ನಾಪತ್ತೆ



ಬೆಂಗಳೂರು: ಊಟಕ್ಕೆ ರೆಸ್ಟೋರೆಂಟ್ ಗೆ ತೆರಳಿ, ಊಟ ಮಾಡಿ ಕೈತೊಳೆದು ಬರುವಷ್ಟರಲ್ಲಿ ಬೆಂಗಳೂರಿನ ಕೆ.ಆರ್. ಪುರಂ ಪೊಲೀಸ್ ಠಾಣೆಯ ಪಿಎಸ್‌ಐ ಕಲಪ್ಪ ಅವರ ಪಿಸ್ತೂಲ್ ನಾಪತ್ತೆಯಾಗಿರೋ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ.

ಶಿವಮೊಗ್ಗಕ್ಕೆ ತೆರಳಿದ್ದಂತ ಬೆಂಗಳೂರಿನ ಕೆ.ಆರ್ ಪುರಂ ಪೊಲೀಸ್ ಠಾಣೆಯ ಪಿಎಸ್‌ಐ ಕಲ್ಲಪ್ಪ, ಊಟಕ್ಕಾಗಿ ಚಿತ್ರದುರ್ಗ ಬಳಿಯ ಜಾನಕೊಂಡದ ಬಳಿಯಲ್ಲಿದ್ದಂತ ರೆಸ್ಟೋರೆಂಟ್ ಒಂದಕ್ಕೆ ತೆರಳಿದ್ದರು. ಊಟ ಮಾಡಿ, ಕೈ ತೊಳೆದು ಬರೋದಕ್ಕೆ ತೆರಳಿ, ವಾಪಾಸ್ ಆಗೋ ವೇಳೆಯಲ್ಲಿ ಅವರ ಬಳಿಯಿದ್ದಂತ ಪಿಸ್ತೂಲ್ ನಾಪತ್ತೆಯಾಗಿರೋದಾಗಿ ತಿಳಿದು ಬಂದಿದೆ.

ಈ ವಿಷಯ ತಿಳಿದು ಸ್ಥಳಕ್ಕೆ ಚಿತ್ರದುರ್ಗ ಗ್ರಾಮಾಂತರ ಠಾಣೆಯ ಪೊಲೀಸರು ಆಗಮಿಸಿ, ಪರಿಶೀಲನೆ ನಡೆಸಿದರು. ಈ ಬಗ್ಗೆ ಪರಿಶೀಲನೆ ನಡೆಯುತ್ತಿದ್ದು, ಈವರೆಗೆ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿಲ್ಲ.

# ಹುಕ್ಕೇರಿಯಲ್ಲಿ ಏಡ್ಸ್ ಜಾಗೃತಿ ಜಾಥಾ




ಹುಕ್ಕೇರಿ: ಮಹಮಾರಿ ಎಚ್‌ಐವಿ ಅಥವಾ ಏಡ್ಸ್ ಸೋಂಕಿತರಿಗೆ ಮಾಡುವ ಯಾವುದೇ ರೀತಿಯ ಕಳಂಕ, ತಾರತಮ್ಯ ಶಿಕ್ಷಾರ್ಹವಾಗಿದ್ದು ಈ ಎಚ್‌ಐವಿ–ಏಡ್ಸ್ ಸೋಂಕಿನ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಕ್ಯಾರಗುಡ್ ಅವುಜೀಕರ ಆಶ್ರಮದ ಅಭಿನವ ಮಂಜುನಾಥ ಸ್ವಾಮೀಜಿ ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ ವಿಶ್ವ ಏಡ್ಸ್ ದಿನಾಚರಣೆ ನಿಮಿತ್ತ ಬೆಲ್ಲದ ಬಾಗೇವಾಡಿ ರಾಜೇಶ್ವರಿ ವಿಶ್ವನಾಥ ಕತ್ತಿ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸ್ ಸಂಸ್ಥೆಯ ಸಹಯೋಗದಲ್ಲಿ ನಡೆದ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು, ಎಚ್‌ಐವಿ ಅಥವಾ ಏಡ್ಸ್ ಹರಡುವಿಕೆಯನ್ನು ತಡೆಗಟ್ಟಲು ತಿಳಿವಳಿಕೆಯ ಅಗತ್ಯವಿದೆ ಎಂದರು.

ಪ್ರತಿವರ್ಷ ಡಿಸೆಂಬರ್ 1 ರಂದು ವಿಶ್ವದೆಲ್ಲೆಡೆ ವಿಶ್ವ ಏಡ್ಸ್ ದಿನ ಆಚರಿಸಲಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆ ಗುರುತಿಸಿರುವ ಎಂಟು ಅಧಿಕೃತ ಜಾಗತಿಕ ಸಾರ್ವಜನಿಕ ಆರೋಗ್ಯ ಅಭಿಯಾನಗಳಲ್ಲಿ ವಿಶ್ವ ಏಡ್ಸ್ ದಿನವೂ ಒಂದಾಗಿದೆ. ಹದಿಹರೆಯದವರು ಈ ಸೋಂಕಿನ ಕುರಿತು ತಿಳಿವಳಿಕೆ ಹೊಂದಬೇಕು. ಆರೋಗ್ಯದತ್ತ ಹೆಚ್ಚಿನ ಗಮನ ಕೇಂದ್ರಿಕರಿಸಬೇಕು ಎಂದು ಅವರು ಹೇಳಿದರು.

ಪಿಎಸ್‌ಐ ಅಭಿಜೀತ ಅಕ್ಕತಂಗೇರಹಾಳ, ಪ್ರಾಚಾರ್ಯ ವಿಠ್ಠಲ ಕಮತಿ, ಸಹಶಿಕ್ಷಕರಾದ ಪ್ರಧಾನಿ ವಗ್ಗರ, ಬಸವರಾಜ ಬಡಿಗವಾಡ, ಅಕ್ಷತಾ ದೇಶಪಾಂಡೆ, ಪೇದೆಗಳಾದ ಮಂಜುನಾಥ ಕಬ್ಬೂರ, ಸದ್ದಾಂ ರಾಮದುರ್ಗ, ಹಣಮಂತ ಖೋತ ಮತ್ತಿತರರು ಉಪಸ್ಥಿತರಿದ್ದರು.

# ತಿಂಡಿ ಪ್ಯಾಕೇಟ್ ಮೇಲೆ ಹೊಸ ಡೇಟ್ ಮುದ್ರಿಸುತ್ತಿದ್ದ ಗೋಡೌನ್ ಮೇಲೆ ದಾಳಿ

ನೆಲಮಂಗಲ: ಹಣದಾಸೆಗೆ ಬಿದ್ದ ವ್ಯಕ್ತಿಯೊಬ್ಬ, ಅವಧಿ ಮೀರಿದ ಮಕ್ಕಳ ತಿಂಡಿ ಪ್ಯಾಕೇಟ್ಗಳಿಗೆ ಹೊಸ ಅವಧಿ ದಿನಾಂಕ ಮುದ್ರಿಸಿ ಮಾರಾಟ ಮಾಡುತ್ತಿದ್ದ ಪ್ರಕರಣ ಬೆಂಗಳೂರು ಉತ್ತರ ತಾಲೂಕಿನ ಗೋಪಾಲಪುರ ವೇರ್‌ಹೌಸ್ನಲ್ಲಿ ಬೆಳಕಿಗೆ ಬಂದಿದೆ. ಗೋಡೌನ್ ಮೇಲೆ ಪೊಲೀಸರು ದಾಳಿ ನಡೆಸಿ ಕೋಟ್ಯಂತರ ಮೌಲ್ಯದ ವಸ್ತುಗಳನ್ನು ವಶಕ್ಕೆ ಪಡೆದಿದ್ದಾರೆ.



ಬೆಂಗಳೂರಿನ ಕೋರಮಂಗಲದ ರೋಹಿತ್ ಫರ್ನಾಂಡಿಸ್ ಎಂಬಾತ ಗ್ರಾಮದ ನಾರಾಯಣಪ್ಪ ಅವರಿಂದ ಆರು ತಿಂಗಳ ಹಿಂದೆ ಗೋಡೌನ್ ಅನ್ನು ಬಾಡಿಗೆಗೆ ಪಡೆದಿದ್ದನು. ಹಣದ ದುರಾಸೆಗೆ ಬಿದ್ದಿದ್ದ ರೋಹಿತ್ ಫರ್ನಾಂಡಿಸ್, ಕಂಪನಿಯ ಯಾವುದೇ ನಾಮಫಲಕ ಹಾಕದೆ ಬೆಂಗಳೂರಿನಿಂದ ಅವಧಿ ಮೀರಿದ ಆಹಾರ ಪ್ಯಾಕೇಟ್ ತರಿಸಿಕೊಂಡು ಹೊಸ ಅವಧಿ ದಿನಾಂಕ ಮುದ್ರಿಸುತ್ತಿದ್ದನು.

ಥಿನ್ನರ್ ಹಾಗೂ ಕೆಮಿಕಲ್ ಸಹಾಯದಿಂದ ಹೊಸ ಎಕ್ಸ್ಪೈರ್ ಡೇಟ್ ಮುದ್ರಣ ಮಾಡಲಾಗುತ್ತಿತ್ತು. ಈ ವಿಚಾರ ಸ್ಥಳೀಯರಿಗೆ ತಿಳಿದು ಮಾಹಿತಿ ಬಹಿರಂಗವಾಗಿದೆ.

ತಕ್ಷಣ ದಾಳಿ ನಡೆಸಿದ ಮಾದನಾಯಕನಹಳ್ಳಿ ಠಾಣಾ ಪೊಲೀಸರು, ಮ್ಯಾನೇಜರ್ ವೆಂಕಟೇಶ್ ಸೇರಿದಂತೆ ಇಬ್ಬರನ್ನು ಬಂಧಿಸಿದ್ದು, ಕೋಟ್ಯಂತರ ಮೌಲ್ಯದ ಆಹಾರ ಸಾಮಾಗ್ರಿಗಳು, ಥಿನ್ನರ್ ಹಾಗೂ ಕೆಮಿಕಲ್ ವಶಕ್ಕೆ ಪಡೆದಿದ್ದಾರೆ. ದಾಳಿ ವೇಳೆ 15 ಕ್ಕೂ ಹೆಚ್ಚು ಕಾರ್ಮಿಕರು ಸ್ಥಳದಿಂದ ಪರಾರಿಯಾಗಿದ್ದಾರೆ.

# ಇಂದಿನಿಂದ ಸಿಮ್ ಕಾರ್ಡ್ ಹೊಸ ನಿಯಮ: ರೂಲ್ಸ್ ಬ್ರೇಕ್ ಮಾಡಿದ್ರೆ 10 ಲಕ್ಷ ದಂಡ ಫಿಕ್ಸ್

ಬೆಂಗಳೂರು: ದೂರಸಂಪರ್ಕ ಇಲಾಖೆ ನಕಲಿ ಸಿಮ್ ಕಾರ್ಡ್‌ಗಳಿಗೆ ಸಂಬಂಧಿಸಿದ ವಂಚನೆಗಳನ್ನು ತಡೆಗಟ್ಟಲು ಡಿಸೆಂಬರ್ 1, 2023 ರಿಂದ ಹೊಸ ಸಿಮ್ ಕಾರ್ಡ್ ನಿಯಮಗಳನ್ನು ಜಾರಿಗೆ ತರುತ್ತಿದೆ.

ನಕಲಿ ಸಿಮ್ ಕಾರ್ಡ್‌ಗಳಿಗೆ ಲಿಂಕ್ ಮಾಡಲಾದ ವಂಚನೆಗಳನ್ನು ಪರಿಹರಿಸಲು ಈ ನಿಯಮಗಳನ್ನು ರೂಪಿಸಲಾಗಿದ್ದು, ಅನುಸರಿಸದಿದ್ದಲ್ಲಿ ದಂಡ ಮತ್ತು ಜೈಲು ಶಿಕ್ಷೆ ಗ್ಯಾರೆಂಟಿಯಾಗಿದೆ. ಡಿಸೆಂಬರ್ 1 ರಿಂದ ದೇಶದ ಟೆಲಿಕಾಂ ಕ್ಷೇತ್ರದಲ್ಲಿ ದೊಡ್ಡ ಬದಲಾವಣೆಯಾಗಿದೆ. ದೂರಸಂಪರ್ಕ ಇಲಾಖೆ ಅಥವಾ ಡಾಟ್ ಈ ಹಿಂದೆ ಸಿಮ್ ಕಾರ್ಡ್‌ಗಳನ್ನು ಮಾರಾಟ ಮಾಡುವ ನಿಯಮಗಳನ್ನು ಬದಲಾಯಿಸುವುದಾಗಿ ಘೋಷಿಸಿತ್ತು. ಇನ್ನು ಮುಂದೆ, ಮಾರಾಟಗಾರರು ಸಿಮ್ ಕಾರ್ಡ್‌ಗಳನ್ನು ಮಾರಾಟ ಮಾಡುವಲ್ಲಿ ಅನೇಕ ನಿಯಮಗಳನ್ನು ಅನುಸರಿಸಬೇಕಾಗುತ್ತದೆ.

ದೂರಸಂಪರ್ಕ ಇಲಾಖೆಯ ಈ ನಿಯಮವನ್ನು ಪಾಲಿಸದಿದ್ದರೆ 10 ಲಕ್ಷ ರೂಪಾಯಿಗಳವರೆಗೆ ದಂಡ ಕಟ್ಟಬೇಕು. ದೇಶದಲ್ಲಿ ಹೆಚ್ಚುತ್ತಿರುವ ಸಿಮ್ ಕಾರ್ಡ್ ವಂಚನೆ ದರವನ್ನು ತಡೆಯಲು ಸರ್ಕಾರದಿಂದ ಈ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ನಕಲಿ ಸಿಮ್ ಕಾರ್ಡ್‌ಗಳ ಮಾರಾಟವನ್ನು ತಡೆಯಲು ಮಾರಾಟಗಾರರಿಗೆ ಈ ನಿಯಮ ತಂದಿದ್ದರೂ, ಇದು ಖರೀದಿದಾರರ ಮೇಲೂ ಪರಿಣಾಮ ಬೀರುತ್ತದೆ. ಬಹಳ ದಿನಗಳಿಂದ ಬರುತ್ತಿರುವ ದೂರುಗಳಿಗೂ ಸ್ವಲ್ಪ ಮಟ್ಟಿಗೆ ಪರಿಹಾರ ದೊರೆಯಲಿದೆ.

ದಿನದಿಂದ ದಿನಕ್ಕೆ ಪ್ರಿ–ಆಕ್ಟಿವೇಟೆಡ್ ಸಿಮ್ ಕಾರ್ಡ್‌ಗಳು ದೇಶದಲ್ಲಿ ಮಾರಾಟವಾಗುತ್ತಿವೆ. ಹೆಚ್ಚಿನ ಸಂದರ್ಭಗಳಲ್ಲಿ, ಆ ಸಿಮ್‌ಗಳನ್ನು ಬೇರೆಯವರ ಹೆಸರಿನಲ್ಲಿ ನೋಂದಾಯಿಸಲಾಗಿದೆ. ಈಗ ಸಿಮ್ ಕಾರ್ಡ್ ಮಾರಾಟವನ್ನು ಕಟ್ಟುನಿಟ್ಟಾಗಿ ಮಾಡಲು ಸಾಧ್ಯವಾದರೆ, ಅಂತಹ ವಂಚನೆಯ ಪ್ರಕರಣಗಳು ಕಡಿಮೆಯಾಗುತ್ತವೆ ಎಂದು ಸರ್ಕಾರ ಹೇಳಿದೆ.



ಹೊಸ ನಿಯಮವು ಜಾರಿಗೆ ಬಂದ ನಂತರ, ಮಾರಾಟಗಾರರು ಪೂರ್ವ–ಸಕ್ರಿಯಗೊಳಿಸಿದ ಸಿಮ್‌ಗಳನ್ನು ಇತರರಿಗೆ ವರ್ಗಾಯಿಸಲು ಸಾಧ್ಯವಾಗುವುದಿಲ್ಲ. ಇದರಿಂದಾಗಿ ಸಿಮ್ ಕಾರ್ಡ್ ಮಾರಾಟ ಮಾಡುವ ಮಾರಾಟಗಾರರ ಮೇಲೆ ನಿಗಾ ಇಡುವ ಮೂಲಕ ಗ್ರಾಹಕರ ಸಮಸ್ಯೆಗೆ ಅಂತ್ಯ ಹಾಡಲು ದೂರಸಂಪರ್ಕ ಇಲಾಖೆ (ಡಿಒಟಿ) ಮುಂದಾಗಿದೆ.

ಸಿಮ್ ಮಾರಾಟಗಾರನು ತನ್ನ ಅಂಗಡಿ ಸಿಬ್ಬಂದಿಯ ಎಲ್ಲಾ ಮಾಹಿತಿಯ ದಾಖಲೆಯನ್ನು ಇಟ್ಟುಕೊಳ್ಳಬೇಕು. ಅಂಗಡಿ ಸಿಬ್ಬಂದಿ ಕೂಡ ಪೊಲೀಸ್ ಪರಿಶೀಲನೆಗೆ ಹೋಗಬೇಕಾಗುತ್ತದೆ. ಆಂಖ ನ ಹೊಸ ನಿಯಮಗಳ ಪ್ರಕಾರ, ಕಾರ್ಪೊರೇಟ್ ಖಆ ಸಂಖ್ಯೆ ಅಥವಾ ಅಖಓ ಸಂಖ್ಯೆಯನ್ನು ಪ್ರತಿ ಖಖಓ ಕಾರ್ಡ್ ಅಂಗಡಿಗೆ (ಚಿಲ್ಲರೆ) ನೀಡಲಾಗುತ್ತದೆ. ಈ ತುರ್ತು ಸಂಖ್ಯೆ ಇಲ್ಲದೆ ಯಾರೂ ಸಿಮ್ ಕಾರ್ಡ್ ಅನ್ನು ಮಾರಾಟ ಮಾಡಲು ಸಾಧ್ಯವಿಲ್ಲ.

ಅಡಿಯಲ್ಲಿ ನೋಂದಾಯಿಸಲು ಚಿಲ್ಲರೆ ಅಂಗಡಿಯು ಆಧಾರ್, ಕಂಓ, ಪಾಸ್‌ಪೋರ್ಟ್ ಮತ್ತು ಉಖಖ ವಿವರಗಳನ್ನು ಒದಗಿಸಬೇಕಾಗಿದೆ. ನೋಂದಣಿ ಇಲ್ಲದೆ ಯಾವುದೇ ಅಂಗಡಿಯು ಸಿಮ್ ಕಾರ್ಡ್ ಅನ್ನು ಮಾರಾಟ ಮಾಡಲು ಸಾಧ್ಯವಿಲ್ಲ. ಈ ನೋಂದಣಿ ಇಲ್ಲದೆ ಅಂಗಡಿಯು ಸಿಮ್ ಕಾರ್ಡ್‌ಗಳನ್ನು ಮಾರಾಟ ಮಾಡಿದರೆ, ಅದರ ಐಡಿಯನ್ನು ನಿರ್ಬಂಧಿಸಲಾಗುತ್ತದೆ.

ಇನ್ನು ಒಂದುವೇಳೆ ಒಬ್ಬ ವ್ಯಕ್ತಿಯು ಸಿಮ್ ಕಾರ್ಡ್ ಅನ್ನು ಕಳೆದುಕೊಂಡರೆ ಅಥವಾ ಸಿಮ್ ಕಟ್ ಆದರೆ, ಅವನು ಪರಿಶೀಲನೆ ಪ್ರಕ್ರಿಯೆಯ ಮೂಲಕವೇ ಹೋಗಬೇಕಾಗುತ್ತದೆ. ಸಿಮ್ ಕಾರ್ಡ್‌ಗಳನ್ನು ಮಾರಾಟ ಮಾಡಲು ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲು ಜಿಯೋ, ಏರ್ಟೆಲ್, ವಿ, ಬಿಎಸ್‌ಎನ್‌ಎಲ್ಗೆ ನಿರ್ದೇಶನ ನೀಡಲಾಗಿದೆ.

# ದುಬಾರಿ ನಾಯಿ ಕೊಡಿಸಲಿಲ್ಲ ಎಂದು ಯುವಕ ಆತ್ಮಹತ್ಯೆ

ಹುಬ್ಬಳ್ಳಿ: ದುಬಾರಿ ನಾಯಿ ಮೇಲಿನ ಪ್ರೀತಿ ಓರ್ವ ಯುವಕನನ್ನು ಬಲಿಪಡೆದಿದೆ. ತಾನು ಕೇಳಿದ ನಾಯಿಯನ್ನು ಪೋಷಕರು ಕೊಡಿಸಲಿಲ್ಲವೆಂದು ಮನನೊಂದ ಯುವಕ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ.



ಹುಬ್ಬಳ್ಳಿ ಮಿಷನ್ ಕಾಪೌಂಡ್‌ನಲ್ಲಿ ಈ ಘಟನೆ ನಡೆದಿದ್ದು, ಅಲೆನ್ ಭಸ್ಮೆ (24) ಆತ್ಮಹತ್ಯೆಗೆ ಶರಣಾದ ಯುವಕ. ಅಲೆನ್ ನಾಯಿ ಪ್ರೇಮಿಯಾಗಿದ್ದು, 2 ಲಕ್ಷ ರೂ. ಮೌಲ್ಯದ ನಾಯಿಮರಿಯನ್ನು ಕೊಡಿಸುವಂತೆ ತಾಯಿಯ ಬಳಿ ಹಠ ಮಾಡುತ್ತಿದ್ದ.

ಮಗನ ಕಾಟಕ್ಕೆ ಬೇಸತ್ತು ಅಲೆನ್ ತಾಯಿ ಮನೆ ಬಿಟ್ಟು ಹೋಗಿದ್ದರು. ಇದರಿಂದ ಮನನೊಂದ ಅಲೆನ್ ಮನೆಯಲ್ಲಿ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಘಟನೆ ಬಗ್ಗೆ ಹುಬ್ಬಳ್ಳಿ ಉಪನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# "ವಿಶ್ವ ಏಡ್ಸ್ ದಿನ"–2023 ಬೃಹತ್ ಜಾಥಾ ಕಾರ್ಯಕ್ರಮ

ಬೆಳಗಾವಿ: ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಿಂದ ಬೃಹತ್ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಜಿಲ್ಲಾ ಮಟ್ಟದ ಸಮಾರಂಭದ ಕಾರ್ಯಕ್ರಮವನ್ನು ಅಡಿಟೋರಿಯಂ ಬಿಮ್ಸ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತು. ಪ್ರಾಸ್ತಾವಿಕವಾಗಿ ಮಾತನಾಡಿ ಡಾ: ಚಾಂದನಿ ಜಿ ದೇವಡಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು, ಬೆಳಗಾವಿ ಹೆಚ್.ಐ.ವಿ/ಏಡ್ಸ್ ಸೋಂಕಿತರಿಗೆ ಸಾಮಾಜಿಕ ಸವಲತ್ತುಗಳ ದೊರಕುತ್ತಿರುವ ಬಗ್ಗೆ ಮಾತನಾಡಿದರು. ಜಿಲ್ಲೆಯಲ್ಲಿ ಹಮ್ಮಿಕೊಂಡ ತರಬೇತಿ ಕಾರ್ಯಕ್ರಮದಬಗ್ಗೆ ತಿಳಿಸಿದರು. ಪ್ರೌಢಶಾಲೆಯ ಹಾಗೂ ಪದವಿ ಪೂರ್ವ ಮಹಾವಿದ್ಯಾಲಯಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಹದಿಹರೆಯದ ಆರೋಗ್ಯ ಶಿಕ್ಷಣ, ಇತರೆ ಇಲಾಖೆಗಳಿಗೆ ಮುಖ್ಯವಾಹಿನಿ ಮುಖಾಂತರ ತರಬೇತಿ, ಸಮುದಾಯ ಆಧಾರಿತ ಶಿಬಿರಗಳ ಆಯೋಜನೆ ಮಾಡಲಾಗುತ್ತಿದ್ದು, ಜಿಲ್ಲಾ ಪಂಚಾಯತ ವತಿಯಿಂದ ಪ್ರತಿ ತಿಂಗಳು ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳ ಆಯೋಜನೆ ಮಾಡಲಾಗುತ್ತಿದೆ, ಜಿಲ್ಲೆಯ ಪ್ರಗತಿ ಸಾಧಿಸಿರುವ ಬಗ್ಗೆ ಮಾತನಾಡಿದರು.

ಸಮಾರಂಭದ ಉದ್ಘಾಟನೆಯನ್ನು ಗೌರವಾನ್ವಿತ ಶ್ರೀ ಪಿ ಮುರಳಿಮೋಹನರೆಡ್ಡಿ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲ ಕಾನೂನು ಸೇವಾ ಪ್ರಾಧಿಕಾರ, ಬೆಳಗಾವಿ ನೆರವೇರಿಸಿ ಮಾತನಾಡುತ್ತಾ ಜಿಲ್ಲೆಯಲ್ಲಿ ಜನಪದ ಕಲಾ ತಂಡಗಳ ಮೂಲಕ ಹೆಚ್.ಐ.ವಿ/ಏಡ್ಸ್ ಬಗ್ಗೆ ಜನ ಜಾಗೃತಿ ಮೂಡಿಸುತ್ತಿರುವದುಶ್ಲಾಘನೀಯ ಎಂದು ಅಭಿಪ್ರಾಯ ವ್ಯಕ್ತಪಡಿಸಿ ಕಲಾ ತಂಡಗಳಿಗೆ ಅಭಿನಂದನೆಗಳನ್ನು ತಿಳಿಸಿದರು. ಏಡ್ಸ್ ತಡೆ ರೋಗದ ತಡೆಗಟ್ಟುವ ಬಗ್ಗೆ ಪ್ರಯತ್ನ ಮಾಡೋಣ, ಹೆಚ್.ಐ.ವಿ. ಸೋಂಕಿತರಿಗೆ ಸರಕಾರದಿಂದ ಮತ್ತು ಕಾನೂನು ಸೇವಾ ಪ್ರಾಧಿಕಾರದಿಂದ ಅವರಿಗೆ ನ್ಯಾಯ ಒದಗಿಸುವ ಕೇಂದ್ರ ಸ್ಥಾಪನೆ ಮಾಡುವ ಬಗ್ಗೆ ಎನ್.ಜಿ.ಓ. ದವರು ಹೆಚ್ಚಿನ ರೀತಿಯಲ್ಲಿ ಸಹಕಾರ ನೀಡುವದು ಮತ್ತು ಸಾರ್ವಜನಿಕರಲ್ಲಿ ಅರಿವು ಜನ ಜಾಗೃತಿ ಮೂಡುತ್ತಿರುವ ಬಗ್ಗೆ ತಿಳಿಸಿದರು.

ಡಾ: ಎಸ್ ಎಮ್ ಪಲ್ಲೇದ ಉಪ ನಿರ್ದೇಶಕರು, ಬೆಳಗಾವಿ ವಿಭಾಗ ಬೆಳಗಾವಿ ಇವರು ಮಾತನಾಡಿ ವಿಶ್ವ ಏಡ್ಸ್ ದಿನ 01–12–23 ರಂದು ಯು. ಎಸ್.ಎ. ದಲ್ಲಿ ಕ್ರಿಸ್‌ಮಸ್ ಹಬ್ಬ ಅತೀ ಹೆಚ್ಚಿನ ವಿಜ್ರಂಭಣೆಯಲ್ಲಿ ಆಚರಿಸಲಾಗುತ್ತಿರುವದರಿಂದ ಪ್ರಾಶ್ಚಿಮಾತ್ಯ ಸಂಸ್ಕೃತಿ ನಮಗೆ ಬೇಡ ನಮ್ಮ ದೇಶಿಯೇ ಸಂಸ್ಕೃತಿಗೆ ಹೆಚ್ಚು ಒತ್ತು ಕೊಡಲು ಯುವಕ/ಯುವತಿಯರಿಗೆ ಕಿವಿ ಮಾತು ಹೇಳಿದರು, ಜನ ಜಾಗೃತಿ ಹಮ್ಮಿಕೊಳ್ಳಲು ತಿಳಿಸಿದರು.

ಡಾ: ಮಹೇಶ ಕೋಣಿ ಜಿಲ್ಲಾ ಆರೋಗ್ಯ ಮತ್ತು ಕು.ಕ. ಅಧಿಕಾರಿಗಳು, ಬೆಳಗಾವಿ ಇವರು ಮಾತನಾಡಿ ವಿಶ್ವ ಏಡ್ಸ್ ದಿನವನ್ನು ವಿಶ್ವದ್ಯಾಂತ ಆಚರಿಸಲಾಗುತ್ತಿದ್ದು, 1985 ರಿಂದ ಅಚರಣಿ ಪ್ರಾರಂವಾಗಿ ಈಗ 35 ವರ್ಷಗಳಾಗಿದ್ದು, ವಿಶ್ವ ಏಡ್ಸ್ ಜನ ಜಾಗೃತಿ ಮೂಡಿಸುವದು ಮತ್ತು ಸೋಂಕಿತರಿಗೆ ಧೈರ್ಯ ತುಂಬುವಂತ ಕೆಲಸ ಮಾಡುತ್ತಿದ್ದು, ಹೆಚ್.ಐ.ವಿ. ಸೋಂಕಿತರು ಮರಣ ಹೊಂದಿದ ಸ್ಮರಣೆಗೋಸ್ಕರ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿರುವ ಬಗ್ಗೆ ತಿಳಿಸಿದರು. ಜನರಿಗೆ ಮೊದಲು ಭಯ ಇತ್ತು ಈಗ ಅದು ಕಡಿಮೆಯಾಗಿದ್ದು, ಸಮುದಾಯಗಳು ಮುನ್ನಡೆಸಲಿ ಈ ಘೋಷಾ ವ್ಯಾಕದೊಂದಿಗೆ ತಮ್ಮ ತಮ್ಮ ಕ್ಷೇತ್ರಗಳಲ್ಲಿ ಹೆಚ್ಚಿನ ರೀತಿಯಲ್ಲಿ ಕೆಲಸ ಮಾಡಲು ತಿಳಿಸಲಾಯಿತು. ಆರೋಗ್ಯ ಇಲಾಖೆಯಿಂದ ಅಷ್ಟೇ ಅಲ್ಲದೇ ಸ್ವಯಂ ಸೇವಾ ಸಂಸ್ಥೆಗಳಿಂದ ಇನ್ನು ಹೆಚ್ಚಿನ ರೀತಿಯಲ್ಲಿ ಏಡ್ಸ್ ರೋಗವನ್ನು ನಿಯಂತ್ರಣ ಮಾಡಲು ತಿಳಿಸಿದರು.




ಡಾ: ವಿ ವಿ ಶಿಂಥೆ ಜಿಲ್ಲಾ ಶಸ್ತ್ರ ಚಿಕಿತ್ಸಕರು, ಬಿಮ್ಸ್ ಆಸ್ಪತ್ರೆ, ಬೆಳಗಾವಿ ಇವರು ಮಾತನಾಡಿ ಹೆಚ್.ಐ.ವಿ/ಏಡ್ಸ್ ಮಹಾಮಾರಿ ವೈರಸ್ ಬಗ್ಗೆ ತಿಳಿಸಿದರು. 2 ವರ್ಷಗಳಿಂದ ಹಿಂದೆ ಕೋವಿಡ್ ಎಲ್ಲ ದೇಶಗಳನ್ನು ಆವರಿಸಿತ್ತು, ಈಗ ಅದು ಕಡಿಮೆಯಾಗಿದೆ ನಾವು ನೀವು ಖುಷಿಯಿಂದ ಬದುಕುವಂತಾಗಿದೆ. ಹೆಚ್.ಐ.ವಿ. ಸೋಂಕು ಈಗ ತಾನೇ ಹುಟ್ಟುವ ಮಕ್ಕಳಿಗೆ ಹೆಚ್ಚು ಸೋಂಕು ಬರದೇ ತಡೆಯಲು ನಮ್ಮ ನಿಮ್ಮೆಲ್ಲರ ಪ್ರಯತ್ನ ಸಹಾಯ ಸಹಕಾರ ಬೇಕಾಗಿದ್ದು, ಹೊಸ ಕೇಸ್ ಬರದ ಹಾಗೇ ನಾವು ನೀವು ಸಮುದಾಯಗಳು ಕೂಡಿಕೊಂಡು ಯುವಕ/ಯುವತಿಯರಿಗೆ ಜನ ಜಾಗೃತಿ ಹಮ್ಮಿಕೊಳ್ಳಬೇಕಾಗಿದ್ದು, ಪಾಶ್ಚಿಮಾತ್ಯ ಸಂಸ್ಕೃತಿ ತೋರಿದು, ನಮ್ಮ ದೇಶಿಯ ಸಂಸ್ಕೃತಿ ಅಳವಡಿಸುವ ಬಗ್ಗೆ ಕರೆ ನೀಡಿ ಹೆಚ್.ಐ.ವಿ/ಏಡ್ಸ್ ಮುಕ್ತ ಭಾರತ 2030 ರೊಳಗಾಗಿ ಮಾಡಬೇಕಾಗಿರುವದರಿಂದ ನಾವೆಲ್ಲರೂ ಶ್ರಮಿಸಲು ಕರೆ ನೀಡಿದರು.

ಡಾ: ಕಮಲಾಕ್ಷಿ ಸಂಯೋಜನಾಧಿಕಾರಿಗಳು ಎನ್.ಎಸ್.ಎಸ್. ಕೋಶ ರಾಣಿ ಚನ್ನಮ್ಮಾ ವಿಶ್ವ ವಿದ್ಯಾಲಯ, ಬೆಳಗಾವಿ ತಮ್ಮ ವಿಶ್ವ ವಿದ್ಯಾಲಯ ಮುಖಾಂತರ ಅನೇಕ ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳ ಆರ್ಯೋಜನೆ, ಲಿಂಗರಾಜ ಮಹಾವಿದ್ಯಾಲಯದಲ್ಲಿ ನಾಟಕ ಮತ್ತು ರೀಲ್ ಮೇಕಿಂಗ್ ಕಾರ್ಯಕ್ರಮ ಹಮ್ಮಿಕೊಂಡಿರುವ ಬಗ್ಗೆ ತಿಳಿಸಿದರು. ಮೈಗ್ರಂಟ್ಸ್ ಬಹಳ ಇರುವದರಿಂದ ಹೆಚ್ಚಿಗೆ ಒತ್ತು ಕೊಡುವದು ಅವರ ಕುಟುಂಬ ಸುರಕ್ಷತೆವಾಗಿ ಇರಬೇಕಾದರೆ ನಮ್ಮ ನಿಮ್ಮಲ್ಲರ ಪ್ರಯತ್ನ ಅತೀ ಮುಖ್ಯವಾಗಿರುವದರ ಬಗ್ಗೆ ತಿಳಿಸಿದರು. ಜಾಥಾ ಕಾರ್ಯಕ್ರಮವನ್ನು ಗೌರವಾನ್ವಿತ ಶ್ರೀ ಪಿ ಮುರಳಿಮೋಹನರೆಡ್ಡಿ ಮಾನ್ಯ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೆಳಗಾವಿ ಇವರು ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಜಾಥಾ ಚನ್ನಮ್ಮಾ ವೃತ್ತ, ಡಾ: ಬಿ.ಆರ್. ಅಂಬೇಡ್ಕರ ಮಾರ್ಗವಾಗಿ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಅಡಿಟೋರಿಯಂ ಸಭಾಂಗಣದವರೆಗೆ ಜಾಥಾ ಕೊನೆಗೊಳಿಸಲಾಯಿತು.

ಜಾಥಾ ಕಾರ್ಯಕ್ರಮದಲ್ಲಿ ಡಾ ಮಹೇಶ ಕೋಣಿ ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳು, ಬೆಳಗಾವಿ ಡಾ: ಚಾಂದನಿ ಜಿ ದೇವಡಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು, ಬೆಳಗಾವಿ ಡಾ: ವಿ ವಿ ಶಿಂದೆ ಜಿಲ್ಲಾ ಶಸ್ತ್ರ ಚಿಕಿತ್ಸಕರು, ಬಿಮ್ಸ್ ಆಸ್ಪತ್ರೆ, ಬೆಳಗಾವಿ ಡಾ: ಸಂಜಯ ಘುಮ್ಮಗೋಳ ತಾಲೂಕಾ ಆರೋಗ್ಯಾಧಿಕಾರಿಗಳು, ಬೆಳಗಾವಿ ಡಾ:ಬಿ ಎನ್ ತುಕ್ಕಾರ ವೈದ್ಯಾಧಿಕಾರಿಗಳು ಬೆಳಗಾವಿಇವರು ಉಪಸ್ಥಿತರಿದ್ದರು,ಜಾಥಾ ಕಾರ್ಯಕ್ರಮದಲ್ಲಿ ಬಿಮ್ಸ್ ಸಾಮಾನ್ಯ ಶುಶ್ರೂಷಕಿಯರ ತರಬೇತಿ ಶಾಲೆ ವಿದ್ಯಾರ್ಥಿನಿಯರು, ಬಿಮ್ಸ್ ವೈದ್ಯಕೀಯ ಮಹಾವಿದ್ಯಾಲಯ ವೈದ್ಯಕೀಯ, ನರ್ಸಿಂಗ್, ವಿದ್ಯಾರ್ಥಿ/ವಿದ್ಯಾರ್ಥಿನಿಯರು, ಆರೋಗ್ಯ ಇಲಾಖೆಯ ಸಿಬ್ಬಂದಿಯವರು, ಜವಾಹರಲಾಲ ನೆಹರು ಮತ್ತು ಶೇಖ ಹೋಮಿಯೋಪತಿ ವೈದ್ಯಕೀಯ, ನರ್ಸಿಂಗ್, ವಿದ್ಯಾರ್ಥಿ/ವಿದ್ಯಾರ್ಥಿನಿಯರು, ಲಿಂಗರಾಜ ಮಹಾವಿದ್ಯಾಲಯ, ಶ್ರೀ ಮಹಾವೀರ ಪಿ ಮಿರ್ಜಿ ಮಹಾವಿದ್ಯಾಲಯ ಮತ್ತು ಎನ್.ಸಿ.ಸಿ. ವಿದ್ಯಾರ್ಥಿಗಳು, ಸ್ವಯಂ ಸೇವಾ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಆಶಾ ಕಾರ್ಯಕರ್ತೆಯರು, ಇತರೆ ಮಹಾವಿದ್ಯಾಲಯಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಘೋಷಣೆಗಳು ಹಾಗೂ ಪ್ಲೇ ಕಾರ್ಡ ಪ್ರದರ್ಶನ, ಜಾನಪದ ಕಲಾ ತಂಡಗಳೊಂದಿಗೆ ಸಾರ್ವಜನಿಕರಿಗೆ ಅರಿವು ಮೂಡಿಸುತ್ತಾ ಬಿಮ್ಸ್ ಅಡಿಟೋರಿಯಂ ಸಭಾಂಗಣದಲ್ಲಿ ಜಾಥಾ ಕೊನೆಗೊಳಿಸಲಾಯಿತು.

# ಯಾವ ಗ್ರಾಮವೂ ಅಭಿವೃದ್ಧಿ ವಂಚಿತವಾಗಲು ಅವಕಾಶವಿಲ್ಲ: ಚನ್ನರಾಜ ಹಟ್ಟಿಹೊಳಿ



ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಯಾವೊಂದು ಹಳ್ಳಿಯೂ ಅಭಿವೃದ್ಧಿಯಿಂದ ವಂಚಿತವಾಗಬಾರದೆನ್ನುವ ಗುರಿಯಿಟ್ಟುಕೊಂಡು ಕೆಲಸ ಮಾಡಲಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದ್ದಾರೆ.

ಶುಕ್ರವಾರ, ಬೆಳಗಾವಿ ಗ್ರಾಮೀಣ ಕ್ಷೇತ್ರದ ಬೆನಕನಹಳ್ಳಿ ಗ್ರಾಮದ ಶ್ರೀ ಮಹಾಲಕ್ಷ್ಮಿ ದೇವಿ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ಹಾಗೂ ದೇವಿಗೆ ಉಡಿ ತುಂಬುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ದೂರದೃಷ್ಟಿ ಇಟ್ಟುಕೊಂಡು ಕೆಲಸ ಮಾಡುತ್ತಿದ್ದಾರೆ. ಅವರು ಶಾಸಕರಾಗುವ ಮುನ್ನವೇ ಕ್ಷೇತ್ರದ ಸಮಗ್ರ ಅಭಿವೃದ್ಧಿಯ ಕನಸು ಕಂಡಿದ್ದರು. ಅಲ್ಲದೆ ಆಗಲೇ ಸರಕಾರದ ಮೇಲೆ ಒತ್ತಡ ತಂದು ಅನೇಕ ಯೋಜನೆಗಳನ್ನು ತಂದಿದ್ದರು. ಶಾಸಕರಾದ ನಂತರ 1,800 ಕೋಟಿ ರೂ. ಗಳಿಗಿಂತ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಮಾಡಲಾಗಿದೆ. ಈಗ ಸಚಿವರಾದ ಕ್ಷೇತ್ರವನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸುವ ಪಣತೊಟ್ಟು ಕೆಲಸ ಮಾಡುತ್ತಿದ್ದಾರೆ. ಇಡೀ ರಾಜ್ಯದ ಜವಾಬ್ದಾರಿ ಇದ್ದರೂ ಕ್ಷೇತ್ರವನ್ನು ಅವರು ನಿರ್ಲಕ್ಷಿಸಿದೇ ಆದ್ಯತೆಯ ಮೇಲೆ ಕೆಲಸ ಮಾಡುತ್ತಿದ್ದಾರೆ.

ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ಚನ್ನರಾಜ ವಿನಂತಿಸಿದರು.

ಕ್ಷೇತ್ರಕ್ಕೆ ತರಬಹುದಾದ ಯೋಜನೆಗಳ ಕುರಿತು ಹಿರಿಯರೊಂದಿಗೆ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳಲಾಗುತ್ತಿದೆ. ಎಲ್ಲ ಭಾಗಗಳಿಂದ ಅಭಿಪ್ರಾಯಗಳನ್ನು ಪಡೆಯಲಾಗುತ್ತದೆ. ಸಮಗ್ರ ಅಭಿವೃದ್ಧಿಯಾಗಬೇಕಾದರೆ ಎಲ್ಲವೂ ಕೈಜೋಡಿಸಿ ಕೆಲಸ ಮಾಡಬೇಕಾಗುತ್ತದೆ.

ಈವರೆಗಿನ ಕ್ಷೇತ್ರದ ಜನರ ಸಹಕಾರ ಮುಂದಿನ ದಿನಗಳಲ್ಲಿ ಸಹ ಇದೇ ರೀತಿಯಲ್ಲಿರಲಿ. ಎಲ್ಲರೂ ಸೇರಿ ಕೆಲಸ ಮಾಡೋಣ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಯುವರಾಜ ಕದಂ, ಮೌನಪ್ಪ ಪಾಟೀಲ, ಜ್ಯೋತಿಬಾ ದೇಸೂರಕರ್, ಬಾಳು ದೇಸೂರಕರ್, ಯಲ್ಲಪ್ಪ ಪಾಟೀಲ, ಕಲ್ಲಪ್ಪ ದೇಸೂರಕರ್, ಆನಂದ ಪಾಟೀಲ, ಮೀನಾಕ್ಷಿ ಪಾಟೀಲ, ಶಿಲ್ಪಾ ಮುಂಗಳೆಕರ್, ಕಲಾವತಿ ದೇಸೂರಕರ್, ಮಹೇಶ್ ಪಾಟೀಲ, ಲಕ್ಷ್ಮಣ ಖಂಡೇಕರ್, ರಾಹುಲ್ ದೇಸೂರಕರ್, ಮಹೇಶ ಕೋಲಕಾರ ಮೊದಲಾದವರು ಉಪಸ್ಥಿತರಿದ್ದರು.

# ವಿದ್ಯಾರ್ಥಿನಿಯರಿಗೆ ತಿಳುವಳಿಕೆ ಕಾರ್ಯಕ್ರಮ



ಬೆಳಗಾವಿ: ಪ್ರಯತ್ನ ಸಂಘಟನೆಯವರು ಇದೇ ದಿ 29 ಬುದವಾರದಂದು ಬೆಳಗಾವಿಯ ಚೆನ್ನಮ್ಮ ನಗರದಲ್ಲಿರುವ ಸರ್ಕಾರಿ ಶಾಲೆಗೆ ಹೋಗಿ ಅಲ್ಲಿಯ ವಿದ್ಯಾರ್ಥಿನಿಯರ ಜೊತೆ ಮಾತನಾಡಿ ವಯೋಸಹಜ ತೊಂದರೆಗಳ ಕುರಿತಂತೆ ತಿಳುವಳಿಕೆಯನ್ನು ನೀಡಿದರು.

ಈ ಶಾಲೆಯಲ್ಲಿ 5ರಿಂದ 8ನೆ ತರಗತಿಯ ಓದಿತ್ತಿರುವ 30 ವಿದ್ಯಾರ್ಥಿನಿಯರಿಗೆ ಅವಶ್ಯಕ ವಸ್ತುಗಳನ್ನು ವಿತರಿಸಲಾಯಿತು. ಡಾ. ಅನಿತಾ ಉಮದಿಯವರು, ಹೆಣ್ಣು ಮಕ್ಕಳ ಮುಟ್ಟಿನ ಸಮಯದಲ್ಲಿ ನೈರ್ಮಲ್ಯದ ಹಾಗೂ ಸಮಸ್ಯೆಗಳ ಕುರಿತು ವಿವರಿಸಿ ಹೇಳಿದರು ಅಲ್ಲದೇ ಆ ಕುರಿತಂತೆ ಪರಿಹಾರವನ್ನು ತಿಳಿಸಿದರು.

ಅಧ್ಯಕ್ಷೆ ಶ್ರೀಮತಿ ಶಾಂತಾ ಆಚಾರ್ಯ ಪ್ರಯತ್ನ ಸಂಘಟನೆ ನಡೆದ ಬಂದ ದಾರಿ ಪರಿಚಯಿಸುತ್ತ ಮುಂದೆ ಹಮ್ಮಿಕೊಳ್ಳಲಿರುವ ಸಾಮಾಜಿಕ ಕಾರ್ಯ ಕುರಿತಂತೆ ವಿವರಿಸಿ ಹೇಳಿದರು.

ಸಂಘಟನೆ ಕಾರ್ಯಕರ್ತರು ಮಕ್ಕಳಿಗೆ ಹಣ್ಣು ಮತ್ತು ಜ್ಯೂಸ್ ಪ್ಯಾಕೆಟ್‌ಗಳನ್ನು ವಿತರಿಸಿದರು. ಸಂಘಟನೆಯ ಮಂಗಳಾ, ಬೀನ, ಶ್ವೇತಾ, ಪದ್ಮಾ, ಗೌರಿ, ಸುನೀತಾ, ಶುಭಾ, ಸಂಗೀತಾ, ಶೀಲಾ ದೇಶಪಾಂಡೆ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ವಿಶ್ವ ಏಡ್ಸ ಜಾಗೃತಿ ದಿನಾಚರಣೆ



ಬೆಳಗಾವಿ: ಮಾರಕ ರೋಗವಾದ ಈ ಹೆಚ್‌ಐವಿ ಏಡ್ಸನ್ನೂ ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕೆಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್‌ಧಾರವಾಡ ಅವರು ಮಾತನಾಡುತ್ತಿದ್ದರ ಅವರು ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆ ಹಾಗೂ ಕೆ ಎಲ್ ಇ ಸೆಂಟಿನರಿಇನ್ಸ್ಟಿಟ್ಯೂಟ್‌ಆಫ ನರ್ಸಿಂಗ ಸೈನ್ಸ ನ ಸಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವಏಡ್ಸಜಾಗೃತಿ ದಿನಾಚರಣೆಯ ಅಂಗವಾಗಿ ಮಾತನಾಡುತ್ತಿದ್ದರು.

ಹೆಚ್‌ಐವಿ ಏಡ್ಸನ್ನು ಸಂಪೂರ್ಣವಾಗಿ ತಡಹಿಡಿಯಲು ಇಂದು ಸರ್ಕಾರ ಹಾಗೂ ಸ್ವಯಂ ಸೇವಾ ಸಂಘಟನೆಗಳು ಸೇವಾನಿರತರಾಗಿದ್ದರೂ ಸಹ ಬಹಳಷ್ಟು ಜನರು ಹೆಚ್‌ಐವಿ ಏಡ್ಸನ ಸೋಂಕಿತರನ್ನು ಹೊಂದುತ್ತಿದ್ದಾರೆ. ಇದನ್ನು ಕಡಿಮೆ ಗೊಳಿಸಲು ಇಂದು ಚಿಕಿತ್ಸೆಯ ಜೊತೆಗೆ ಜಾಗೃತಿಯು ಅತ್ಯವಶ್ಯಕವಾಗಿದೆ ಎಂದು ಕಾರ್ಯಕ್ರಮದಲ್ಲಿ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕೆ ಎಲ್ ಇ ಸೆಂಟಿನರಿ ಇನ್ಸ್ಟಿಟ್ಯೂಟ್‌ಆಫ ನರ್ಸಿಂಗ ಸೈನ್ಸ ನ ಪ್ರಾಂಶುಪಾಲರಾದ ಡಾ.ವಿಕ್ರಾಂತ ನೆಸರಿಅವರು ಮಾತನಾಡುತ್ತ ಇಂದು ವಿದ್ಯಾರ್ಥೀ ಜೀವನದೊಂದಿಗೆ ಶಿಸ್ತು ಸಂಯಮಗಳನ್ನು ರೂಡಿಸಿಕೊಂಡರೆ ಮುಂದೆ ಅವರು ಜೀವನದಲ್ಲಿ ಇಂತಹ ಮಾರಕ ರೋಗಗಳಿಗೆ ತುತ್ತಾಗದಂತೆತಡೆ ಹಿಡಿಯ ಬಹುದಾಗಿದೆ. ಶುಶ್ರೂಶಾ ವಿಧ್ಯಾರ್ಥಿಗಳಾದ ನೀವುಗಳು ಹೆಚ್‌ಐವಿ ಏಡ್ಸನ ಸೋಂಕಿಗೆ ಒಳಗಾದ ಯಾವುದೇ ವ್ಯಕ್ತಿಯನ್ನು ಯಾವುದೇ ರೀತಿಯ ಭೇದಭಾವವಿಲ್ಲದೇ ಉಪಚಾರ ನೀಡಬೇಕಾಗುತ್ತದೆ. ರೋಗವನ್ನು ದೂರವಿಡಬೇಕೆ ಹೊರತು ರೋಗಿಯನ್ನಲ್ಲ ಎಂಬುದನ್ನು ಗಮನದಲ್ಲಿಟ್ಟು ಕೊಂಡು ಉಪಚರಿಸಿ ಎಂದು ತಿಳುವಳಿಕೆ ನೀಡಿದರು.

ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಹೆಸರಾಂತ ವೈದ್ಯ ಹಾಗೂ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ ಬಿ ಅವರು" ಸಿನಾರಿಯೊ ಅಫ್‌ಹೆಚ್‌ಐವಿ ಆಂಡಏಡ್ಸ" ಎಂಬ ವಿಷಯದ ಮೇಲೆ ಉಪನ್ಯಾಸ ನೀಡಿ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರಿಸಿದರು.

ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಸಮಸ್ತ ವೈದ್ಯಕೀಯ ವೈದ್ಯಕೀಯೇತರ ಸಿಬ್ಬಂದಿ ಹಾಗೂ ಕೆ ಎಲ್ ಇ ಸೆಂಟಿನರಿ ಇನ್ಸ್ಟಿಟ್ಯೂಟ್‌ಆಫ ನರ್ಸಿಂಗ ಸೈನ್ಸ ನ ಶುಶ್ರೂಷಾ ವಿದ್ಯಾರ್ಥಿಗಳು ಸೇರಿ 120 ಜನ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕಾರ್ಯಕ್ರಮವನ್ನು ಜನಸಂಪರ್ಕಾಧಿಕಾರಿ ಅರುಣ ನಾಗಣ್ಣವರ ಸ್ವಾಗತಿಸಿದರು, ಶ್ವೇತಾ ಹಾಗೂ ಶಾಲೊಮ್ ನಿರೂಪಿಸಿದರು. ರುಕ್ಮಿಮಿ ಕಾಕತಿಕರ ವಂದಿಸಿದರು.

# ಲೇಖಕನಿಗಿಂತ ಬರಹಗಾರ ಮುಖ್ಯ: ಡಾ. ಗುರುದೇವಿ ಹುಲೆಪ್ಪನವರಮಠ



ಬೆಳಗಾವಿ: ಬರಹ ಒಂದು ತಪಸ್ಸು. ಸಾಕಷ್ಟುಅಧ್ಯಯನ ಮತ್ತು ಅನುಭವದಿಂದ ಮೌಲ್ಯಯುತಕೃತಿ ಹೊರಬರಲು ಸಾಧ್ಯ ಮುಖ್ಯವಾಗಿ ಬರೆದದ್ದನ್ನು ಓದುವವರು ಬೇಕು ಓದಿ ಪ್ರತಿಕ್ರಿಯಿಸಿದಾಗ ಲೇಖಕನ ಶ್ರಮ ಸಾರ್ಥಕವಾಗಿತ್ತದೆ ಎಂದು ಲೇಖಕಿ ಡಾ. ಗುರುದೇವಿ ಹುಲೆಪ್ಪನವರಮಠ ಹೇಳಿದರು. ಗುರುವಾರ 30.11.23ರಂದು ಬೆಳಗಾವಿಯ ರೇಷ್ಮೆಇಲಾಖೆಯ ನಿವೃತ್ತ ನೌಕರರ ಸಂಘ ಏರ್ಪಡಿಸಿದ್ದ ಸರಸ್ವತಿ ಭೋಸಲೆಯವರ ಮೂರು ಕೃತಿಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ನಾವು ಸದಭಿರುಚಿಯ ಹವ್ಯಾಸಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸದಾ ಕ್ರಿಯಾಶೀಲರಾಗಿದ್ದು ಬದುಕನ್ನು ಅನುಭವಿಸಬೇಕು. ಅದರಲ್ಲೂ ನೌಕರರಾದವರು ನಿವೃತ್ತಿಯ ನಂತರಕ್ರೀಡೆಓದು ಬರಹ ಮನರಂಜನೆಯಂತಹ ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿ ಕೊಂಡು ಜೀವನೋತ್ಸಾಹದಲ್ಲಿರಬೇಕು. ಸರಸ್ವತಿ ಭೋಸಲೆಯವರು ನಿವೃತ್ತಿಯ ನಂತರ ಬರಹದಲ್ಲಿ ತೊಡಗಿ ಕೊಂಡು ಉತ್ತಮವಾದ ಸಾಹಿತ್ಯ ರಚನೆಯಲ್ಲಿ ತೊಡಗಿಕೊಂಡು ಮಾದರಿಯಾಗಿದ್ದಾರೆ. ಮುಖ್ಯವಾಗಿ ರೇಷ್ಮೆ ಇಲಾಖೆ ನಿವೃತ್ತ ನೌಕರರ ಸಂಘ ಇಂತಹ ಅರ್ಥಪೂರ್ಣ ಕಾರ್ಯಕ್ರಮ ಏರ್ಪಡಿಸಿ ಮಾದರಿಯಾಗಿದ 'ಎಂದರು.

ಡಾ.ಆನಂದ ಪಾಟೀಲ, ಡಾ. ನೀತಾರಾವ್ ಕೃತಿಗಳ ಪರಿಚಯ ಮಾಡಿಕೊಟ್ಟರು. ನಿವೃತ್ತ ಅಧಿಕಾರಿ ಪಿ.ಎ.ಮಗದುಮ್ಮ ಅಧ್ಯಕ್ಷತೆ ವಹಿಸಿ ಇಲಾಖೆಯ ಸೇವೆಯಲ್ಲಿ ನಿರತ ನೌಕರರಾಗಿರಬಹುದು. ನಿವೃತ್ತ ನೌಕರರಾಗಿರ ಬಹುದು. ಅವರ ಸಾಹಿತ್ಯ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಸಂಘ ವೇದಿಕೆ ಒದಗಿಸಿ ಸಹಾಯ ಮಾಡಲುಸದಾ ಸಿದ್ಧವಿದೆಯೆಂದು ಹೇಳಿದರು.ವಿಶ್ರಾಂತ ಹಿರಿಯ ಅಧಿಕಾರಿ ಎನ್.ಬಿ.ಶೇಖ,ಎಂ.ಎಂ. ಖಾಜಿ ಮತ್ತು ಟಿ.ಎಸ್.ಹುದ್ದಾರ ಉಪಸ್ಥಿತರಿದ್ದರು. ಲೇಖಕಿ ಸರಸ್ವತಿ ಭೋಸಲೆ ಮತ್ತು ಬಾಲ ವಿಕಾಸ ಅಕಾಡೆಮಿಗೌರವ ಪ್ರಶಸ್ತಿ ಪುರಸ್ಕøತ ಸಾಹಿತಿ ಬಸವರಾಜಗಾರ್ಗಿಯವರನ್ನು ಸಂಘದ ಪರವಾಗಿ ಗೌರವಿಸಲಾಯಿತು. ಮುತ್ತು ರಾಜಉಪ್ಪಾರ ಸ್ವಾಗತಿಸಿದರು ಕಾರ್ಯದರ್ಶಿ ಕಾಳಪ್ಪ ಪತ್ತಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎ.ವಿ. ಪಾಟೀಲ ವಂದಿಸಿದರು. ಎಸ್. ಡಿ.ಹುದ್ದಾರ ನಿರೂಪಿಸಿದರು.

# ಟ್ಯಾಂಕರ್ ಡಿಕ್ಕಿ: ಮೂವರು ಸಾವು

ಕಲಬುರಗಿ: ರಸ್ತೆ ಬದಿ ಕೆಟ್ಟು ನಿಂತಿದ್ದ ವಾಹನ ದುರಸ್ತಿ ವೇಳೆ ಹಿಂದಿನಿಂದ ಟ್ಯಾಂಕರ್ ಡಿಕ್ಕಿ ಹೊಡೆದು, ಮೂವರು ಸ್ಥಳದಲ್ಲೇ ದುರ್ಮರಣ ಹೊಂದಿರುವ ಘಟನೆ ಸೇಡಂ ತಾಲೂಕಿನ ಇವಣಿ ಗ್ರಾಮದ ಬಳಿ ಗುರುವಾರ ಸಂಭವಿಸಿದೆ.

ಬೀದರ್ ಹಾಗೂ ಹೈದರಾಬಾದ್ ಮೂಲದ ವಿಠಲ್, ಮಂಗ್ಲಿ ಹಾಗೂ ಪ್ರಶಾಂತ್ ಮೃತರು. ಕಲಬುರಗಿಯಿಂದ ಸೇಡಂ ಮಾರ್ಗವಾಗಿ ಹೈದರಾಬಾದ್ಗೆ ತೆರಳುತ್ತಿದ್ದಾಗ ಮಾರ್ಗಮಧ್ಯೆ ಇವಣಿ ಗ್ರಾಮದ ಸಮೀಪ ಇವರ ವಾಹನ ಕೆಟ್ಟು ನಿಂತಿತ್ತು. ಹೀಗಾಗಿ ರಸ್ತೆ ಬದಿ ನಿಲ್ಲಿಸಿ ರಿಪೇರಿ ಮಾಡುತ್ತಿದ್ದರು. ಇದೇ ಸಂದರ್ಭದಲ್ಲಿ ಹಿಂದಿನಿಂದ ವೇಗವಾಗಿ ಬಂದ ಸಿಮೆಂಟ್ ಟ್ಯಾಂಕರ್ ಇವರಿದ್ದ ವಾಹನಕ್ಕೆ ಗುದ್ದಿದೆ. ಈ ಕುರಿತು ಮಾಡಬೂಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದೇಶಿ ವಿದ್ಯಾರ್ಥಿವೇತನ: ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿಗೆ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಂದ ವಿದೇಶಿ ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅರ್ಹ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ) ವಿದ್ಯಾರ್ಥಿಗಳು ಡಿಸೆಂಬರ್ 15, 2023 ರೊಳಗಾಗಿ https://sevasindhu.karanataka.gov.in/Sevasindhu/DepartmentServices ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತರ ಕರ್ನಾಟಕ ಸಮಗ್ರ ಅಭಿವೃದ್ಧಿ ಮತ್ತು ಸಮಸ್ಯೆಗೆ ಮುಕ್ತಿ ನೀಡುವ ಮಹತ್ವದ ನಿರ್ಧಾರ ತೆಗೆದುಕೊಳ್ಳಿ: ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ



ಬೆಳಗಾವಿ: ಉತ್ತರ ಕರ್ನಾಟಕ ಸಮಗ್ರ ಅಭಿವೃದ್ಧಿಗೆ ಪೂರಕವಾಗುವ ನಿಟ್ಟಿನಲ್ಲಿ ಬೆಳಗಾವಿ ಚಳಿಗಾಲ ಅಧಿವೇಶನದಲ್ಲಿ ಎಲ್ಲ ಸಚಿವ, ಶಾಸಕರು ಚರ್ಚೆ ನಡೆಸಿ ಈ ಭಾಗದ ಸಮಸ್ಯೆಗೆ ಮುಕ್ತಿ ನೀಡುವ ಮಹತ್ವದ ನಿರ್ಧಾರ ತೆಗೆದುಕೊಳ್ಳಬೇಕೆಂದು ಹುಕ್ಕೇರಿ ಹಿರೇಮಠ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ಎಂದರೆ ಜನರಿಗೆ ಗದ್ದಲ, ಗಲಾಟೆಯಲ್ಲಿಯೇ ಮುಗಿದು ಹೋಗುತ್ತದೆ. ಈ ಉತ್ತರ ಕರ್ನಾಟಕದ ಸಮಸ್ಯೆಯ ಬಗ್ಗೆ ಬೆಳಕು ಚೆಲ್ಲಬೇಕಿದ್ದ ವೇದಿಕೆಯಲ್ಲಿ ಕಾಲಹರಣ ಮಾಡುವುದು ಬೇಡ.

ಉತ್ತರ ಕರ್ನಾಟಕದ ಸಮಸ್ಯೆಯ ಬಗ್ಗೆ ಚರ್ಚೆ ನಡೆಸಲು ಬೆಳಗಾವಿಯಲ್ಲಿ ಸುವರ್ಣ ವಿಧಾನಸೌಧ ನಿರ್ಮಾಣ ಮಾಡಲಾಗಿದೆ. ಈ ಸೌಧಲ್ಲಿನ ಚರ್ಚೆಗಳು ಈ ಭಾಗದ ಜ್ವಲಂತ ಸಮಸ್ಯೆಗಳಿಗೆ ವೇದಿಕೆಯಾಗಿ, ಈ ಭಾಗದ ಜನರ ಆಶೋತ್ತರಗಳಿಗೆ ಸ್ಪಂದಿಸುವ ವೇದಿಕೆಯಾಗಬೇಕು ಎಂದು ಶ್ರೀಗಳು ತಿಳಿಸಿದ್ದಾರೆ.

ಬೆಳಗಾವಿಯ ಸುವರ್ಣ ವಿಧಾನಸೌಧ ಶಕ್ತಿ ಕೇಂದ್ರ. ಇಡೀ ಸರಕಾರವೇ 10 ದಿನಗಳ ಕಾಲ ಬೆಳಗಾವಿಯಲ್ಲಿ ಇರುತ್ತದೆ.

ಪಕ್ಷಾತೀತವಾಗಿ ಉತ್ತರ ಕರ್ನಾಟಕದ ಸಚಿವ, ಶಾಸಕರು ಈ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಿ ಜನರ ನಿರೀಕ್ಷೆಗಳಿಗೆ ಸ್ಪಂದಿಸುವ ಅವಶ್ಯಕತೆ ಇದೆ ಎಂದರು.

ಉತ್ತರ ಕರ್ನಾಟಕದ ಜನರಿಗೆ ಅನುಕೂಲವಾಗುವ ಬೆಂಗಳೂರಿನಲ್ಲಿರುವ ಮಹತ್ವದ ಸೆಕ್ರೆಟರಿ ಮಟ್ಟದ ಕಚೇರಿಗಳು ಬೆಳಗಾವಿ ಸುವರ್ಣ ವಿಧಾನಸೌಧಕ್ಕೆ ಸ್ಥಳಾಂತರ ಮಾಡಿ ಈ ಭಾಗದ ಜನರ ಕೂಗಿಗೆ ಇದೇ ಅಧಿವೇಶನದಲ್ಲಿ ಸರಕಾರ ಮಹತ್ವದ ನಿರ್ಣಯ ಕೈಗೊಳ್ಳುವಂತಾಗಲಿ ಎಂದು ಶ್ರೀಗಳು ಹೇಳಿದ್ದಾರೆ.

# ರೋಟರಿ ಉಪಕ್ರಮ: ಆರ್ಥಿಕವಾಗಿ ಹಿಂದುಳಿದ ಇಬ್ಬರು ಮಹಿಳೆಯರಿಗೆ ನೆರವು




ಬೆಳಗಾವಿ: ಸಮಾಜ ಕಾರ್ಯದಲ್ಲಿ ಸದಾ ಮುಂಚೂಣಿಯಲ್ಲಿರುವ ರೋಟರಿ ಕ್ಲಬ ಆಫ್ ವೇಣುಗ್ರಾಮ ಸಂಸ್ಥೆಯು ಆರ್ಥಿಕವಾಗಿ ಹಿಂದುಳಿದ ಇಬ್ಬರು ಮಹಿಳೆಯರಿಗೆ ತಲಾ ಒಂದು ಲಕ್ಷ ಆರ್ಥಿಕ ನೆರವು ನೀಡುವ ಮೂಲಕ ಮಹಿಳಾ ಸಶಕ್ತಿಕರಣಕ್ಕೆ ಪ್ರೋತ್ಸಹ ನೀಡಿದ್ದಾರೆ.

ರೋಟರಿ ಪಿಂಕ ಆಟೋ ಯೋಜನೆಯಡಿ ಹಲಗಾ ಗ್ರಾಮದ ಸಂಗಿತಾ ಸುಭಾಷ ಪಾಟೀಲ ಮತ್ತು ಸುನಿತಾ ಆದೇಶ ಬೆಲ್ಲದ ಈ ಇಬ್ಬರು ಮಹಿಳೆಯರಿಗೆ ಪಿಯಾಗೋ ಎಲೆಕ್ಟ್ರಿಕ ಆಟೋ ರಿಕ್ಷಾ ಖರೀದಿಸಲು ತಲಾ ಒಂದು ಲಕ್ಷ ರೂ. ಆರ್ಥಿಕ ನೆರವು ನೀಡುವ ಮೂಲಕ ಈ ಮಹಿಳೆಯರಿಗೆ ಆತ್ಮನಿರ್ಭರದ ಸ್ವಾವಲಂನೆಯ ಬದುಕು ಕಟ್ಟಿಕೊಳ್ಳಲು ನೆರವಾಗಿದ್ದಾರೆ.

ನ. 30 ಗುರುವಾರದಂದು ಹಲಗಾ ಗ್ರಾಮದ ಬಳಿವಿರುವ ಮೆ. ಹೈಟೆಕ್ ಮೋಟಾರ್ಸ ಆ್ಯಂಡ ಆಟೋಮೊಬೈಲ ಲಿ. ಸಂಸ್ಥೆಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಈ ಇಬ್ಬರು ಮಹಿಳೆಯರಿಗೆ ಪಿಯಾಗೊ ಎಲೆಕ್ಟ್ರಿಕ ಆಟೋ ರೀಕ್ಷಾಗಳನ್ನು ವಿತರಿಸಲಾಯಿತು.

ಆಟೋ ರಿಕ್ಷಾ ವಿತರಿಸಿ ಮಾತನಾಡಿದ ರೋಟರಿ 3170 ಡಿಸ್ಟ್ರಿಕ ಗವರ್ನರ ನಾಸಿರ ಬರೊಸದವಾಲಾ ಅವರು, ಸಮಾಜದಲ್ಲಿ ಎಲ್ಲ ವರ್ಗದ ಜನರಿಗೆ ಅಗತ್ಯವಿರುವ ಸಹಾಯವನ್ನು ರೋಟರಿ ಸಂಸ್ಥೆಯ ವತಿಯಿಂದ ಮಾಡಲಾಗುತ್ತದೆ. ಇದೀಗ ರೋಟರಿ ಪಿಂಕ್ ಆಟೋ ಯೋಜನೆಯಡಿ ಇಬ್ಬರು ಮಹಿಳೆಯರಿಗೆ ಆಟೋ ರಿಕ್ಷಾಗಳನ್ನು ನೀಡುವ ಮೂಲಕ ಮಹಿಳಾ ಸಶಕ್ತಿಕರಣಕ್ಕೆ ಹೊಸ ನಾಂದಿ ಹಾಡಲಾಗಿದೆ. ಈ ಮೂಲಕ ಮುಂಭರುವ ದಿನಗಳಲ್ಲಿ ಇನ್ನು ಹೆಚ್ಚಿನ ಸಹಾಯವನ್ನು ಮಹಿಳಾ ವರ್ಗಕ್ಕೆ ನೀಡಲು ಸಂಸ್ಥೆಯ ವತಿಯಿಂದ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದೆಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ರೋಟರಿ 3170 ಡಿಸ್ಟ್ರಿಕ ಅಸಿಸ್ಟಂಟ ಗವರ್ನರ ರೇಣು ಕುಲಕರ್ಣಿ, ಯೋಜನೆಯ ರೂವಾರಿ ಹಾಗೂ ಸಂಯೋಜಕ ವಿನಯಕುಮಾರ ಬಾಳಿಕಾಯಿ, ಮತ್ತು ಅರವಿಂದ ಖಡಬಡಿ, ರೋಟರಿ ಕ್ಲಬ್ ಆಫ್ ವೇಣುಗ್ರಾಮ ಅಧ್ಯಕ್ಷ ಸಂಜೀವ ದೇಶಪಾಂಡೆ, ಕಾರ್ಯದರ್ಶಿ ಪಂಕಜ ಪವಾರ, ಹೇಟೆಕ್ ಮೋಟಾರ್ಸ ನಿರ್ದೇಶಕರಾದ ರಾಜೇಂದ್ರ ದೇಸಾಯಿ,ರಾಜೇಶ ಭೋಸಗಿ, ಬಸವರಾಜ ತಂಗಡಿ, ರೋಟರಿ ಕ್ಲಬ್ ಆಫ್ ವೇಣುಗ್ರಾಮ ಸಂಸ್ಥೆಯ ಪದಾಧಿಕಾರಿಗಳು ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

# ಡಿ 5ರಿಂದ 8ರವರೆಗೆ ಡಾ. ಶಿವಬಸವಸ್ವಾಮೀಜಿ 134ನೇ ಜಯಂತಿ ಮಹೋತ್ಸವ

ಬೆಳಗಾವಿ: ಡಿಸೆಂಬರ್ ತಿಂಗಳ 5 ರಿಂದ 8 ರವರೆಗೆ ನಾಗನೂರು ರುದ್ರಾಕ್ಷಿ ಮಠದ ಲಿಂಗೈಕ್ಯ ಕಾಯಕಯೋಗಿ, ಮಹಾಪ್ರಸಾದಿ, ಡಾ.ಶಿವಬಸವ ಮಹಾ ಸ್ವಾಮಿಗಳವರ 134 ನೆಯ ಜಯಂತಿ ಮಹೋತ್ಸವ ಆಚರಿಸಲಾಗುತ್ತಿದೆ ಎಂದು ಶ್ರೀ ಮಠದ ಪ್ರಕಟಣೆ ತಿಳಿಸಿದೆ.

ಗದುಗಿನ ತೋಂಟದಾರ್ಯ ಸಂಸ್ಥಾನಮಠದ ಜಗದ್ಗುರು ಡಾ.ತೋಂಟದ ಸಿದ್ದರಾಮ ಮಹಾ ಸ್ವಾಮಿಜಿವರ ಸನ್ನಿಧಾನದಲ್ಲಿ ನಡೆಯಲಿರುವ ಈ ಕಾರ್ಯಕ್ರಮದ ನೇತೃತ್ವವನ್ನು ಬೆಳಗಾವಿ ನಾಗನೂರು ರುದ್ರಾಕ್ಷಿ ಮಠದ ಪೀಠಾಧಿಕಾರಿ ಡಾ. ಅಲ್ಲಮಪ್ರಭು ಮಹಾಸ್ವಾಮೀಜಿಯವರು ವಹಿಸಲಿದ್ದಾರೆ.

ಬೆಳಗಾವಿ ಶಿವಬಸವ ನಗರದಲ್ಲಿರುವ ಆರ್.ಎನ್. ಶೆಟ್ಟಿ ಪಾಲಿಟೆಕ್ನಿಕ್ ಕಾಲೇಜಿನ ಆವರಣದಲ್ಲಿ ನಡೆಯಲಿರುವ ಈ ಕಾರ್ಯ ಕ್ರಮದಲ್ಲಿ ಮಂಗಳವಾರ ದಿನಾಂಕ 5 ರಂದು ಮುಂಜಾನೆ 9.30 ಗಂಟೆಗೆ ಶೆಗುಣಿಶಿ ವಿರಕ್ತಮಠದ ಮಹಾಂತ ಪ್ರಭು ಮಹಾ ಸ್ವಾಮೀಜಿಯವರು ಷಟಸ್ಥಲ ಧ್ವಜಾರೋಹಣ ನೆರವೇರಿಸುವುದರೊಂದಿಗೆ ನಾಲ್ಕು ದಿನಗಳ ಕಾರ್ಯಕ್ರಮಗಳಿಗೆ ಚಾಲನೆ ನೀಡಲಿದ್ದಾರೆ.

ಅದೇ ದಿವಸ ಸಂಜೆ 6 ಗಂಟೆಗೆ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಜರುಗಲಿದ್ದು ಸಾನಿಧ್ಯವನ್ನು ಬೆಳಗಾವಿ ಕಾರಂಜಿ ಮಠದ ಶ್ರೀ ಗುರುಸಿದ್ಧ ಮಹಾಸ್ವಾಮೀಜಿಯವರು ವಹಿಸಲಿದ್ದು ಅಧ್ಯಕ್ಷತೆಯನ್ನು ಹುಕ್ಕೇರಿ ವಿರಕ್ತಮಠದ ಶ್ರೀ.ಶಿವಬಸವ ಮಹಾಸ್ವಾಮಿಜಿಯವರು ವಹಿಸಲಿದ್ದಾರೆ.

ಸಮ್ಮುಖದಲ್ಲಿ ಶಿವಪುರ ಕೆ.ಎಚ್. ನ ಶಿವಲಿಂಗೇಶ್ವರ ಮಠದ ಶ್ರೀ. ಅಭಿನವ ಶಿವಲಿಂಗ ಮಹಾಸ್ವಾಮಿಗಳು ಉಪಸ್ಥಿತರಿರಲಿದ್ದಾರೆ. ಮುದುಗಲ್ ತಿಮ್ಮಾಪೂರದ ಕಲ್ಯಾಣಾಶ್ರಮದ ಶ್ರೀ. ಮಹಾಂತ ಸ್ವಾಮೀಜಿ ಅವರಿಗೆ ಗೌರವ ಸನ್ಮಾನ ನೀಡಲಾಗುತ್ತಿದೆ.

ಅದೇ ರೀತಿ "ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರತರಾದ" ವಿಜಯಪುರದ ಶ್ರೀ ಫ.ಗು. ಸಿದ್ದಾಪುರ, ಇಳಕಲ್ಲದ ಡಾ. ಶಂಭು ಬಳಿಗಾರ, ಎಂ ಕೆ ಹುಬ್ಬಳ್ಳಿಯ ಡಾ.ಬಾಳೇಶ್ ಭಜಂತ್ರಿ ಅವರನ್ನು ಸನ್ಮಾನಿಸಲಾಗುತ್ತಿದೆ.

ಶ್ರೀ.ಮಠದಿಂದ ಕೊಡ ಮಾಡಲಾಗುವ "ಕನ್ನಡ ನುಡಿಶ್ರೀ" ಪ್ರಶಸ್ತಿಯನ್ನು ನಿಪ್ಪಾಣಿಯ ಶ್ರೀ.ಮಿಥುನ್ ಅಂಕಲಿ , ಅಥಣಿಯ ಶ್ರೀ. ಚನ್ನಯ್ಯ ಹಿಟ್ನಾಳಮಠ, ಬೆಳಗಾವಿಯ ಶ್ರೀ. ಮಹಬೂಬ್ ಮಕಾಂದರ್, ಸಂಕ್ ಗ್ರಾಮದ ಶ್ರೀ.ಆರ್. ಜಿ. ಬಿರಾದರ್ ಅವರುಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಎರಡನೇ ದಿನವಾದ ದಿ.6 ಬುಧವಾರದಂದು ಸಂಜೆ 6 ಗಂಟೆಗೆ ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳ ಸಮಾವೇಶ ಹಾಗೂ "ಆತ್ಮ ಸ್ವಾಸ್ಥ್ಯ ಶ್ರೀ" ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ನಡೆಯಲಿದೆ.

ಈ ಕಾರ್ಯಕ್ರಮದ ಸಾನಿಧ್ಯವನ್ನು ಅರಭಾವಿ– ಕಡೋಲಿಯ ದುರದುಂಡೇಶ್ವರ ಸಿದ್ಧ ಸಂಸ್ಥಾನ ಮಠದ ಶ್ರೀ. ಗುರುಬಸವಲಿಂಗ ಮಹಾಸ್ವಾಮಿಗಳು ವಹಿಸಲಿದ್ದು, ಸಮಾರಂಭದ ನೇತೃತ್ವವನ್ನು ಅಥಣಿಯ ಮೋಟಗಿಮಠದ ಶ್ರೀ.ಪ್ರಭು ಚನ್ನಬಸವ ಮಹಾಸ್ವಾಮಿಗಳು ವಹಿಸಲಿದ್ದಾರೆ, ಸಮ್ಮುಖದಲ್ಲಿ ರಾವೂರ್ ವಿರಕ್ತ ಮಠದ ಶ್ರೀ. ಸಿದ್ದಲಿಂಗ ಮಹಾಸ್ವಾಮಿಗಳು ಉಪಸ್ಥಿತರಿರಲಿದ್ದಾರೆ. ಅಧ್ಯಕ್ಷತೆಯನ್ನು ನಾಗನೂರು ರುದ್ರಾಕ್ಷಿ ಮಠದ ಪ್ರಸಾದ ನಿಲಯಗಳ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಬಸವರಾಜ ರೊಟ್ಟಿ ವಹಿಸಲಿದ್ದಾರೆ.

ಮುಂಬೈನ ಆಧ್ಯಾತ್ಮ ಕೇಂದ್ರ ಭಕ್ತಿ ವೇದಾಂತ ಆಸ್ಪತ್ರೆಯ ಪ್ರಾಧ್ಯಾಪಕರಾದ ಶ್ರೀಮತಿ. ಡಾ.ಕೋಮಲ್ ದಲಾಲ ಅವರಿಗೆ "ಆತ್ಮ ಸ್ವಾಸ್ಥ್ಯ ಶ್ರೀ" ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು.



ಇದೇ ಸಂದರ್ಭದಲ್ಲಿ ಶ್ರೀಮಠದಿಂದ ಕೊಡೆಮಾಡಲಾಗುವ "ಪ್ರಸಾದ ಶ್ರೀ ಗೌರವ" ಪ್ರಶಸ್ತಿಯನ್ನು ಬೆಳಗಾವಿಯ ಶ್ರೀ. ವೈ .ಎನ್. ಶಿಂತ್ರೆ , ಶೇಗುಣಸಿಯ ಶ್ರೀ. ಮಲ್ಲಪ್ಪ ಬಸಗೌಡ ಗೌಡಪ್ಪನವರ್, ಬೆಳಗಾವಿಯ ಶ್ರೀ. ಬಸಲಿಂಗಪ್ಪ ರುದ್ರಪ್ಪ ಮೆಳವಂಕಿ, ಬೆಳಗಾವಿಯ ಶ್ರೀ ಜಿ.ಎನ್. ಪಾಟೀಲ್ ಇವರುಗಳಿಗೆ ನೀಡಿ ಗೌರವಿಸಲಾಗುತ್ತಿದೆ.

ಮೂರನೇ ದಿನವಾದ ಗುರುವಾರ ದಿ. 7ರಂದು 1969 ರಲ್ಲಿ ಲಿಂಗೈಕ್ಯ ಡಾ. ಶಿವಬಸವ ಮಹಾಸ್ವಾಮಿಗಳವರಿಂದ ಸ್ಥಾಪಿತಗೊಂಡ ಶ್ರೀ. ಸಿದ್ದರಾಮೇಶ್ವರ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಯ ಸುವರ್ಣ ಮಹೋತ್ಸವ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮವನ್ನು ನಿವೃತ್ತ ಐಎಎಸ್ ಅಧಿಕಾರಿ ಎಸ್. ಎಂ.ಜಾಮದಾರ ಉದ್ಘಾಟಿಸಲಿದ್ದಾರೆ. ಸಾನಿಧ್ಯವನ್ನು ಹುಬ್ಬಳ್ಳಿ ಮೂರುಸಾವಿರ ಮಠದ ಜಗದ್ಗುರು ಡಾ.ಗುರುಸಿದ್ದ ರಾಜ ಯೋಗಿಂದ್ರ ಮಹಾಸ್ವಾಮಿಗಳು ವಹಿಸಲಿದ್ದು, ಅಧ್ಯಕ್ಷತೆಯನ್ನು ಹಂದಿಗುದ ವಿರಕ್ತಮಠದ ಶ್ರೀ. ಶಿವಾನಂದ ಮಹಾಸ್ವಾಮಿಗಳು ವಹಿಸಲಿದ್ದು, ನೇತೃತ್ವವನ್ನು ಚೆನ್ನಮ್ಮನ ಕಿತ್ತೂರಿನ ರಾಜಗುರು ಸಂಸ್ಥಾನ ಕಲ್ಮಠದ ಶ್ರೀ.ಮಡಿವಾಳ ರಾಜ ಯೋಗಿಂದ್ರ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಪಿಜಿ ಹುಣಶ್ಯಾಳದ ಸಿದ್ಧಲಿಂಗ ಕೈವಲ್ಯಾ ಶ್ರಮದ ಶ್ರೀ. ನಿಜಗುಣ ದೇವರು ಅವರಿಗೆ ಷಷ್ಠಿಪೂರ್ತಿ ಅಭಿನಂದನೆ ಸಲ್ಲಿಸಲಾಗುತ್ತಿದೆ.

ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿ ಶ್ರೀ.ಕೆ.ಬಿ.ಗುಡಿಸಿ ಅವರು ಸ್ಮರಣ ಸಂಚಿಕೆಯನ್ನು ಲೋಕಾರ್ಪಣೆಗೊಳಿಸಲಿದ್ದಾರೆ, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಶ್ರೀ.ಶರಣಗೌಡ ಬಯ್ಯಾಪುರ, ಬಾಗಲಕೋಟೆಯ ಹೆಚ್ಚುವರಿ ವಿಶೇಷ ಭೂಸ್ವಾಧೀನಾಧಿಕಾರಿ ಶ್ರೀ.ಶಶಿಧರ ಬಗಲಿ, ಪುಣೆಯ ಉದ್ಯಮಿ ಶ್ರೀ. ಅಣ್ಣಾರಾಯ ಬಿರಾದಾರ್, ವಿಜಯಪುರದ ಕೈಗಾರಿಕಾ ಇಲಾಖೆ ವಿಶೇಷ ಕರ್ತವ್ಯಾಧಿಕಾರಿ ಶ್ರೀ. ಮಹಾಂತೇಶ್ ಬಿರಾದರ್, ಬೆಳಗಾವಿಯ ಹಿರಿಯ ನ್ಯಾಯವಾದಿ ಶ್ರೀ. ದಿನೇಶ್ ಪಾಟೀಲ್, ಕೊಪ್ಪಳದ ಅಧ್ಯಕ್ಷ ಶ್ರೀ.ಶಿವಾನಂದ ಮೂಲಿಮನಿ, ನಕ್ಕುಂದಿಯ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಶ್ರೀ.ಮಲ್ಲನಗೌಡ ಪಾಟೀಲ್, ಮುಂಡರಗಿಯ ಎಇಇ ಶ್ರೀ. ಅಶೋಕ್ ಕಣವಿ ಮತ್ತು ವೈದ್ಯ ಡಾ.ಈಶ್ವರ ಕಣಬೂರ ಇವರುಗಳು ಆಗಮಿಸಲಿದ್ದಾರೆ.

ನಾಲ್ಕನೆಯ ದಿನವಾದ ಶುಕ್ರವಾರ ದಿ.8 ರಂದು ಮುಂಜಾನೆ 10.30 ಗಂಟೆಗೆ ಲಿಂಗೈಕ್ಯ ಡಾ.ಶಿವಬಸವ ಮಹಾಸ್ವಾಮಿಗಳವರ 134 ನೇ ಜಯಂತಿ ಮಹೋತ್ಸವ ಮತ್ತು ಸೇವಾ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಅಲ್ಲದೆ ಶ್ರೀ.ಸಿದ್ದರಾಮೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಬಾಳೆಕುಂದ್ರಿ ತಾಂತ್ರಿಕ ಮಹಾವಿದ್ಯಾಲಯದ ಕಂಪ್ಯೂಟರ್ ವಿಭಾಗದ ನೂತನ ಕಟ್ಟಡದ ಉದ್ಘಾಟನೆ ನಡೆಯಲಿದೆ.

ಕಾರ್ಯಕ್ರಮಗಳ ಸಾನಿಧ್ಯವನ್ನು ಗದುಗಿನ ತೋಂಟದಾರ್ಯ ಮಠದ ಜಗದ್ಗುರು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ವಹಿಸಲಿದ್ದು, ಅಧ್ಯಕ್ಷತೆಯನ್ನು ಬೈಲೂರು ನಿಷ್ಕಲ ಮಂಟಪದ ಶ್ರೀ. ನಿಜಗುಣಾನಂದ ಮಹಾ ಸ್ವಾಮಿಗಳು ವಹಿಸಲಿದ್ದಾರೆ.

ನೇತೃತ್ವವನ್ನು ಕಲಬುರ್ಗಿ ಗಚ್ಚಿನಮಠದ ಶ್ರೀ. ಶಿವಬಸವ ಮಹಾಸ್ವಾಮಿಗಳು ವಹಿಸಲಿದ್ದು ಸಮ್ಮುಖದಲ್ಲಿ ಕಲಬುರ್ಗಿ ಗದ್ದುಗೆ ಮಠದ ಶ್ರೀ.ಚರಲಿಂಗ ಮಹಾಸ್ವಾಮಿಗಳು ಉಪಸ್ಥಿತರಿರಲಿದ್ದಾರೆ.

ಶ್ರೀ ಮಠದಿಂದ ಕೊಡ ಮಾಡಲಾಗುವ "ಸೇವಾರತ್ನ ಪ್ರಶಸ್ತಿ" ಯನ್ನು ಗದುಗಿನ ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಶ್ರೀ. ಸಿದ್ದಲಿಂಗ ಪಟ್ಟಣಶೆಟ್ಟಿ, ಗೋಕಾಕದ ವಿಶ್ರಾಂತ ಪ್ರಾಧ್ಯಾಪಕ ಶ್ರೀ.ಸಿ ಕೆ ನಾವಲಗಿ, ಬೈಲಹೊಂಗಲದ ಶ್ರೀ. ಮುರಿಗೆಪ್ಪ ಜಿಗಿಜಿನ್ನಿ, ಘಟಪ್ರಭಾದ ಶ್ರೀ.ಜಿ.ಎ. ಪತ್ತಾರ , ಗದುಗಿನ ಅನರ್ಘ್ಯ ಸಂಗೀತ ಪಾಠಶಾಲೆಯ ಶ್ರೀಮತಿ. ವನಮಾಲಾ ಮಾನಶೆಟ್ಟಿ, ಬೆಳಗಾವಿಯ ಶ್ರೀ. ಸಿ .ಎಂ. ಬೂದಿಹಾಳ ಇವರುಗಳಿಗೆ ನೀಡಿ ಗೌರವಿಸಲಾಗುವುದು. ಇದೇ ಸಂದರ್ಭದಲ್ಲಿ ಹಲವು ಗ್ರಂಥಗಳು ಲೋಕಾರ್ಪಣೆಗೊಳ್ಳಲಿವೆ.

ಸಂಪುಟ: 4 ಸಂಚಿಕೆ: 254 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089